ಸಂಪುಟ: 05 ಸಂಚಿಕೆ: 323 ಪುಟಗಳು: 08 ಗುರುವಾರ 05 ಫೆಬ್ರವರಿ 2026

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**

ವಿಸ್ತಾರವಾಗುತ್ತ ಹೋಗುವುದು ಜೀವನ. ಸಂಕುಚಿತವಾಗುತ್ತ ಸಾಗುವುದೇ ಸಾವು. ಪ್ರೀತಿಯೇ ಜೀವನ, ದ್ವೇಷವೇ ಸಾವು.

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

# ರಾಜ್ಯಕ್ಕೆ ಮತ್ತೊಂದು ಹೈ ಸ್ಪೀಡ್ ರೈಲು ಕಾರಿಡಾರ್ ಭರವಸೆ

• ಉದಯವಾಹಿನಿ, ನವದೆಹಲಿ

ಕೇಂದ್ರ ಸರ್ಕಾರದ 2026 ನೇ ಸಾಲಿನ ಬಜೆಟ್‌ನಲ್ಲಿ ದೇಶದಲ್ಲಿ ಒಟ್ಟು ಏಳು ಹೈ ಸ್ಪೀಡ್ ರೈಲು ಕಾರಿಡಾರ್ ಘೋಷಿಸಲಾಗಿದೆ. ಇದೀಗ ಕರ್ನಾಟಕಕ್ಕೆ ಮತ್ತೊಂದು ಹೈ ಸ್ಪೀಡ್ ರೈಲು ಕಾರಿಡಾರ್ ಕೊಡುಗೆ ನೀಡುವ ಶುಭ ಸೂಚನೆ ಸಿಕ್ಕಿದೆ.



ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಹ್ಲಾದ್ ಜೋಶಿ ಅವರ ಒತ್ತಾಸೆ ಮೇರೆಗೆ ಕರ್ನಾಟಕದಲ್ಲಿ ಬೆಂಗಳೂರು ಮತ್ತು ಪುಣೆ ನಡುವೆ ಮತ್ತೊಂದು ಹೈ ಸ್ಪೀಡ್ ರೈಲು ಕಾರಿಡಾರ್‌ಗೆ ಚಿಂತನೆ ನಡೆದಿದ್ದು, ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ ಅವರು ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ.

**ಪ್ರಹ್ಲಾದ್ ಜೋಶಿ ಭೇಟಿ, ಮನವಿ:** ಬೆಂಗಳೂರು ಮತ್ತು ಪುಣೆ ನಡುವೆ ಹೈ ಸ್ಪೀಡ್ ರೈಲು ಕಾರಿಡಾರ್ ನಿರ್ಮಾಣಕ್ಕಾಗಿ ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರು ಬುಧವಾರ ಬೆಳಗ್ಗೆ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರನ್ನು ಭೇಟಿ ಮಾಡಿ ಮನವಿ ಮಾಡಿದ್ದು, ರೈಲ್ವೆ ಸಚಿವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ಜೋಶಿ ತಿಳಿಸಿದ್ದಾರೆ. ಬೆಂಗಳೂರು-ಪುಣೆ ಮಧ್ಯೆ ಹೈ ಸ್ಪೀಡ್ ರೈಲು ಕಾರಿಡಾರ್ ನಿರ್ಮಾಣವಾದಲ್ಲಿ ಕರ್ನಾಟಕದ ಬಹುತೇಕ ಪ್ರದೇಶದ ಒಟ್ಟಾರೆ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದು ಸಚಿವ ಪ್ರಹ್ಲಾದ್ ಜೋಶಿ ಅವರು ರೈಲ್ವೆ ಸಚಿವರಿಗೆ ಮನವರಿಕೆ ಮಾಡಿಕೊಟ್ಟಿದ್ದಾರೆ.

**ರೈಲ್ವೆ ಸಚಿವ ಸಕಾರಾತ್ಮಕ ಪ್ರತಿಕ್ರಿಯೆ**

**ಯಾವೆಲ್ಲಾ ಜಿಲ್ಲೆಗೆ ಅನುಕೂಲ:** ಈ ರೈಲು ಕಾರಿಡಾರ್ ನಿರ್ಮಾಣದಿಂದ ಮಧ್ಯ ಕರ್ನಾಟಕ ಮತ್ತು ಉತ್ತರ ಕರ್ನಾಟಕಕ್ಕೆ ಹೆಚ್ಚಿನ ಪ್ರಯೋಜನ ಆಗಲಿದೆ. ರಾಜ್ಯದ ಬೆಳಗಾವಿ, ಹುಬ್ಬಳ್ಳಿ, ಹಾವೇರಿ, ದಾವಣಗೆರೆ, ಚಿತ್ರದುರ್ಗ ಮತ್ತು ತುಮಕೂರು ಜಿಲ್ಲೆಗಳಿಗೆ ಹೆಚ್ಚಿನ ಅನುಕೂಲವಾಗುತ್ತದೆ. ಅಲ್ಲದೇ ಪುಣೆಯಿಂದ ಕರ್ನಾಟಕದ ಆರೇಳು ಜಿಲ್ಲೆಗಳಿಗೆ ತ್ವರಿತ ಪ್ರಯಾಣ, ಸಂಪರ್ಕ ಸಾಧ್ಯವಾಗಲಿದೆ.

ಹಾಗಾಗಿ ಇದೊಂದು ಹೊಸ ಹೈ ಸ್ಪೀಡ್ ರೈಲು ಕಾರಿಡಾರ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳುವಂತೆ ಸಚಿವ ಪ್ರಹ್ಲಾದ್ ಜೋಶಿ ಒತ್ತಾಯಿಸಿದ್ದಾರೆ. ಜೋಶಿ ಅವರ ಮನವಿಗೆ ರೈಲ್ವೆ ಸಚಿವರೂ ಸಕಾರಾತ್ಮಕ ರೀತಿ ಪ್ರತಿಕ್ರಿಯಿಸಿದ್ದು, ಭರವಸೆ ನೀಡಿದ್ದಾರೆ.

## ದೇವೇಗೌಡರ ಭಾವುಕ ನುಡಿಗಳಿಗೆ ಮೌನವಾದ ರಾಜ್ಯಸಭೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯ ಎದುರಿಸುತ್ತಿರುವ ನೀರಾವರಿ ಸಮಸ್ಯೆಗಳ ಬಗ್ಗೆ ರಾಜ್ಯಸಭಾ ಸದಸ್ಯ ಎಚ್.ಡಿ.ದೇವೇಗೌಡ್ರು, ರಾಜ್ಯಸಭೆಯಲ್ಲಿ ಆಡಿದ ಮಾತಿಗೆ ಸದನ ಮೌನವಾದ ವಿದ್ಯಮಾನ ನಡೆಯಿತು. ರಾಜ್ಯಸಭೆಯಲ್ಲಿ ಬುಧವಾರ (ಫೆ. 4) ನಡೆದ ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯ ಚರ್ಚೆಯಲ್ಲಿ ಭಾಗವಹಿಸಿ ದೇವೇಗೌಡರು ಮಾತನಾಡಿದರು ಕೇಂದ್ರ ಸರ್ಕಾರದ ಜಲಶಕ್ತಿ ಸಚಿವಾಲಯಕ್ಕೆ ಮನವಿ ಮಾಡಿದ ದೇವೇಗೌಡರು, ಕರ್ನಾಟಕದಲ್ಲಿ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿದೆ. ತುರ್ತಾಗಿ ಕೇಂದ್ರ ಸರ್ಕಾರ ಮಧ್ಯ ಪ್ರವೇಶಿಸಬೇಕು ಎಂದು ಮನವಿ ಮಾಡಿದರು.

ತಮ್ಮ ಭಾಷಣದ ವೇಳೆ ಹಲವು ಬಾರಿ ದೇವೇಗೌಡರು ಭಾವೋದ್ವೇಗಕ್ಕೆ ಒಳಗಾದರು. ರಾಜ್ಯ ಎದುರಿಸುತ್ತಿರುವ ನೀರಾವರಿ ಬಿಕ್ಕಟ್ಟಿನ ಬಗ್ಗೆ ರಾಜ್ಯಸಭೆಯಲ್ಲಿ ಗದ್ಗದಿತರಾಗಿ ಮಾತಾನಾಡಿದ ಮಾಜಿ ಪ್ರಧಾನಿ ಹಾಗೂ ಜೆಡಿಎಸ್ ರಾಷ್ಟ್ರೀಯ ಅಧ್ಯಕ್ಷರಾದ ಎಚ್‌ಡಿ ದೇವೇಗೌಡರು, ಕರ್ನಾಟಕದಲ್ಲಿ ಕುಡಿಯುವ ನೀರಿನ ಸಮಸ್ಯೆ ಗಂಭೀರವಾಗಿದೆ. ದಯಮಾಡಿ ಪರಿಹರಿಸಿ ಎಂದು ಕೇಂದ್ರ ಸರಕಾರವನ್ನು ಮನವಿ ಮಾಡಿಕೊಂಡರು.

## ಬೆಂಗಳೂರು ನಾಳೆಯಿಂದ ಅಂತರರಾಷ್ಟ್ರೀಯ ವಾಣಿಜ್ಯ ಮೇಳ

• ಉದಯವಾಹಿನಿ, ಬೆಂಗಳೂರು

'ಉತ್ಪಾದನೋತ್ತರ ಕೃಷಿ ರೈತರ ಸಬಲೀಕರಣ' ಪರಿಕಲ್ಪನೆಯಡಿ ರೈತರನ್ನು ಉದ್ಯಮಿಗಳನ್ನಾಗಿಸುವ ಆಶಯದಡಿ ಅಂತರರಾಷ್ಟ್ರೀಯ ವಾಣಿಜ್ಯ ಮೇಳ ಫೆ.6ರಿಂದ ಮೂರು ದಿನ ನಡೆಯಲಿದೆ.

ನಗರದ ಅರಮನೆ ಮೈದಾನದಲ್ಲಿ ಮೇಳ ನಡೆಯಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಫೆ.6ರಂದು ಮೇಳಕ್ಕೆ ಚಾಲನೆ ನೀಡಲಿದ್ದಾರೆ. ಕೇಂದ್ರದ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜಸಿಂಗ್ ಚೌಹಾಣ್ ಅವರು ಫೆ.8ರಂದು ನಡೆಯುವ ಸಮಾರೋಪದಲ್ಲಿ ಭಾಗವಹಿಸಲಿದ್ದಾರೆ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ಅವರು ಪತ್ರಿಕಾಗೋಷ್ಠಿಯಲ್ಲಿ ಬುಧವಾರ ತಿಳಿಸಿದರು. 'ಉತ್ಪಾದನೋತ್ತರ ಕೃಷಿ ವಿಷಯದ ಮೇಲೆ ದೇಶದಲ್ಲೇ ಮೊದಲ ಬಾರಿಗೆ ಮೇಳವನ್ನು ಆಯೋಜಿಸಲಾಗುತ್ತಿದೆ. ಸಂಸ್ಕರಣೆ ಮತ್ತು ಮೌಲ್ಯವರ್ಧನೆ, ಕೃಷಿ ಪರಿಸರ ವಿಜ್ಞಾನ, ಬ್ರಾಂಡಿಂಗ್ ಮತ್ತು ಕ್ರೆಡಿಟ್ ಸೇವೆ ಎಂಬ ಮೂರು ಉಪ ಪರಿಕಲ್ಪನೆಗಳಿವೆ. ಈ ಮೂಲಕ ರೈತರು ತಮ್ಮ ಬೆಳೆಯನ್ನು ಬ್ರಾಂಡಿಂಗ್ ಮಾಡಿ. ನೇರ ಮಾರುಕಟ್ಟೆಯಲ್ಲಿ ಒಂದರಿಂದ ನಾಲ್ಕು ಪಟ್ಟು ಲಾಭವನ್ನು ಗಳಿಸಿ ಕೃಷಿ ಉದ್ಯಮಿಗಳನ್ನಾಗಿ ಮಾಡುವ ಉದ್ದೇಶವಿದೆ' ಎಂದರು.

'ಕಾಂಗ್ರೆಸ್ ಸರ್ಕಾರ 2017ರಲ್ಲಿ ಆರಂಭಿಸಲಾದ ಸಿರಿಧಾನ್ಯ ಅಂತರರಾಷ್ಟ್ರೀಯ ವಾಣಿಜ್ಯ ಮೇಳ, ಕೋವಿಡ್ ಸಂದರ್ಭದಲ್ಲಿ ಮೂರು ವರ್ಷ ನಡೆದಿರಲಿಲ್ಲ.

ನಮ್ಮ ಸರ್ಕಾರ ಮತ್ತೆ ಅಧಿಕಾರಕ್ಕೆ ಬಂದ ಮೇಲೆ 2023 ರಿಂದ ಪ್ರತಿವರ್ಷ ಮೇಳವನ್ನು ಆಯೋಜಿಸಲಾಗುತ್ತಿದೆ. ಕಳೆದ ವರ್ಷ 10 ದೇಶ, 25 ರಾಜ್ಯಗಳ ಪ್ರತಿನಿಧಿಗಳು ಭಾಗವಹಿಸಿದ್ದರು.

## ಉನ್ನತ ಶಿಕ್ಷಣ: 2 ಸಾವಿರ ಬೋಧಕರ ನೇಮಕಕ್ಕೆ ಆದೇಶ

• ಉದಯವಾಹಿನಿ, ಬೆಂಗಳೂರು

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು, ಇಂಜಿನಿಯರಿಂಗ್ ಕಾಲೇಜುಗಳು, ಪಾಲಿಟೆಕ್ನಿಕ್‌ಗಳು ಹಾಗೂ ಯುವಿಸಿಇಯಲ್ಲಿ ಎರಡು ಸಾವಿರ ಬೋಧಕ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಉನ್ನತ ಶಿಕ್ಷಣ ಇಲಾಖೆ ಬುಧವಾರ ಆದೇಶ ಹೊರಡಿಸಿದೆ. ಪ್ರಥಮ ದರ್ಜೆ ಕಾಲೇಜುಗಳ 826 ಸಹಾಯಕ ಪ್ರಾಧ್ಯಾಕರು, ಪಾಲಿಟೆಕ್ನಿಕ್‌ಗಳ 941 ಉಪನ್ಯಾಸಕರು, ಇಂಜಿನಿಯರಿಂಗ್ ಕಾಲೇಜುಗಳ 186 ಸಹಾಯಕ ಪ್ರಾಧ್ಯಾಪಕರು ಹಾಗೂ ಯುವಿಸಿಇಯಲ್ಲಿ 47 ಬೋಧಕ ಹುದ್ದೆಗಳನ್ನು ಸರ್ಕಾರದ ನಿಯಮಾನುಸಾರ ಭರ್ತಿ ಮಾಡಬಹುದು ಎಂದು ಆದೇಶದಲ್ಲಿ ತಿಳಿಸಲಾಗಿದೆ. ಕಾಲಕಾಲಕ್ಕೆ ಅನ್ವಯವಾಗುವ ಮೀಸಲಾತಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಬೇಕು. ಕಲ್ಯಾಣ ಕರ್ನಾಟಕ ವೃಂದಕ್ಕೆ ಮೀಸಲಿರಿಸಿರುವ ಹುದ್ದೆಗಳನ್ನು ನಿಯಮಾನುಸಾರ ವರ್ಗೀಕರಿಸಬೇಕು. ವೃಂದ ಮತ್ತು ನೇಮಕಾತಿ ನಿಯಮಗಳ ಅನ್ವಯ ಅಗತ್ಯ ವಿದ್ಯಾರ್ಹತೆ ಹಾಗೂ ನೇಮಕಾತಿ ನಿಯಮಗಳನ್ನು ಪಾಲಿಸಬೇಕು ಎಂದು ಸೂಚಿಸಲಾಗಿದೆ.

ಅಬಕಾರಿ ಇಲಾಖೆಯಲ್ಲಿ 6000 ಕೋಟಿ ರೂ. ಕಿಕ್ ಬ್ಯಾಕ್ ಆರೋಪ ಕೇಳಿ ಬಂದಿದೆ. ಈ ಹಿನ್ನಲೆಯಲ್ಲಿ ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ ರಾಜೀನಾಮೆಗೆ ಪ್ರತಿಪಕ್ಷಗಳ ಪಟ್ಟು ಹಿಡಿದಿದೆ. ಹೀಗಾಗಿ ವಿಧಾನಸಭೆಯಲ್ಲಿ ಅಹೋರಾತ್ರಿ ಧರಣಿ ನಡೆಸುವ ಮೂಲಕ ಸರ್ಕಾರದ ಮೇಲೆ ಒತ್ತಡ ಕೂಡ ಹೇರಲಾಗಿದೆ. ಇದೀಗ ಈ ಬಗ್ಗೆ ಆರ್.ಬಿ ತಿಮ್ಮಾಪುರ ಪ್ರತಿಕ್ರಿಯೆ ನೀಡಿದ್ದು, ರಾಜೀನಾಮೆ ಬಗ್ಗೆ ಮಾತನಾಡಿದ್ದಾರೆ.




**ಅಬಕಾರಿ ಸಚಿವರ ರಾಜೀನಾಮೆ ಪಡೆಯುವಲ್ಲಿ ಯಶಸ್ವಿಯಾಗುತ್ತಾ ವಿಪಕ್ಷ**

**ಭ್ರಷ್ಟಾಚಾರದ ಬಗ್ಗೆ ಸಾಕ್ಷ್ಯ ನೀಡಲಿ ಎಂದ ತಿಮ್ಮಾಪುರ ಬಿಜೆಪಿ ಅಹೋರಾತ್ರಿ ಧರಣಿ**



# ಗದ್ದಲವೋ ಗದ್ದಲ ಸದನ ಕೋಲಾಹಲ

## ವಾಲ್ಮೀಕಿ ಹಗರಣದ ಬಳಿಕ ಅಬಕಾರಿ ಹಗರಣ ಬಿಜೆಪಿಗೆ ಬ್ರಹ್ಮಾಸ್ತ್ರ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದ ಅಬಕಾರಿ ಸಚಿವ ಆರ್.ಬಿ. ತಿಮ್ಮಾಪೂರ್ ತಮ್ಮ ಮೇಲಿರುವ ಭ್ರಷ್ಟಾಚಾರದ ಆರೋಪಗಳನ್ನು ತಳ್ಳಿಹಾಕಿ, ರಾಜೀನಾಮೆ ನೀಡುವ ಬಗ್ಗೆ ಮಾತನಾಡಿದ್ದಾರೆ.

ಯಾವುದೇ ಕಾರಣಕ್ಕೂ ರಾಜೀನಾಮೆ ಕೊಡುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟ ಪಡಿಸಿದ್ದಾರೆ.

ಮಾತನಾಡಿದ ಸಚಿವ ಆರ್.ಬಿ ತಿಮ್ಮಾಪುರ, ಯಾಕೆ ನಾನು ರಾಜೀನಾಮೆ ಕೊಡಬೇಕು ಏನು ತಪ್ಪು ಮಾಡಿದ್ದೇನೆ ಆಡಿಯೋದಲ್ಲಿ ನನ್ನ ಧ್ವನಿ ಏನಾದರೂ ಇದೆಯೇ.. ಎಂದು ಪ್ರಶ್ನಿಸಿದ್ದಾರೆ. ಈ ಆರೋಪಗಳು ರಾಜಕೀಯ ಪ್ರೇರಿತವಾಗಿದ್ದು, ತಮ್ಮ ತೇಜೋವಧೆ ಮಾಡುವ ಉದ್ದೇಶದಿಂದ ಬಂದಿವೆ ಎಂದು ಅವರು ಆರೋಪಿಸಿದ್ದಾರೆ.

ಯಾದಗಿರಿ ಜಿಲ್ಲಾ ಅಬಕಾರಿ ಡಿಸಿ ಜಗದೀಶ್ ನಾಯಕ್ ಅವರು ಬಾರ್ ಲೈಸೆನ್ಸ್ ನೀಡಲು ಲಂಚ ಕೇಳಿದ್ದರ ಬಗ್ಗೆ ಆಡಿಯೋ ಕ್ಲಿಪ್ ವೈರಲ್ ಆಯಿತು. ಈ ಆಡಿಯೋದಲ್ಲಿ ಸಚಿವ ತಿಮ್ಮಾಪೂರ್ ಅವರ ಹೆಸರು ಕೇಳಿ ಬಂದಿದ್ದು, ಅವರ ಮೇಲೆ ಆರೋಪಗಳು ಬಿದ್ದವು. ಲೋಕಾಯುಕ್ತಕ್ಕೆ ದೂರು ನೀಡಿದ್ದು, ಲಕ್ಷ್ಮೀನಾರಾಯಣ ಎಂಬವರು ಸಚಿವರ ಪಾತ್ರದ ಬಗ್ಗೆ ತನಿಖೆಗೆ ಆಗ್ರಹಿಸಿದ್ದರು. ವಿಧಾನಸಭೆಯಲ್ಲಿ ಈ ವಿಷಯ ದೊಡ್ಡ ಗದ್ದಲಕ್ಕೆ ಕಾರಣವಾಯಿತು. ಫೆಬ್ರವರಿ 3ರಂದು ವಿಪಕ್ಷ ನಾಯಕ ಆರ್. ಅಶೋಕ್ ಅವರು ಪೆನ್‌ಡ್ರೈವ್ ಮತ್ತು ಕರಪತ್ರಗಳನ್ನು ಪ್ರದರ್ಶಿಸಿ ಸಚಿವರ ರಾಜೀನಾಮೆಗೆ ಪಟ್ಟು ಹಿಡಿದರು.

ತಿಮ್ಮಾಪೂರ ತಮ್ಮ ಹೇಳಿಕೆಯಲ್ಲಿ, 'ಲೋಕಾಯುಕ್ತಕ್ಕೆ ದೂರು ಕೊಟ್ಟವನ ಇತಿಹಾಸ ಗೊತ್ತಾ ನಕಲಿ ಸರ್ಟಿಫಿಕೇಟ್ ಕೊಟ್ಟು ಲೈಸೆನ್ಸ್ ಕೇಳಿದವನು. ಅವರು ಹೇಳಿದಂತೆ ನಾನು ಉತ್ತರ ಕೊಡಬೇಕೇ' ಎಂದು ಪ್ರಶ್ನಿಸಿದ್ದಾರೆ. ಅವರು ಧರಣಿ ಮಾಡಲಿ, ಏನು ಬೇಕಾದರೂ ಮಾಡಲಿ, ನಾನು ಹೆದರುವುದಿಲ್ಲ ಎಂದು ಹೇಳಿದ್ದಾರೆ. ಭ್ರಷ್ಟಾಚಾರದ ಬಗ್ಗೆ ಸಾಕ್ಷ್ಯ ನೀಡಿದರೆ ಆ ಕ್ಷಣವೇ ರಾಜೀನಾಮೆ ನೀಡುತ್ತೇನೆ ಎಂದು ಸವಾಲು ಹಾಕಿದ್ದಾರೆ. ಈ ವಿವಾದದಿಂದ ಕರ್ನಾಟಕ ರಾಜಕಾರಣದಲ್ಲಿ ಉದ್ವಿಗ್ನತೆ ಮೂಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಸಚಿವರಿಂದ ಮಾಹಿತಿ ಕೇಳಿದ್ದಾರೆ. ವಿಪಕ್ಷಗಳು ಅಬಕಾರಿ ಇಲಾಖೆಯಲ್ಲಿ ಕೋಟ್ಯಂತರ ಹಗರಣ ನಡೆದಿದೆ ಎಂದು ಆರೋಪಿಸುತ್ತಿವೆ. ಬಿಜೆಪಿ ನಾಯಕರು ಇದನ್ನು ಕಾಂಗ್ರೆಸ್ ಸರ್ಕಾರದ ವೈಫಲ್ಯ ಎಂದು ಕರೆದಿದ್ದಾರೆ. ಲೋಕಾಯುಕ್ತ ತನಿಖೆ ನಡೆಯುತ್ತಿದ್ದು, ಸಚಿವರ ಪಾತ್ರದ ಬಗ್ಗೆ ಸ್ಪಷ್ಟತೆ ಬರಬೇಕಿದೆ. ಆರ್.ಬಿ. ತಿಮ್ಮಾಪೂರ್ ಲಿಂಗಸುಗೂರು ಕ್ಷೇತ್ರದ ಶಾಸಕರಾಗಿದ್ದು, ಕಾಂಗ್ರೆಸ್ ಪಕ್ಷದಿಂದ ಸಚಿವರಾಗಿದ್ದಾರೆ. ಅವರು ತಮ್ಮನ್ನು ನಿರಪರಾಧಿ ಎಂದು ಸಾಬೀತುಪಡಿಸುವ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಈ ಘಟನೆಯಿಂದ ಸರ್ಕಾರಕ್ಕೆ ತೊಂದರೆಯಾಗಿದ್ದು, ವಿಧಾನಸಭೆಯಲ್ಲಿ ಮತ್ತಷ್ಟು ಗದ್ದಲ ನಿರೀಕ್ಷಿಸಲಾಗಿದೆ. ಇಂತಹ ಆರೋಪಗಳು ರಾಜಕಾರಣದಲ್ಲಿ ಸಾಮಾನ್ಯ. ಆದರೆ ಸಾಕ್ಷ್ಯಾಧಾರಗಳು ಬರದಿದ್ದರೆ ಅವುಗಳು ರಾಜಕೀಯ ದುರುದ್ದೇಶದಿಂದ ಬರುತ್ತವೆ ಎಂಬುದು ಸಚಿವರ ವಾದ. ಜನರು ಸತ್ಯ ತಿಳಿದುಕೊಳ್ಳಬೇಕು ಎಂದು ವಿಪಕ್ಷಗಳು ಪಟ್ಟು ಹಿಡಿದಿದೆ. ಸದನದಲ್ಲಿ ದೋಸ್ತಿ ನಾಯಕರಿಂದ ಅಹೋರಾತ್ರಿ ಪ್ರತಿಭಟನೆ: ಕರ್ನಾಟಕವು ಕಾಂಗ್ರೆಸ್ ಹೈಕಮಾಂಡಿಗೆ ಎಟಿಎಂ ಆಗಿ ಪರಿವರ್ತನೆಯಾಗಿದೆ. ರಾಜೀನಾಮೆ ಕೊಡದಂತೆ ಅಬಕಾರಿ ಸಚಿವರ ಮೇಲೂ ಒತ್ತಡ ಇದೆ. ಅವರು ರಾಜೀನಾಮೆ ಕೊಟ್ಟರೆ ಅದು ಯಾರ‍್ಯಾರ ಬುಡಕ್ಕೆ ಬರುತ್ತದೋ ಗೊತ್ತಿಲ್ಲ. ಹಾಗಾಗಿ ಅವರನ್ನು ರಕ್ಷಿಸುವ ಕೆಲಸವನ್ನು ಕಾಂಗ್ರೆಸ್ ಸರಕಾರ ಮಾಡುತ್ತಿದೆ ಎಂದು ಆರೋಪಿಸಿದರು. ಬಿಜೆಪಿ- ಜೆಡಿಎಸ್ ಅಹೋರಾತ್ರಿ ಧರಣಿ ಮಾಡಿದ್ದೇವೆ. ಹೋರಾಟ ಮುಂದುವರೆಯಲಿದೆ ಎಂದು ಪ್ರಕಟಿಸಿದರು.

### ಅಬಕಾರಿ ಇಲಾಖೆಯಲ್ಲಿ ಟಾರ್ಗೆಟ್

ಸರಕಾರದ ಬ್ರಹ್ಮಾಂಡ ಭ್ರಷ್ಟಾಚಾರವು ಇವತ್ತು ಅಬಕಾರಿ ಇಲಾಖೆಗೂ ಬಂದು ತಲುಪಿದೆ. ಸರಕಾರವು ಗ್ಯಾರಂಟಿಗಳಿಗೆ ಹಣ ಕ್ರೋಢೀಕರಿಸಲು ಸಾಧ್ಯವಾಗದೇ ಅಬಕಾರಿ ಇಲಾಖೆಯಲ್ಲಿ ಟಾರ್ಗೆಟ್ ಹೆಚ್ಚಿಸಿ ಕರ್ನಾಟಕವನ್ನ ಕುಡುಕರ ರಾಜ್ಯವಾಗಿ ಮಾಡುತ್ತಿದೆ. ಮನಸೋಇಚ್ಚೆ ಲಿಕ್ಕರ್ ಲೈಸನ್ಸ್ ನೀಡಲಾಗುತ್ತಿದೆ. ಸರಕಾರದ ನೀತಿಯ ಪರಿಣಾಮವಾಗಿ 500 ಮೀ.ಗೆ ಒಂದರಂತೆ ಲಿಕ್ಕರ್ ಅಂಗಡಿ ಸಿಗುವಂತಾಗಿದೆ. ಯಾವುದೇ ಇಲಾಖೆಯನ್ನು ತೆಗೆದುಕೊಂಡರೂ ಇಷ್ಟೊಂದು ಭ್ರಷ್ಟಾಚಾರ ನಡೆಯುತ್ತಿದೆ. ಅಬಕಾರಿ ಇಲಾಖೆಯಲ್ಲಿ 6 ಸಾವಿರ ಕೋಟಿ ಹಗರಣ ಎಂದು ಅದರ ಅಧ್ಯಕ್ಷರೂ ಬಹಿರಂಗವಾಗಿ ಹೇಳಿದ್ದಾರೆ ಎಂದು ಗಮನ ಸೆಳೆದರು.


1. ವಿಧಾನಸಭೆ ಜಂಟಿ ಅಧಿವೇಶನದಲ್ಲಿ ಬಿಜೆಪಿ ಜೆಡಿಎಸ್ ಸದಸ್ಯರ ಅಹೋರಾತ್ರಿ ಹೋರಾಟ
2. ಪ್ರತಿಭಟನೆಯಲ್ಲಿ ರಾಜ್ಯ ಸರ್ಕಾರಕ್ಕೆ ಚಾಟಿ ಬೀಸಿದ ವಿಪಕ್ಷ ನಾಯಕ ಆರ್ ಅಶೋಕ್
3. ವಿಪಕ್ಷ ಸದಸ್ಯರ ಪ್ರತಿಭಟನೆಗೆ ಸ್ಪೀಕರ್ ಯು.ಟಿ ಖಾದರ್ ತಿರುಗೇಟು

### ಅಶೋಕ್ ಮಾಡಿದ ಆರೋಪ



ಸರ್ಕಾರದಲ್ಲಿ ಅಬಕಾರಿ ಇಲಾಖೆಯು ಭ್ರಷ್ಟಾಚಾರದ ಅಪರಾಧಿ ನಂ.1 ಇಲಾಖೆಯಾಗಿದೆ. ಲೈಸೆನ್ಸ್‌ಗೆ ಲಂಚ, ವರ್ಗಾವಣೆಗೆ ಹಣ ಫಿಕ್ಸ್ ಹೀಗೆ ಮೊದಲಾದ ರೀತಿಯಲ್ಲಿ ಅಕ್ರಮ ನಡೆಯುತ್ತಿದೆ. ಮದ್ಯದಂಗಡಿಗಳು ಸಾಕಷ್ಟು ಪ್ರಮಾಣದ ಮದ್ಯ ಸಂಗ್ರಹಿಸಿ ಇಟ್ಟುಕೊಂಡು ಮಾರಾಟ ಮಾಡಬೇಕೆಂದು ಅಧಿಕೃತವಾಗಿ ಸೂಚಿಸಲಾಗಿದೆ. ಇದು ಮನೆ ಹಾಳು ಮಾಡುವ ಕಾರ್ಯಕ್ರಮ. ಸಿಎಂ ಸಿದ್ದರಾಮಯ್ಯ ಸಂವೇದನೆಯ ಪಾಠ ಮಾಡುತ್ತಾರೆ. ಮದ್ಯ ಕುಡಿಯಿರಿ ಎಂದು ಹೇಳುವುದೇ ಇವರ ಸಂವೇದನೆ ಎಂದು ಅಶೋಕ್ ಕಿಡಿಕಾರಿದ್ದರು.

### ವಿಜಯೇಂದ್ರ ಕಿಡಿ



ಭ್ರಷ್ಟಾಚಾರದಲ್ಲಿ ಮುಳುಗಿ ಹೋಗಿರುವ ಕಾಂಗ್ರೆಸ್ ಸರಕಾರದ ಮುಖ್ಯಮಂತ್ರಿಗಳು ಅಬಕಾರಿ ವಿಚಾರದಲ್ಲಿ ಗಟ್ಟಿ ನಿರ್ಧಾರವನ್ನ ತೆಗೆದುಕೊಳ್ಳಬೇಕೆಂಬುದು ಬಿಜೆಪಿ ಮತ್ತು ಜೆಡಿಎಸ್ ನಿಲುವು. ಅಬಕಾರಿ ಸಚಿವರ ರಾಜೀನಾಮೆ ಪಡೆದು ಆಮೇಲೆ ಭ್ರಷ್ಟಾಚಾರದ ಬಗ್ಗೆ ತನಿಖೆ ನಡೆಸಲಿ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ ವಿಜಯೇಂದ್ರ ಅವರು ಒತ್ತಾಯಿಸಿದ್ದಾರೆ.

### ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ

ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ ಅವರು ತಮ್ಮ ವಿರುದ್ಧ ಕೇಳಿಬಂದಿರುವ ಲಂಚ ಮತ್ತು ಭ್ರಷ್ಟಾಚಾರ ಆರೋಪಗಳನ್ನು ತಳ್ಳಿಹಾಕಿ, ನಾನು ಯಾವುದೇ ತಪ್ಪು ಮಾಡಿಲ್ಲ, ರಾಜೀನಾಮೆ ನೀಡುವ ಪ್ರಶ್ನೆಯೇ ಇಲ್ಲ ಎಂದು ಮಂಗಳವಾರ ವಿಧಾನಸಭೆಯಲ್ಲಿ ಸ್ಪಷ್ಟಪಡಿಸಿದ್ದಾರೆ. ಯಾವುದಾದರೂ ಅಧಿಕಾರಿ.. ಸಚಿವ ಅಥವಾ ಮುಖ್ಯಮಂತ್ರಿಯ ಹೆಸರನ್ನು ದುರುಪಯೋಗ ಮಾಡಿಕೊಂಡು ಲಂಚ ಪಡೆದಿದ್ದರೆ, ಆ ಅಧಿಕಾರಿಯ ವಿರುದ್ಧ ಕ್ರಮ ಕೈಗೊಳ್ಳಬೇಕು. ನಾನು ಯಾವ ತಪ್ಪು ಮಾಡಿದ್ದೇನೆ ರಾಜೀನಾಮೆ ನೀಡುವ ಅಗತ್ಯವೇನಿದೆ ಎಂದು ಆರ್.ಬಿ.ತಿಮ್ಮಾಪುರ ಪ್ರಶ್ನಿಸಿದ್ದಾರೆ.

### ಶಾಸಕ ಶಿವಲಿಂಗೇಗೌಡ ಆಕ್ರೋಶ




ಸದನದಲ್ಲಿ ಕೋತಿ ಆಟ ಬೇಡ ಎಂದು ವಿಧಾನಸಭೆಯಲ್ಲಿಯೇ ಏರುಧ್ವನಿಯಲ್ಲಿ ಕಾಂಗ್ರೆಸ್‌ನ ಹಿರಿಯ ಶಾಸಕ ಶಿವಲಿಂಗೇಗೌಡ ಬಿಜೆಪಿ ಸದಸ್ಯರ ನಡವಳಿಕೆ ವಿರುದ್ಧ ಆಕ್ರೋಶ ಹೊರಹಾಕಿದರು. ಬುಧವಾರ ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿರುವ ವಿಬಿ-ಜಿ ರಾಮ್ ಜಿ ಕಾಯ್ದೆ ವಿರುದ್ಧದ ನಿರ್ಣಯ ಕುರಿತ ಚರ್ಚೆಯಲ್ಲಿ ಮಾತನಾಡಿದ ಶಿವಲಿಂಗೇಗೌಡ ಅವರಿಗೆ ಧರಣಿ ನಿರತ ಬಿಜೆಪಿ ಸದಸ್ಯರು ಅಡ್ಡಿಪಡಿಸಿದರು. ಇದಕ್ಕೆ ಆಕ್ರೋಶಗೊಂಡ ಶಿವಲಿಂಗೇಗೌಡ, ರಾಜ್ಯದ ಜನರಿಗೆ ಅನ್ಯಾಯವಾಗುತ್ತಿದೆ. ವಿರೋಧ ಪಕ್ಷಗಳ ಸದಸ್ಯರು ಅದನ್ನು ಹಾಸ್ಯ ಮಾಡಿಕೊಂಡು ನೃತ್ಯ ಮಾಡುತ್ತಾ ಧರಣಿ ಮಾಡುತ್ತಿದ್ದಾರೆ. ಅವರಿಗೆ ಗಂಭೀರತೆ ಇಲ್ಲ ಎಂದು ಟೀಕಿಸಿದರು. ಆಗ ಬಿಜೆಪಿ ಸದಸ್ಯರು ಅವರ ವಿರುದ್ಧ ಘೋಷಣೆಗಳನ್ನು ಕೂಗಿದರು.

# ಶ್ರೀ ಶ್ರೀ ಕುಮಾರ ಚಂದ್ರಶೇಖರನಾಥ ಮಹಾಸ್ವಾಮೀಜಿಯವರ ಅಭಿನಂದನಾ ಗ್ರಂಥ ಲೋಕಾರ್ಪಣೆ

## ಉಚಿತ ಆರೋಗ್ಯ ಶಿಬಿರ ಸರ್ವ ಜನಾಂಗದ ವಧು-ವರರ ಮುಖಾಮುಖಿ ಹಾಗೂ ಮಲೆನಾಡು ಗಿಡ್ಡ ಗೋವುಗಳ ಉಚಿತ ವಿತರಣಾ ಕಾರ್ಯಕ್ರಮ

• ಉಮೇಶ್ ಬಾಣಾವರ ಉದಯವಾಹಿನಿ

ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠ ಆಶ್ರಯದಲ್ಲಿ ಒಕ್ಕಲಿಗ ಯುವ ಬ್ರಿಗೇಡ್ ವತಿಯಿಂದ ಪರಮಪೂಜ್ಯ ಜಗದ್ಗುರುಗಳಾದ ಭೈರವೈಕ್ಯ ಶ್ರೀ ಶ್ರೀ ಕುಮಾರ ಚಂದ್ರಶೇಖರನಾಥ ಮಹಾಸ್ವಾಮೀಜಿಯವರ ಅಭಿನಂದನಾ ಗ್ರಂಥ ಲೋಕಾರ್ಪಣೆಗೊಳ್ಳಲಿದೆ.



ಸಾವಯವ ಸಂತೆ ವಿಜ್ಞಾನ ತಂತ್ರಜ್ಞಾನ ವಸ್ತು ಪ್ರದರ್ಶನ ಉಚಿತ ಆರೋಗ್ಯ ಶಿಬಿರ ಸರ್ವ ಜನಾಂಗದ ವಧು-ವರರ ಮುಖಾಮುಖಿ ಹಾಗೂ ಮಲೆನಾಡು ಗಿಡ್ಡ ಗೋವುಗಳ ಉಚಿತ ವಿತರಣಾ ಕಾರ್ಯಕ್ರಮವನ್ನು ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಪರಮಪೂಜ್ಯ ಜಗದ್ಗುರುಗಳಾದ ಶ್ರೀ ಶ್ರೀ ಶ್ರೀ ಡಾ. ನಿಶ್ಚಲಾನಂದ ಮಹಾಸ್ವಾಮಿಜಿಯವರ ದಿವ್ಯ ಸಾನಿಧ್ಯದಲ್ಲಿ ಬೆಂಗಳೂರಿನ ಕೆಂಗೇರಿ ಸಮೀಪದ ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನದ ಮಠದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ಮಠದ ಪ್ರಕಟಣೆಯಲ್ಲಿ ತಿಳಿಸಲಾಗಿದೆ

ದಿನಾಂಕ 14 2 26ರಂದು ಬೆಳಿಗ್ಗೆ 10 ಗಂಟೆಗೆ ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ಶ್ರೀ ಡಾಕ್ಟರ್ ನಿರ್ಮಲಾನಂದನಾಥ ಮಹಾ ಸ್ವಾಮೀಜಿ ಇವರ ದಿವ್ಯ ಸಾನಿಧ್ಯದಲ್ಲಿ ಕಾರ್ಯಕ್ರಮ ಪ್ರಾರಂಭವಾಗಲಿದೆ. ಈ ಸಮಾರಂಭದಲ್ಲಿ ಆರೋಗ್ಯ ಶಿಬಿರ ಸಾವಯುವ ಸಂತೆ ಮಲೆನಾಡು ಗಿಡ್ಡ ಗೋವುಗಳ ವಿತರಣೆ ಹಾಗೂ ರಾಜ್ಯಮಟ್ಟದ ಸರ್ವ ಜನಾಂಗದ ವಧು ವರರ ಸಮಾವೇಶ ಕಾರ್ಯಕ್ರಮ ಅದ್ದೂರಿಯಾಗಿ ನಡೆಯಲಿದೆ.

**ಒಕ್ಕಲಿಗ ಯುವ ಬ್ರಿಗೇಡ್**

### ಗಣ್ಯಾತಿಗಣ್ಯರ ಸಮಾಗಮ

ಈ ಸಮಾರಂಭದಲ್ಲಿ ನಾಡಿನ ಹಲವಾರು ಮಠಮಾನ್ಯಗಳ ಹರ ಗುರು ಚರಮೂರ್ತಿಗಳು ಖ್ಯಾತ ಪೀಠಾಧಿಪತಿಗಳು ಹಾಗೂ ರಾಜ್ಯ ಸರ್ಕಾರದ ಕಂದಾಯ ಸಚಿವರಾದ ಕೃಷ್ಣ ಭೈರೇಗೌಡ, ಕೃಷಿ ಸಚಿವರಾದ ಎನ್ ಚೆಲುವರಾಯಸ್ವಾಮಿ. ಮಾಜಿ ಮುಖ್ಯಮಂತ್ರಿಗಳಾದ ಡಿವಿ ಸದಾನಂದ ಗೌಡ ಸೇರಿದಂತೆ ಹಲವಾರು ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ಶಾಸಕರು ಮಾಜಿ ಸಚಿವರುಗಳು ಭಾಗವಹಿಸಲಿದ್ದಾರೆ.

- ಆರೋಗ್ಯ ಶಿಬಿರ
- ಸಾವಯುವ ಸಂತೆ ಮಲೆನಾಡು ಗಿಡ್ಡ ಗೋವುಗಳ ವಿತರಣೆ
- ರಾಜ್ಯ ಮಟ್ಟದ ಸರ್ವ ಜನಾಂಗದ ವಧು ವರರ ಸಮಾವೇಶ ಕಾರ್ಯಕ್ರಮ



ದಿನಾಂಕ 15 06.26 ರಂದು ಸಂಜೆ 5:00 ಗಂಟೆಗೆ ತುಮಕೂರು ಜಿಲ್ಲೆ ಶಿರಾ ತಾಲ್ಲೂಕು ಸ್ಪಟಿಕಪುರಿ ಮಹಾಸಂಸ್ಥಾನದ ಪೀಠಾಧ್ಯಕ್ಷರಾದ ಶ್ರೀ ಶ್ರೀ ನಂಜಾವಧೂತ ಮಹಾ ಸ್ವಾಮೀಜಿಯವರ ದಿವ್ಯ ಸಾನಿಧ್ಯದಲ್ಲಿ ಎರಡನೇ ದಿನದ ಕಾರ್ಯಕ್ರಮದಲ್ಲಿ ಕಂದಾಯ ಕಳಕಳಿ ಆವೃತ್ತಿ ಎರಡು ಲೋಕಾರ್ಪಣೆ ಮಾಡಲಿದ್ದು ಈ ಕಾರ್ಯಕ್ರಮದಲ್ಲಿಯೂ ಸಹ ರಾಜ್ಯದ ಹೆಸರಾಂತ ಮಠ ಮಾನ್ಯಗಳ ಖ್ಯಾತ ಪೀಠಾಧಿಪತಿಗಳು ಹರ ಗುರು ಚರಮೂರ್ತಿಗಳು ಭಾಗವಹಿಸಲಿದ್ದಾರೆ. ಕೇಂದ್ರ ಸರ್ಕಾರದ ಕಾರ್ಮಿಕ ಮತ್ತು ಉದ್ಯೋಗ ಖಾತೆ ಹಾಗೂ ಸೂಕ್ಷ್ಮ ಮತ್ತು ಸಣ್ಣ ಮಧ್ಯಮ ಉದ್ಯಮಗಳ ಖಾತೆ ಸಚಿವರಾದ ಶೋಭಾ ಕರಂದ್ಲಾಜೆ ಅವರು ಭಾಗವಹಿಸಲಿದ್ದಾರೆ. ಬೆಂಗಳೂರು ದಕ್ಷಿಣ ಲೋಕಸಭಾ ಕ್ಷೇತ್ರದ ಸಂಸದರಾದ ಡಾಕ್ಟರ್ ಸಿಎನ್ ಮಂಜುನಾಥ್. ಹಾಗೂ ಮಾಜಿ ಉಪಮುಖ್ಯಮಂತ್ರಿ ಹಾಗೂ ಮಲ್ಲೇಶ್ವರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಾ. ಅಶ್ವತ್ ನಾರಾಯಣ್ ಸೇರಿದಂತೆ ಹಲವಾರು ರಾಜಕೀಯ ಮುಖಂಡರು ವಿಧಾನ ಪರಿಷತ್ ಸದಸ್ಯರುಗಳು ಮಾಜಿ ಶಾಸಕರು ಹಾಗೂ ಸರ್ಕಾರದ ಉನ್ನತ ಮಟ್ಟದ ಅಧಿಕಾರಿಗಳು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ರಾಜ್ಯದ ಎಲ್ಲಾ ಜಿಲ್ಲೆಗಳ ಶ್ರೀಮಠದ ಹಾಗೂ ಶ್ರೀಗಳ ಅಭಿಮಾನಿಗಳು ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಮಾರಂಭದ ಯಶಸ್ವಿಗೆ ಕಾರಣರಾಗಬೇಕೆಂದು ಶ್ರೀ ಮಠದ ವತಿಯಿಂದ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಲಾಗಿದೆ.

**ಈ ದಿನದ ದರ** ಪೆಟ್ರೋಲ್: 102.92 ₹/L ಡೀಸೆಲ್ : 91.67 ₹/L ಬಂಗಾರ: ₹15,944/Gram24ct ₹14,615/Gram22ct ಬೆಳ್ಳಿ: ₹320.00/Gram

# ಜ್ಯೋತಿಷಿ ಕಮಲಾಕರ ಭಟ್ ಬಂಧನ ಪ್ರಕರಣ: ಹರಿಪ್ರಸಾದ್-ಸುರೇಶ್ ಕುಮಾರ್ ನಡುವೆ ವಾಕ್ಸಮರ

• ಉದಯವಾಹಿನಿ, ಬೆಂಗಳೂರು

ಕಾರಾವಾರದ ಸಿದ್ದಾಪುರದಲ್ಲಿ ನಡೆದಿದ್ದ ವ್ಯಕ್ತಿಯ ಕೊಲೆ ಪ್ರಕರಣದ ಆರೋಪದಡಿ ಜ್ಯೋತಿಷಿ ಕಮಲಾಕರ್ ಭಟ್‌ಬಂಧನಕ್ಕೊಳಗಾಗಿದ್ದು, ಇದೇ ವಿಚಾರವಾಗಿ ರಾಜಕೀಯ ಚರ್ಚೆಗೆ ಗ್ರಾಸವಾಗಿದೆ ಮೇಲ್ಮನೆಯಲ್ಲಿ ಈ ಬಗ್ಗೆ ಪ್ರತಿಧ್ವನಿಸಿತು. ಆರೋಪಿಯನ್ನ ಪ್ರೋತ್ಸಾಹಿಸಿ ಬೆಳೆಸಿರುವ ಬಿಜೆಪಿ ಶಾಸಕ ಸುರೇಶ್ ಕುಮಾರ್ ಅವರು ಹತ್ಯೆಯ ನೈತಿಕ ಹೊಣೆ ಹೊರಬೇಕೆಂದು ವಿಧಾನಪರಿಷತ್‌ನ ಕಾಂಗ್ರೆಸ್ ಬಿ.ಕೆ ಹರಿಪ್ರಸಾದ್ ಆಗ್ರಹಿಸಿದ್ದಾರೆ. ಕೊಲೆ ಪ್ರಕರಣ ಆರೋಪದಡಿ ಸಿಲುಕಿರುವ ಜ್ಯೋತಿಷಿ ಜೊತೆ ಶಾಸಕ ಸುರೇಶ್ ಕುಮಾರ್ ತೆಗೆಸಿಕೊಂಡಿರುವ ಫೋಟೋವನ್ನು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಹರಿಪ್ರಸಾದ್ ಅವರು, ಕೊಲೆ ಆರೋಪಿ ಕಮಲಾಕರ ಭಟ್ಟನನ್ನು ಓರ್ವ ಶಾಸಕನಾಗಿ ಪ್ರೋತ್ಸಾಹಿಸಿ ಬೆಳೆಸಿದ್ದು ಸಂವಿಧಾನಕ್ಕೆ ಮಾಡುವ ಅಪಚಾರವಲ್ಲವೇ?




ಎಂದು ಪ್ರಶ್ನಿಸಿದ್ದಾರೆ. ಇದಕ್ಕೆ ಪ್ರತಿರೋಧವಾಗಿ ಸುರೇಶ್ ಕುಮಾರ್ ಸಹ ಸಿದ್ದರಾಮಯ್ಯ ಜೊತೆ ಇರುವ ಆರೋಪಿ ಫೋಟೊವನ್ನ ಪೋಸ್ಟ್ ಮಾಡುವುದಲ್ಲದೆ? ಸಿದ್ದಾಪುರದಲ್ಲಿ ನಡೆದ ಹೇಯ ಕೃತ್ಯಕ್ಕೆ ರಾಜಕೀಯ ಬಣ್ಣ ಬಳಿದು ನನ್ನ ಹೆಸರನ್ನು ತಳುಕು ಹಾಕುವ ಮೂಲಕ ಹರಿಪ್ರಸಾದ್ ಅವರು ಬೌದ್ಧಿಕ ದಿವಾಳಿತನ ಎತ್ತಿ ತೋರಿಸುತ್ತದೆ ಎಂದಿದ್ದಾರೆ.

ಹರಿಪ್ರಸಾದ್ ಪೋಸ್ಟ್‌ನಲ್ಲಿ ಏನಿದೆ? ಕಾರವಾರದ ಸಿದ್ದಾಪುರದಲ್ಲಿ ಕಮಲಾಕರ್ ಭಟ್ ಹೆಸರಿನ ಜ್ಯೋತಿಷಿಯ ಅಕ್ರಮ ಸಂಬಂಧಕ್ಕೆ 41 ವರ್ಷದ ಅಮಾಯಕ ವಸಂತ್ ನಾಯ್ಕ್ ಬಲಿಯಾಗಿದ್ದಾರೆ. ಈ ಕ್ರಿಮಿನಲ್ ಪ್ರಕರಣ ನ್ಯಾಯಯುತ ತನಿಖೆಯಾಗಿ, ನ್ಯಾಯಾಲಯ ತೀರ್ಪು ಕೊಡುತ್ತದೆ. ಆದರೆ, ಇಂತಹ ಪ್ರಕರಣದಲ್ಲಿ ಸಂಘ ಪರಿವಾರದ ಹಿನ್ನೆಲೆಯಿಂದ ಬಂದ ಬಿಜೆಪಿಯ ಸುರೇಶ್‌ಕುಮಾರ್ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅಂತಹ ಜನಪ್ರತಿನಿಧಿಗಳ ಪಾತ್ರ ಏನು? ಎಂಬುದು ಸ್ವಾಸ್ಥ್ಯ ಸಮಾಜ ದೃಷ್ಟಿಯಿಂದ ಮುಖ್ಯವಾಗುತ್ತದೆ. ಕೊಲೆ ಆರೋಪಿ ಜೋತಿಷಿ ಗುರೂಜಿ ಕಮಲಾಕರ ಭಟ್ಟನನ್ನು ಓರ್ವ ಶಾಸಕನಾಗಿ ಪ್ರೋತ್ಸಾಹಿಸಿ ಬೆಳೆಸಿದ್ದು, ಸಂವಿಧಾನಕ್ಕೆ ಮಾಡುವ ಅಪಚಾರವಲ್ಲವೇ? ಎಂದು ಪ್ರಶ್ನಿಸಿದ್ದಾರೆ.

ಮೂಢನಂಬಿಕೆಯ 'ಅಕ್ರಮ ದಂಧೆ'ಗಳನ್ನು ಬಿಜೆಪಿಯ ಸ್ವಯಂ ಘೋಷಿತ ಸಜ್ಜನ ಶಾಸಕ ಬಿರುದಾಂಕಿತ ಬಿಜೆಪಿಯ ಸುರೇಶ್ ಕುಮಾರ್ ಬೆನ್ನುತಟ್ಟಿ ಪ್ರೋತ್ಸಾಹಿಸಿ ಬೆಳೆಸಿದ್ದಾರೆ. ಹೀಗಾಗಿ ಹತ್ಯೆ ಪ್ರಕರಣದಲ್ಲಿ ಸುರೇಶ್ ಕುಮಾರ್ ನೈತಿಕ ಹೊಣೆ ಹೊರಬೇಕೆಂದು ಆಗ್ರಹಿಸಿದ್ದಾರೆ. ಈ ಬಗ್ಗೆ ಮಾಧ್ಯಮಗಳಿಗೂ ಪ್ರತಿಕ್ರಿಯಿಸಿದ್ದಾರೆ. ವಿಧಾನಪರಿಷತ್‌ನ ಕಲಾಪದಲ್ಲಿ ಬುಧವಾರ ಬೆಳಗ್ಗೆ ಮಾತನಾಡಿದ ಹರಿಪ್ರಸಾದ್, ನನ್ನ ಸಮುದಾಯಕ್ಕೆ ಸೇರಿದ ಓರ್ವ ವ್ಯಕ್ತಿ ಹತ್ಯೆಗೊಳಗಾಗಿದ್ದಾರೆ. ಜ್ಯೋತಿಷಿಯೊಬ್ಬರು ಈ ಕೃತ್ಯದಲ್ಲಿ ಭಾಗಿಯಾಗಿದ್ದಾರೆ. ಮಹಿಳೆ ವಿಚಾರಕ್ಕಾಗಿ ಹತ್ಯೆ ನಡೆದಿದೆ ಎಂದರು.

**ಸುರೇಶ್ ಕುಮಾರ್ ತಿರುಗೇಟು:** ತಮ್ಮ ಮೇಲಿನ ಆರೋಪಕ್ಕೆ ತಿರುಗೇಟು ನೀಡಿರುವ ಸುರೇಶ್ ಕುಮಾರ್, ಕಮಲಾಕರ್ ಭಟ್ ಜೊತೆಗೆ ಸಿದ್ದರಾಮಯ್ಯ ಇರುವ ಫೋಟೋವನ್ನ ಪೋಸ್ಟ್ ಮಾಡಿದ್ದಾರೆ. ಫೋಟೋ ಪ್ರಕಾರ ಕೊಲೆ ಪ್ರಕರಣದಲ್ಲಿ ರಾಜ್ಯದ ಮುಖ್ಯಮಂತ್ರಿಯೂ ಭಾಗಿಯೇ? ಕೊಳೆತ ಮನಸ್ಸಿಗೆ ಕೊಳೆತ ವಿಚಾರಗಳೇ ಬರುವುದು ಅಲ್ಲವೇ ಎಂದು ಹರಿಪ್ರಸಾದ್ ಅವರನ್ನ ಸುರೇಶ್ ಕುಮಾರ್ ಪ್ರಶ್ನಿಸಿದ್ದಾರೆ. ನಿಮ್ಮ ಪಕ್ಷದ ನಾಯಕರ ಜೊತೆ ಫೋಟೋ ತೆಗೆಸಿಕೊಂಡವರು, ಅವರ ಆಪ್ತವಲಯದಲ್ಲಿ ಗುರುತಿಸಿಕೊಂಡವರು ಜೈಲು ಪಾಲಾದ ಉದಾಹರಣೆಗಳಿಲ್ಲವೇ? ಆಗ ನಿಮ್ಮ ನಾಯಕರುಗಳೆಲ್ಲ ಆ ಅಪರಾಧಗಳ ನೈತಿಕ ಹೊಣೆ ಹೊತ್ತಿದ್ದಾರೆಯೇ? ಎಂದು ಸುರೇಶ್ ಕುಮಾರ್ ಪ್ರಶ್ನೆ ಮಾಡಿದ್ದಾರೆ.

## ಮತ್ತೆ ಮೆಟ್ರೋ ಪ್ರಯಾಣ ದರ ಏರಿಕೆ

• ಉದಯವಾಹಿನಿ, ಬೆಂಗಳೂರು

ಮೆಟ್ರೋ ಪ್ರಯಾಣಿಕರಿಗೆ ಮತ್ತೆ ದರ ಏರಿಕೆ ಶಾಕ್ ನೀಡುವ ಸಾಧ್ಯತೆ ಇದೆ. ಪ್ರತಿ ವರ್ಷದಂತೆ ಈ ವರ್ಷವೂ ಮೆಟ್ರೊ ಪ್ರಯಾಣ ದರ ಏರಿಕೆಗೆ ಬಿಎಂಆರ್‌ಸಿಎಲ್ ನಿರ್ಧರಿಸಿದ್ದು ಶೇ.5 ರಷ್ಟು ಪ್ರಯಾಣ ದರ ಏರಿಕೆಯಾಗುವ ಸಾಧ್ಯತೆಗಳಿವೆ. ಕಳೆದ ಬಾರಿ ಮೆಟ್ರೋ ಪ್ರಯಾಣ ದರವನ್ನು ಶೇ. 71 ರಷ್ಟು ಏರಿಕೆ ಮಾಡಿದ್ದರಿಂದ ಕಂಗೆಟ್ಟಿದ್ದ ಪ್ರಯಾಣಿಕರಿಗೆ ಇದೀಗ ಮತ್ತೆ ದರ ಏರಿಕೆ ಬಿಸಿ ಮುಟ್ಟಿಸಲಿದೆ. ಒಂದು ವೇಳೆ ನಿರೀಕ್ಷೆಯಂತೆ ಬಿಎಂಆರ್ ಸಿಎಲ್ ಪ್ರಯಾಣ ದರ ಏರಿಕೆ ಮಾಡಿದ್ದೇ ಆದರೆ, ಸಾರ್ವಜನಿಕರ ತೀವ್ರ ಆಕ್ರೋಶಕ್ಕೆ ಗುರಿಯಾಗುವುದಂತೂ ಗ್ಯಾರಂಟಿ.

## 12 ಪುಟಗಳ ಡೆತ್‌ನೋಟ್ ಬರೆದಿಟ್ಟಿದ್ದಾರಾ ಉದ್ಯಮಿ ರಾಯ್..?

• ಉದಯವಾಹಿನಿ, ಬೆಂಗಳೂರು

ಉದ್ಯಮಿ ರಾಯ್ ಅವರು ಆತಹತ್ಯೆಗೂ ಮುನ್ನ 12 ಪುಟಗಳ ಡೆತ್‌ನೋಟ್ ಬರೆದಿಟ್ಟಿದ್ದಾರೆಂದು ಹೇಳಲಾಗುತ್ತಿದೆ. ಆ ಡೆತ್‌ನೋಟ್‌ನಲ್ಲಿ ನಾನು ಜೀವನದಲ್ಲಿ ದುಡುಕಿನ ನಿರ್ಧಾರ ತೆಗೆದುಕೊಳ್ಳುತ್ತಿದ್ದೇನೆ ನನ್ನನ್ನು ಕ್ಷಮಿಸಿ. ತಮ್ಮ ವ್ಯವಹಾರಗಳನ್ನು, ವಯಕ್ತಿಕ ವಿಚಾರಗಳ ಬಗ್ಗೆ ಬರೆದಿದ್ದಾರೆನ್ನಲಾಗಿದೆ. ತಮ್ಮ ಕಂಪನಿಯಲ್ಲಿ ಕೆಲಸ ಮಾಡುತ್ತಿರುವ ನೌಕರರನ್ನು ಉದ್ಯೋಗದಿಂದ ತೆಗೆದು ಹಾಕಬಾರದು ಎಂದು ಪತ್ರದಲ್ಲಿ ಉಲ್ಲೇಖಿಸಿ ಕುಟುಂಬದವರಿಗೆ ಮನವಿ ಮಾಡಿಕೊಂಡಿದ್ದಾರೆ. ಅಲ್ಲದೇ ವ್ಯಯಕ್ತಿಕವಾಗಿ ನಾನು ಮಾನಸಿಕವಾಗಿ ನೊಂದಿದ್ದೇನೆ, ಖಿನ್ನತೆಗೆ ಒಳಗಾಗಿದ್ದೇನೆ ಹಾಗಾಗಿ ನಾನು ಈ ದುಡುಕಿನ ನಿರ್ಧಾರ ಕೈಗೊಂಡಿದ್ದೇನೆ ಎಂದು ಅವರು ಪತ್ರದಲ್ಲಿ ಬರೆದಿದ್ದಾರೆ ಎಂದು ಹೇಳಲಾಗುತ್ತಿದೆ.

ತಮ್ಮ ಕಂಪನಿಯನ್ನು ಯಾರು ಮುಂದುವರೆಸಬೇಕು, ಯಾರೆಲ್ಲಾ ಉಸ್ತುವಾರಿ ವಹಿಸಬೇಕು, ಯಾರಿಂದ ಎಷ್ಟು ಹಣ ಬರಬೇಕು ಎಂಬ ಬಗ್ಗೆಯೂ ಆತಹತ್ಯೆಗೂ ಮುನ್ನ ಅವರು ಪತ್ರದಲ್ಲಿ ನಮೂದಿಸಿದ್ದಾರೆ ಎಂದು ತಿಳಿದು ಬಂದಿದೆ. ಈ ಎಲ್ಲಾ ಬೆಳವಣಿಗೆಗಳ ನಡುವೆ ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಅವರು ಸುದ್ದಿಗಾರರೊಂದಿಗೆ ಮಾತನಾಡಿ ಇದುವರೆಗೂ ಯಾವುದೇ ಡೆತ್‌ನೋಟ್ ಸಿಕ್ಕಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಎಸ್‌ಐಟಿ ತನಿಖೆ ನಡೆಸುತ್ತಿದೆ. ಅದರ ವರದಿ ಇನ್ನೂ ಬಂದಿಲ್ಲ. ಆ ವರದಿ ಬಂದ ನಂತರವಷ್ಟೇ ಮತ್ತಷ್ಟು ಮಾಹಿತಿಗಳು ಲಭ್ಯವಾಗಲಿವೆ. ವಿವಿಧ ದೃಷ್ಟಿಕೋನಗಳಲ್ಲಿ ತನಿಖೆ ನಡೆಯುತ್ತಿದೆ ಎಂದು ಅವರು ಹೇಳಿದರು. ಈಗಾಗಲೇ ಐಟಿ ಅಧಿಕಾರಿಗಳನ್ನು ಎಸ್‌ಐಟಿ ವಿಚಾರಣೆ ನಡೆಸಿ ಹೇಳಿಕೆಗಳನ್ನು ಪಡೆದುಕೊಂಡಿದೆ. ಆ ಆಧಾರದಲ್ಲಿಯೂ ತನಿಖೆ ನಡೆಯುತ್ತಿದೆ ಎಂದು ಆಯುಕ್ತರು ತಿಳಿಸಿದರು.

## ಚಿನ್ನ, ಬೆಳ್ಳಿ ದರಗಳಲ್ಲಿ ಭಾರೀ ಏರಿಕೆ

• ಉದಯವಾಹಿನಿ, ಬೆಂಗಳೂರು

ನಿರಂತರ ಇಳಿಕೆಯ ನಂತರ ಬುಧವಾರ ಚಿನ್ನ ಮತ್ತು ಬೆಳ್ಳಿ ದರಗಳಲ್ಲಿ ಭಾರೀ ಏರಿಕೆಯಾಗಿದೆ. ಬುಧವಾರ 24 ಕ್ಯಾರೆಟ್ ಚಿನ್ನ ಪ್ರತೀ ಗ್ರಾಂಗೆ 660 ರೂ., 22 ಕ್ಯಾರೆಟ್ ಚಿನ್ನ ಪ್ರತೀ ಗ್ರಾಂಗೆ 605 ರೂ., 18 ಕ್ಯಾರೆಟ್ ಚಿನ್ನ ಪ್ರತೀ ಗ್ರಾಂಗೆ 495 ರೂ. ಏರಿಕೆಯಾಗಿದೆ. ಅದೇ ರೀತಿ ಬೆಳ್ಳಿ ಪ್ರತೀ ಕೆಜಿಗೆ 40 ಸಾವಿರ ರೂ. ಹೆಚ್ಚಾಗಿದೆ. ಗ್ರಾಂಗೆ 40 ರೂ. ಹೆಚ್ಚಳ ಕಂಡಿದೆ.

ಬುಧವಾರ ಬೆಳ್ಳಿದರ ಕೆಜಿಗೆ 3,20,000 ರೂ. ತಲುಪಿದೆ. 24 ಕ್ಯಾರೆಟ್ ಚಿನ್ನ ಪ್ರತೀ ಗ್ರಾಂಗೆ 16,053 ರೂ ಇದ್ದರೆ, 22 ಕ್ಯಾರೆಟ್ ಚಿನ್ನ ಪ್ರತೀ ಗ್ರಾಂಗೆ 14,715 ರೂ., 18 ಕ್ಯಾರೆಟ್ ಚಿನ್ನ ಪ್ರತೀ ಗ್ರಾಂಗೆ 12,040 ರೂ. ಗಳಷ್ಟಿದೆ. ಜ.30 ರಿಂದ ಇಳಿಮುಖವಾಗಿದ್ದ ಚಿನ್ನ, ಬೆಳ್ಳಿ ದರಗಳು ಮತ್ತೆ ಏರಿಕೆಯಾಗಿದ್ದು, ಗ್ರಾಹಕರಿಗೆ ಮತ್ತೆ ಬೇಸರ ಉಂಟಾಗಿದೆ.ಹೂಡಿಕೆದಾರರು ಸುರಕ್ಷಿತಾ ದೃಷ್ಟಿಯಿಂದ ಚಿನ್ನ ಮತ್ತು ಬೆಳ್ಳಿಯ ಮೇಲೆ ಹೆಚ್ಚು ತೊಡಗಿಸುವುದರಿಂದ ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಬೆಲೆಗಳು ಏರಿಳಿತವಾಗುತ್ತಿವೆ. ಹೀಗಾಗಿ ಸ್ಥಳೀಯ ಮಾರುಕಟ್ಟೆ ಮೇಲೂ ಪರಿಣಾಮ ಉಂಟಾಗಿ ಬೆಲೆ ಹೆಚ್ಚಳಕ್ಕೆ ಕಾರಣವಾಗಿದೆ ಎಂಬುದು ವರ್ತಕರ ಅಭಿಪ್ರಾಯವಾಗಿದೆ.ಮುಂದೆಯೂ ಚಿನ್ನ, ಬೆಳ್ಳಿ ದರಗಳು ಏರಿಳಿತವಾದರೂ ದೀರ್ಘಾವಧಿಯಲ್ಲಿ ಏರುಗತಿಯಲ್ಲೇ ಇರುತ್ತವೆ ಎಂಬ ವ್ಯಾಖ್ಯಾನ ಕೇಳಿಬರುತ್ತಿದೆ.

## ಸಾರ್ವಜನಿಕ ಶೌಚಾಲಯಗಳ ಸಂಖ್ಯೆ ಹೆಚ್ಚಿಸಿ: ನಾಗಲಕ್ಷ್ಮೀ ಚೌಧರಿ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ನಗರದ ಸಾರ್ವಜನಿಕ ಪ್ರದೇಶಗಳಲ್ಲಿರುವ ಸಾರ್ವಜನಿಕ ಶೌಚಾಲಯಗಳ ಸಂಖ್ಯೆ ಹೆಚ್ಚಿಸುವುದರ ಜೊತೆಗೆ ಸರಿಯಾಗಿ ನಿರ್ವಹಣೆ ಮಾಡಬೇಕು ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮೀ ಚೌಧರಿ ಆಗ್ರಹಿಸಿದ್ದಾರೆ. ಈ ಬಗ್ಗೆ ಜಿಬಿಎ ಮುಖ್ಯ ಆಯುಕ್ತರಿಗೆ ಪತ್ರ ಬರೆದಿರುವ ಅವರು, ಬೆಂಗಳೂರು ನಗರದ ಸಾರ್ವಜನಿಕ ಪ್ರದೇಶಗಳಲ್ಲಿ ಸಾರ್ವಜನಿಕ ಶೌಚಾಲಯಗಳ ಸಂಖ್ಯೆ ಕಡಿಮೆ ಇದ್ದು, ಮಹಿಳೆಯರು ಸೇರಿದಂತೆ ಸಾರ್ವಜನಿಕರು ಪರದಾಡುತ್ತಿದ್ದಾರೆ. ಪ್ರಸ್ತುತ ನಗರದಲ್ಲಿ ಇರುವ ಶೌಚಾಲಯಗಳು ಸಮರ್ಪಕವಾಗಿ ನಿರ್ವಹಣೆಯಾಗದೇ, ಮಹಿಳೆಯರ ಅನಾರೋಗ್ಯಕ್ಕೆ ಕಾರಣವಾಗುತ್ತಿವೆ. ಶೌಚಾಲಯಗಳ ಸಂಖ್ಯೆ ಹೆಚ್ಚಿಸುವುದು ಸೇರಿದಂತೆ ಶುಚಿತ್ವ ಕಾಪಾಡಿಕೊಳ್ಳುವಂತೆ ಸಂಬಂಧಪಟ್ಟ ಪಾಲಿಕೆ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕು ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

## ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ

• ಉದಯವಾಹಿನಿ, ಹೆಸರಘಟ್ಟ

ಹೆಸರಘಟ್ಟ ಹೋಬಳಿ ವ್ಯಾಪ್ತಿಯಲ್ಲಿ 28 ಕೋಟಿ ವೆಚ್ಚದಲ್ಲಿ ಪೂರ್ಣಗೊಂಡಿರುವ ಹಲವು ಅಭಿವೃದ್ಧಿ ಸೌಲಭ್ಯಗಳನ್ನು ಶಾಸಕ ಎಸ್.ಆರ್.ವಿಶ್ವನಾಥ್ ಅವರು ಜನರ ಬಳಕೆಗೆ ಮುಕ್ತಗೊಳಿಸಿದರು. ಹೆಸರಘಟ್ಟ ಗ್ರಾಮದ ವಾರ್ಡ್ 2, 3, 8, 9, ಕೊಡಗಿ ತಿರುಮಳಾಪುರ, ಹುರಳಿಚಿಕ್ಕನಹಳ್ಳಿ ಗ್ರಾಮಗಳಲ್ಲಿ ಕಾಂಕ್ರೀಟ್ ರಸ್ತೆ, ಚರಂಡಿ ನಿರ್ಮಾಣವಾಗಿವೆ. ಬ್ಯಾಲಕೆರೆ, ಗುಣಿ ಅಗ್ರಹಾರ ಗ್ರಾಮಗಳಲ್ಲಿ ಕೆರೆ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಿ ಮಾತನಾಡಿದ ವಿಶ್ವನಾಥ್, ಹೆಸರಘಟ್ಟ ಭಾಗದಿಂದ ರಾಜ್ಯ, ರಾಷ್ಟ್ರ, ಅಂತರರಾಷ್ಟ್ರೀಯ ಮಟ್ಟದಲ್ಲಿ ಆಡಿರುವ ಅನೇಕ ಕಬಡ್ಡಿ ಕ್ರೀಡಾಪಟುಗಳಿದ್ದಾರೆ. ಅವರಿಗೆ ಕ್ರೀಡಾಂಗಣದ ಕೊರತೆ ಇತ್ತು. ಈ ಕಾರಣದಿಂದ 2.50 ಕೋಟಿ ವೆಚ್ಚದಲ್ಲಿ ಕಬಡ್ಡಿ ಕೋರ್ಟ್ ನಿರ್ಮಿಸಲಾಗಿದೆ ಎಂದರು. ಇದೇ ಸಂದರ್ಭದಲ್ಲಿ ಅಂಗವಿಕಲರಿಗೆ ಸಲಕರಣೆಗಳನ್ನು ವಿತರಿಸಲಾಯಿತು.

**ಸೇರ್ಪಡೆ:** ಮುಖಂಡರಾದ ಮಂಜುನಾಥ್, ಕೆಂಪರಾಜು, ಗಂಗಾಧರ್, ವಸಂತ್, ನಾಗೇಶ್ ಸೇರಿದಂತೆ 100ಕ್ಕೂ ಹೆಚ್ಚು ಕಾರ್ಯಕರ್ತರು ಕಾಂಗ್ರೆಸ್ ಪಕ್ಷವನ್ನು ತೊರೆದು ಬಿಜೆಪಿಗೆ ಈ ಸಂದರ್ಭದಲ್ಲಿ ಸೇರ್ಪಡೆಯಾದರು.

# ವಿಧಾನ ಪರಿಷತ್‌ನಲ್ಲಿ ಕಾವೇರಿದ ಬಿಸಿ ಬಿಸಿ ಚರ್ಚೆ

### ಒಂದು ಹಂತದಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ಸದಸ್ಯರ ನಡುವೆ ತೀವ್ರ ವಾಕ್ಸಮರ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಸದಸ್ಯ ನಸೀರ್ ಅಹಮದ್ ವಿರುದ್ಧ ಆಕ್ಷೇಪಣಾ ಪದ ಬಳಸಿದ್ದ ಬಿಜೆಪಿ ಸದಸ್ಯ ಸಿ.ಟಿ.ರವಿ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಡಳಿತ ಪಕ್ಷ ಸಭಾಪತಿಗಳಿಗೆ ಒತ್ತಾಯಿಸಿದ ಪರಿಣಾಮ ವಿಧಾನ ಪರಿಷತ್‌ನಲ್ಲಿ ಕಾವೇರಿದ ಬಿಸಿ ಬಿಸಿ ಚರ್ಚೆ ನಡೆಯಿತು ಒಂದು ಹಂತದಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ಸದಸ್ಯರ ನಡುವೆ ತೀವ್ರ ವಾಕ್ಸಮರವು ನಡೆಯಿತು. ಗಮನ ಸೆಳೆಯುವ, ಲಿಖಿತ ಮೂಲಕ ಪ್ರಶ್ನೆಗಳಿಗೆ ಉತ್ತರಿಸುವುದು ಮುಗಿದ ನಂತರ ಸಭಾಪತಿ ಹೊರಟ್ಟಿಯವರಿಗೆ ಮುಖ್ಯ ಸಚೇತಕ ಸಲೀಂ ಅವರು ವಿಷಯ ಪ್ರಸ್ತಾಪಿಸಿದ್ದು, ಸದನದಲ್ಲಿ ತೀವ್ರ ಚರ್ಚೆಗೆ ಎಡೆ ಮಾಡಿಕೊಟ್ಟಿತು.

**ಸಿ.ಟಿ.ರವಿ ವಿರುದ್ಧ ಕ್ರಮಕ್ಕೆ ಆಗ್ರಹ**

ಕಾಂಗ್ರೆಸ್ ಸದಸ್ಯ ನಸೀರ್ ಅಹಮದ್ ಅವರನ್ನು ನಿಮದು ಪಾಕಿಸ್ತಾನ ನಾಲಿಗೆಯಾ ಎಂದು ಬಿಜೆಪಿ ಸದಸ್ಯ ಸಿ.ಟಿ. ರವಿ ಅವರು ಹೇಳಿದ್ದಾರೆ. ಇದು ಅತ್ಯಂತ ಹಗುರವಾದ ಮಾತು ಹೀಗಾಗಿ ಅವರು ಬೇಷರತ್ ವಿಷಾದ ವ್ಯಕ್ತಪಡಿಸಬೇಕು. ಇಲ್ಲವೇ ಸಭಾಪತಿಗಳು ಆದೇಶ ನೀಡಬೇಕೆಂದು ಮನವಿ ಮಾಡಿದರು. ಪರಿಷತ್ ಛಲವಾದಿ ನಾರಾಯಣ ಸ್ವಾಮಿ ಅವರು, ಸಿ.ಟಿ.ರವಿ ವಿಚಾರ ಈಗಾಗಲೇ ಮುಗಿದ ಅಧ್ಯಾಯ. ಸದನ ಮುಂದಕ್ಕೆ ಹೋದ ಬಳಿಕ ಹಿಂದಕ್ಕೆ ಬರಲು ಆಗುವುದಿಲ್ಲ. ಪೀಠ ಆದೇಶ ಮಾಡಿದೆ ಎನ್ನುವುದು ಸತ್ಯಕ್ಕೆ ದೂರವಾದ ಮಾತು. ಇದು ಅಸಾಂವಿಧಾನಕ ಪದ ಅಲ್ಲ. ಆದರೂ ಅವರಿಗೆ ನೋವಾಗುತ್ತದೆ. ಹಾಗಾಗಿ ಕಡತದಿಂದ ತೆಗೆಯುತ್ತೇನೆ ಎಂದಿದ್ದೀರ. ಅದನ್ನು ಅವರ ಆತಾವಲೋಕನಕ್ಕೆ ಬಿಡುತ್ತೇನೆ ಎಂದು ಸಭಾಪತಿ ಹೇಳಿದ್ದಾರೆ. ಅವರು ಆ ನಾಲಿಗೆ ಯಾವುದು ಎಂಬುದನ್ನು ಕಂಡು ಹಿಡಿಯಿರಿ ಎಂದು ಪೀಠಕ್ಕೆ ಸಿ.ಟಿ.ರವಿ ಹೇಳಿದ್ದರು. ಅದನ್ನು ತಾವು ಕಂಡು ಹಿಡಿದಿದ್ದೀರ ಎಂದು ತಿಳಿಸಿದರು. ಪ್ರಧಾನ ಮಂತ್ರಿಗಳ ವಿರುದ್ಧ ಒಂದು ಬಾರಿ ಪ್ರಸ್ತಾಪ ಮಾಡಿದರು. ಆದರೆ ಪದೇ ಪದೇ ಅದು ಚರ್ಚೆಗೆ ಬಂದು ನಾಗರಾಜ್ ಯಾದವ್ ಅವರು ಪೀಠಕ್ಕೆ ಒಂದು ಮಾತನ್ನು ಹೇಳಿದ್ದರು ಎಂದರು. ಆಗ ಸದಸ್ಯ ಮಧ್ಯಪ್ರವೇಶ ಮಾಡಿದ ಯಾದವ್, ನಾನು ಸದನದಲ್ಲಿ ಮಾತನಾಡಿಲ್ಲ. ಇದರ ಬಗ್ಗೆ ಚರ್ಚೆಯಾಗಲಿ ಎಂದು ಒತ್ತಾಯಿಸಿದರು. ಮಾತು ಮುಂದುವರೆಸಿದ ಛಲವಾದಿ



ನಾರಾಯಣಸ್ವಾಮಿ, ಪೀಠಕ್ಕೆ ಅಪಮಾನ ಆಗಿದೆ ಎಂದಿದ್ದರು. ತಕ್ಷಣ ಹರಿಪ್ರಸಾದ್ ಯಾದವ್ ಅವರಿಗೆ ಸೂಚನೆ ನೀಡಿ ಕ್ಷಮೆ ಯಾಚಿಸುವಂತೆ ಹೇಳಿದರು. ಅದು ಅಲ್ಲಿಗೆ ಮುಗಿಯಿತು. ಆದರೆ ಈ ವಿಚಾರ ಮೂರು ದಿನ ನಡೆದಿದೆ ಎಂದು ವಿವಾದವನ್ನು ಸುಖಾಂತ್ಯಗೊಳಿಸುವ ಪ್ರಯತ್ನ ಮಾಡಿದರು. ಈ ವೇಳೆ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ. ಪಾಟೀಲ್‌ಮಾತನಾಡಿ, ನಾವು ನಿನ್ನೆಯೂ ಹೇಳಿದ್ದೆವು ಐದು ಬಾರಿ ಪೀಠ ಮಾರ್ಗದರ್ಶನ ಮಾಡಿದೆ. ಪೀಠ ಮನವಿ ಮಾಡುವುದು ಅಂದರೆ ಏನು? ಇಬ್ಬರೂ ಸಭಾಪತಿಗಳು ಹೇಳಿದರು. ಸಭಾಪತಿ ಹೇಳಿದರು ಅಂದರೆ ಅದು ಕಮಾಂಡ್ ಮಾಡಿದ ಹಾಗೆ. ಎಲ್ಲದಕ್ಕೂ ಶಿಷ್ಟಾಚಾರ ಇವೆ. ಪೀಠ ಮನವಿ ಮಾಡುತ್ತದೆ. ಇದಕ್ಕೂ ಮೊದಲು ಅಂದರೆ ನೀವು ನಿರ್ಧಾರ ಮಾಡಬೇಕು. ನಸೀರ್ ಅವರಿಗೆ ಸಭಾಪತಿ ಹೇಳಿದ ತಕ್ಷಣ ಅವರು ಕ್ಷಮೆ ಯಾಚಿಸಿದರು. ಈಗ ನೀವು ಕ್ಷಮೆ ಕೇಳಬೇಕಲ್ಲವೇ? ಇದನ್ನ ಮುಂದುವರೆಸುವುದರಲ್ಲಿ ಅರ್ಥ ಇಲ್ಲ. ನಿಮ್ಮ ನಿಯಮವನ್ನು ಅವರು ಕೇಳಬೇಕು ಎಂದು ಆಗ್ರಹಿಸಿದರು.

**ಪ್ರಧಾನಿಯನ್ನು ಟೀಕಿಸುವುದು ಎಷ್ಟು ಸರಿ?**

ಇದಕ್ಕೆ ಆಕ್ಷೇಪಿಸಿದ ಛಲವಾದಿ ನಾರಾಯಣಸ್ವಾಮಿ, ನಸೀರ್ ಮಾಡಿದ್ದು ಘನಕಾರ್ಯ ಎನ್ನುವ ರೀತಿ ಸಮರ್ಥನೆ ಮಾಡುತ್ತಿದ್ದೀರಿ. ದೇಶದ ಪ್ರಧಾನಿಯನ್ನು ಟೀಕಿಸುವುದು ಎಷ್ಟು ಸರಿ? ಇದು ಮುಗಿದಿದೆ. ಈಗಾಗಲೇ ಸದನ ಆರಂಭ ಕೂಡ ಆಗಿದೆ. ಮುಂದೆ ಹೋಗಿದೆ ಹಿಂದೆ ಬರುವುದು ಬೇಡ ಎಂದು ಮನವಿ ಮಾಡಿಕೊಂಡರು. ಆಗ ಕಾಂಗ್ರೆಸ್ ಪಕ್ಷದ ಹಿರಿಯ ಸದಸ್ಯ ಬಿ.ಕೆ.ಹರಿಪ್ರಸಾದ್ ಅವರು, ನಾನು ಮೂರು ನಾಲ್ಕು ಜನ ಹೇಳಿದ್ದಕ್ಕೆ ವಿಷಾದ ವ್ಯಕ್ತಪಡಿಸಿದ್ದೇನೆ ಎಂದು ಹೇಳಿದ್ದು, ಗದ್ದಲಕ್ಕೆ ಕಾರಣವಾಯಿತು.

## ತುರ್ತು ಪ್ರತಿಕ್ರಿಯೆ ಸಹಾಯಕ್ಕೆ ನಮ್ಮ 112 ಜೊತೆ 14416 ಸಂಯೋಜನೆ

• ಉದಯವಾಹಿನಿ, ಬೆಂಗಳೂರು

ಮಾನಸಿಕ ಆರೋಗ್ಯ ಸಂಕಷ್ಟ ಅನುಭವಿಸುತ್ತಿರುವ ವ್ಯಕ್ತಿಗಳಿಗೆ ಸಮಯೋಚಿತ ಸಹಾಯ ಒದಗಿಸಲು ಹಾಗೂ ಆತಹತ್ಯೆ ಅಪಾಯ ಸೇರಿದಂತ ಮಾನಸಿಕ ಚಿಕಿತ್ಸೆಗೆ ಸಂಬಂಧಿಸಿದ ತುರ್ತು ಸಮಯದಲ್ಲಿ ನಮ್ಮ 112 ಸಹಯೋಗದೊಂದಿಗೆ ಟೆಲಿ ಮನಸ್ (14416) ಸಂಯೋಜನೆಗೊಂಡಿದೆ.

ನಗರದಲ್ಲಿ ಸಂಕಷ್ಟದ ಸಂದರ್ಭಗಳಲ್ಲಿ ಮಾನಸಿಕ ಆರೋಗ್ಯ ಸೇವೆಗಳನ್ನು ಬಲಪಡಿ ಸುವ ದಿಕ್ಕಿನಲ್ಲಿ ಇದೊಂದು ಮಹತ್ವದ ಹೆಜ್ಜೆಯಾಗಿದೆ.ನಗರದಲ್ಲಿ ತುರ್ತು ಮಾನಸಿಕ ಆರೋಗ್ಯ ಪ್ರತಿಕ್ರಿಯೆಯನ್ನು ಮತ್ತಷ್ಟು ಬಲಪಡಿಸುವ ಉದ್ದೇಶದಿಂದ ಬುಧವಾರ ಹಮ್ಮಿಕೊಂಡಿದ್ದ ತುರ್ತು ಸ್ಪಂದನ ಸಹಾಯ ವ್ಯವಸ್ಥೆ (ನಮ 112) ಸಹಯೋಗದೊಂದಿಗೆ ಟೆಲಿ ಮನಸ್ (14416) ಸಂಯೋಜನ ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಗರ ಪೊಲೀಸ್ ಆಯುಕ್ತ ಸೀಮಂತ್‌ಕುಮಾರ್ ಸಿಂಗ್ ವಹಿಸಿದ್ದರು.

ನಿಮ್ಹಾನ್ಸ್ ನಿರ್ದೇಶಕರಾದ ಡಾ.ಪ್ರತಿಮಾ ಮೂರ್ತಿ ಉಪಸ್ಥಿತರಿದ್ದರು. ಈ ಸಹಯೋಗದ ಮೂಲಕ ನಮ 112, ಟೆಲಿ ಮನಸ್ ನಡುವಿನ ಕರೆಗಳ ಸುಗಮ ವರ್ಗಾವಣೆಗೆ ಅವಕಾಶ ಕಲ್ಪಿಸಲಾಗಿದೆ.



ಈ ಸಹಕಾರವು ತುರ್ತು ಸೇವೆಗಳು, ಮಾನಸಿಕ ಆರೋಗ್ಯ ವೃತ್ತಿಪರರ ನಡುವಿನ ಸಮನ್ವಯವನ್ನು ಬಲಪಡಿಸುವುದರ ಜೊತೆಗೆ ವೇಗವಾದ ಪ್ರತಿಕ್ರಿಯೆಯ ಮೂಲಕ ಸಂಕಷ್ಟದಲ್ಲಿರುವ ವ್ಯಕ್ತಿಗಳಿಗೆ ಮಾನವೀಯ ಮತ್ತು ಸಹಾನುಭೂತಿಪೂರ್ಣ ಆರೈಕೆಯನ್ನು ಖಚಿತಪಡಿಸುವ ಉದ್ದೇಶವನ್ನು ಹೊಂದಿರುತ್ತದೆ. ಸಾರ್ವಜನಿಕರು ಸಾಮಾಜಿಕ ಜಾಲ ತಾಣದಲ್ಲಿ ನಮನ್ನು ಅನುಸರಿಸಲು, ಟೆಲಿನಸ್ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಬಹುದಾಗಿದೆ.

ನಾಳೆ ರಸ್ತೆ ಸುರಕ್ಷತಾ ಮಾಸಾಚರಣೆ ಸಮಾರೋಪ ಸಮಾರಂಭ ಬೆಂಗಳೂರು,ಫೆ.4 -ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಸಾರಿಗೆ ಇಲಾಖೆ, ಪೊಲೀಸ್ ಇಲಾಖೆ ಹಾಗೂ ಇತರೆ ಇಲಾಖೆಗಳ ಆಶ್ರಯದಲ್ಲಿ ಇಂದು ಅರಮನೆ ಮೈದಾನದ ರಾಯಲ್ ಸೆನೆಟ್‌ನಲ್ಲಿ ರಸ್ತೆ ಸುರಕ್ಷತಾ ಮಾಸಾಚರಣೆ ಸಮಾರೋಪ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ. ಬೆಳಗ್ಗೆ 10 ಗಂಟೆಗೆ ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿಯವರು ಸಮಾರಂಭವನ್ನು ಉದ್ಘಾಟಿಸಲಿದ್ದಾರೆ. ಗೃಹ ಸಚಿವ ಡಾ. ಜಿ. ಪರಮೇಶ್ವರ್ ಉಪಸ್ಥಿತಿ ವಹಿಸಲಿದ್ದು, ಅಧ್ಯಕ್ಷತೆಯನ್ನು ಶಾಸಕ ಅಶ್ವಥ್ ನಾರಾಯಣ ಅವರು ವಹಿಸಲಿದ್ದಾರೆ.

ಆರೋಗ್ಯ ಸಚಿವ ದಿನೇಶ್‌ಗುಂಡೂರಾವ್, ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೋಳಿ ಸೇರಿದಂತೆ ಸರ್ಕಾರದ ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ.ಕಾರ್ಯಕ್ರಮದಲ್ಲಿ ರಸ್ತೆ ಸುರಕ್ಷತೆ ಕುರಿತು ಜಾಗೃತಿ ಮೂಡಿಸುವ ಸಲುವಾಗಿ ವಸ್ತು ಪ್ರದರ್ಶನ ಸಂಪನೂಲ ವ್ಯಕ್ತಿಗಳಿಂದ ಚರ್ಚೆ, ಉಪನ್ಯಾಸ ಏರ್ಪಡಿಸಲಾಗಿದೆ.

ಬೆಳಗ್ಗೆ 11 ಗಂಟೆಯಿಂದ 1 ಗಂಟೆಯವರೆಗೆ ನಿವೃತ್ತ ನ್ಯಾಯಾಧೀಶರಾದ ಅಭಯ್ ಮನೋಹರ್ ಸಪ್ರೆ ಅವರು ಕಾನೂನು, ಪತ್ರಿಕೋದ್ಯಮ, ಸ್ನಾತಕೋತ್ತರ ವಿದ್ಯಾರ್ಥಿಗಳು ಸೇರಿದಂತೆ ಆಹ್ವಾನಿತರಿಗೆ ರಸ್ತೆ ಸುರಕ್ಷತೆ ಜಾಗೃತಿ, ರಸ್ತೆ ಅಪಘಾತಗಳನ್ನು ಕಡಿಮೆ ಮಾಡುವ ಕುರಿತು ಉಪನ್ಯಾಸ ನೀಡಲಿದ್ದಾರೆ.

## ಪಾಕಿಸ್ತಾನ ಶತ್ರುರಾಷ್ಟ್ರವೇ..? ಮಿತ್ರ ರಾಷ್ಟ್ರವೇ..?

• ಉದಯವಾಹಿನಿ, ಬೆಂಗಳೂರು

ಪಾಕಿಸ್ತಾನ ಶತ್ರು ರಾಷ್ಟ್ರವೋ ಇಲ್ಲ ಮಿತ್ರ ರಾಷ್ಟ್ರವೋ ಎಂಬುದರ ಬಗ್ಗೆ ವಿಧಾನ ಪರಿಷತ್ತಿನಲ್ಲಿ ಆಡಳಿತ ಮತ್ತು ಪ್ರತಿಪಕ್ಷದ ಸದಸ್ಯರ ನಡುವೆ ಕೆಲವು ಭಾರೀ ಮಾತಿನ ಚಕಮಕಿಗೆ ಕಾರಣವಾಯಿತು. ಬಿಜೆಪಿಯ ನವೀನ್ ಅವರು ಮಾತನಾಡುವ ವೇಳೆ ಕೆಲವರಿಗೆ ಪಾಕಿಸ್ತಾನದ ಮೇಲೆ ಅದು ಏಕೋ ಅತಿಯಾದ ಪ್ರೀತಿ ಪ್ರೇಮವಿದೆ. ಕೆಲವರು ಯಾವಾಗಲೂ ಪಾಕಿಸ್ತಾನವನ್ನು ಜಪಿಸುತ್ತಾರೆ ಎಂದು ಕಾಂಗ್ರೆಸ್ ಸದಸ್ಯರನ್ನು ಕಾಲೆಳೆಯುವ ಪ್ರಯತ್ನ ಮಾಡಿದರು.

ಪಾಕಿಸ್ತಾನ ನಮಗೆ ಶತ್ರು ರಾಷ್ಟ್ರವಲ್ಲ. ಅದು ನಮ ನೆರೆಯ ರಾಷ್ಟ್ರ ಎಂದು ಇಲ್ಲಿನ ಸದಸ್ಯರೇ ಹೇಳಿದ್ದಾರೆ. ಹಾಗಾಗಿ ಅವರಿಗೆ ಯಾವಾಗಲೂ ಪಾಕಿಸ್ತಾನ ಎಂದರೆ ಬಲು ಪ್ರೀತಿ ಎಂದು ವ್ಯಂಗ್ಯವಾಡಿದರು. ನವೀನ್ ಅವರ ಈ ಮಾತಿಗೆ ತಿರುಗಿಬಿದ್ದ ಕಾಂಗ್ರೆಸ್ ಸದಸ್ಯರು ಕೇಂದ್ರದಲ್ಲಿ ನಿಮ್ಮದೇ ಸರ್ಕಾರ ಅಧಿಕಾರದಲ್ಲಿದೆ. ಪಾಕಿಸ್ತಾನವನ್ನು ಶತ್ರು ರಾಷ್ಟ್ರ ಎಂದು ಘೋಷಿಸಲು ಹೇಳಿಬಿಡಿ ಎಂದು ಹಿರಿಯ ಸದಸ್ಯ ಬಿ.ಕೆ ಹರಿಪ್ರಸಾದ್ ಸವಾಲು ಹಾಕಿದರು. ಶತ್ರು ರಾಷ್ಟ್ರ ಎಂದರೆ ಆ ದೇಶದ ಜೊತೆ ಯಾವುದೇ ರೀತಿಯ ವ್ಯಾಪಾರ ವಹಿವಾಟು ನಡೆಸುವಂತಿಲ್ಲ. ಗೋ ಮಾಂಸದ ರಫ್ತು ಮಾಡುತ್ತಿರುವವರು



ಯಾರು? ಕೇಂದ್ರದಲ್ಲಿ ಪ್ರಧಾನಿ ನರೇಂದ್ರ ಮೋದಿ ಸರ್ಕಾರ ಇದ. ಪಾಕಿಸ್ತಾನವನ್ನು ನಾಳೆ ಶತ್ರು ರಾಷ್ಟ್ರ ಎಂದು ಘೋಷಿಸಲಿ. ಅದಕ್ಕೆ ನಮ್ಮದೇನೂ ಅಭ್ಯಂತರ ಇಲ್ಲವೆಂದು ಸ್ಪಷ್ಟಪಡಿಸಿದರು. ಕಾಂಗ್ರೆಸ್ ಪಕ್ಷದ ಶಿವಕುಮಾರ್ ಮಾತನಾಡಿ, ಪಾಕಿಸ್ತಾನದ ಬಗ್ಗೆ ನಮಗೆ ಯಾವುದೇ ಪ್ರೀತಿಯೂ ಇಲ್ಲ. ಪ್ರೇಮವೂ ಇಲ್ಲ. ಅಲ್ಲಿನ ಪ್ರಧಾನ ಮಂತ್ರಿ ನವಾಜ್ ಷರೀಫ್ ಮಗಳ ಮದುವೆಗೆ ಹೋಗಿ ಬಂದವರು ಯಾರು ನಿಮ್ಮ ಮೋದಿಯವರಲ್ಲವೇ?ಎಂದು ಬಿಜೆಪಿಗೆ ತಿರುಗೇಟು ನೀಡಿದರು. ಕಾರ್ಗಿಲ್ ವಶಪಡಿಸಿಕೊಂಡು ಭಾರತದ ತಾಕತ್ತು ಏನೆಂಬುದು ತೋರಿಸಿಕೊಟ್ಟಿದ್ದಾರೆ. ಪುಲ್ವಾಮದಲ್ಲಿ ಸೈನಿಕರ ಮೇಲೆ ದಾಳಿ ನಡೆಸಿದಾಗಲೂ ಆ ರಾಷ್ಟ್ರದ ವಿರುದ್ಧ ವಾಯು ದಾಳಿ ನಡೆಸಲಾಯಿತು ಎಂದಾಗ ಕಾಂಗ್ರೆಸ್ ಸದಸ್ಯರು ಗದ್ದಲ ಎಬ್ಬಿಸಿದರು.

## ಪೊಲೀಸರ ಸಮಯ ಪ್ರಜ್ಞೆ : ಪೋಷಕರ ಮಡಿಲು ಸೇರಿದ ಮನೆ ಬಿಟ್ಟು ಹೋಗಿದ್ದ ಮಕ್ಕಳು

• ಉದಯವಾಹಿನಿ, ಬೆಂಗಳೂರು

ಅಪ್ಪ- ಅಮ್ಮ ಸಾರಿ?.. ಎಂದು ಹಾಳೆಯಲ್ಲಿ ಬರೆದಿಟ್ಟು ಮನೆ ತೊರೆದು ಹೋಗಿದ್ದ ಇಬ್ಬರು ಮಕ್ಕಳು ಪೊಲೀಸರ ಸಮಯ ಪ್ರಜ್ಞೆಯಿಂದ ಪೋಷಕರ ಮಡಿಲಿಗೆ ಸೇರಿದ್ದಾರೆ. ಮಾರತಳ್ಳಿಯ ಅಶ್ವಥ್‌ನಗರದಲ್ಲಿ ಮೂಲತಃ ಚಿತ್ರದುರ್ಗದ ದಂಪತಿ 13 ವರ್ಷದ ಮಗಳು ಹಾಗೂ 9 ವರ್ಷದ ಮಗನೊಂದಿಗೆ ವಾಸವಿದ್ದಾರೆ.

ಕೆಲಸದ ನಿಮಿತ್ತ ದಂಪತಿ ಚಿತ್ರದುರ್ಗಕ್ಕೆ ಹೋಗಿದ್ದಾರೆ. ಹಾಗಾಗಿ ಫೆ.1 ಎಂದು ಮಗಳಿಗೆ ದೂರವಾಣಿ ಕರೆ ಮಾಡಿ ಟ್ಯೂಷನ್‌ಗೆ ಹೋಗುವಂತೆ ಹೇಳಿದಾಗ ಇಬ್ಬರು ಮಕ್ಕಳು ಟ್ಯೂಷನ್‌ಗೆ ಹೋಗುವುದಿಲ್ಲ ಎಂದು ಹಠ ಮಾಡಿದಾಗ ಪೋಷಕರು ಬೈದಿದ್ದಾರೆ. ಅಪ್ಪ-ಅಮ್ಮ ಬೈದಿದ್ದಕ್ಕೆ ಸಿಟ್ಟಾದ ಮಗಳು ಹಾಳೆ ತೆಗೆದುಕೊಂಡು ಅಪ್ಪ-ಅಮ್ಮ ಸಾರಿ ಎಂದು ಬರೆದಿಟ್ಟು ಬ್ಯಾಗ್‌ನಲ್ಲಿ ಬಟ್ಟೆ ತುಂಬಿಕೊಂಡಿದ್ದಲ್ಲದೇ ತನ್ನ ಆಧಾರ್‌ಕಾರ್ಡ್ ತೆಗೆದುಕೊಂಡು ಮೊಬೈಲ್‌ನ್ನು ಮನೆಯಲ್ಲೇ ಬಿಟ್ಟು ತಮ್ಮನನ್ನು ಕರೆದುಕೊಂಡು ಅಂದು ಮಧ್ಯಾಹ್ನ 3 ಗಂಟೆಗೆ ಮನೆ ಬಾಗಿಲು ಹಾಕಿಕೊಂಡು ಹೋಗಿದ್ದಾಳೆ.


ಇದರಿಂದ ಗಾಬರಿಯಾದ ಅವರು ತಕ್ಷಣ ಪೊಲೀಸರಿಗೆ ಮಕ್ಕಳು ಕಾಣೆಯಾಗಿರುವ ಬಗ್ಗೆ ದೂರು ನೀಡಿ ಹುಡುಕಿ ಕೊಡುವಂತೆ ಮಕ್ಕಳ ಫೋಟೋಗಳನ್ನು ಕೊಟ್ಟಿದ್ದಾರೆ. ತಕ್ಷಣ ಕಾರ್ಯಪ್ರವೃತ್ತರಾದ ಹೆಚ್‌ಎಎಲ್ ಠಾಣೆ ಪೊಲೀಸರು ಮಂಗಳೂರು, ಶಿವಮೊಗ್ಗ ಸೇರಿದಂತೆ ರಾಜ್ಯಾದ್ಯಂತ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದರು. ಅಷ್ಟೇ ಅಲ್ಲದೇ ಸಾಮಾಜಿಕ ಜಾಲತಾಣದಲ್ಲಿಯೂ ಮಾಹಿತಿ ಹಂಚಿಕೊಂಡಿದ್ದರು. ಈ ನಡುವೆ ಮಕ್ಕಳು ಭದ್ರಾವತಿಯ ಬಸ್ ನಿಲ್ದಾಣದಲ್ಲಿ ನಿಂತಿರುವುದನ್ನು ಗಮನಿಸಿದ ಸ್ಥಳೀಯರೊಬ್ಬರು ಪೊಲೀಸರಿಗೆ ವಿಷಯ ತಿಳಿಸಿದ್ದಾರೆ.

ಈ ಖಚಿತ ಮಾಹಿತಿ ಮೇರೆಗೆ ಬಸ್ ನಿಲ್ದಾಣದ ಬಳಿ ಹೋಗಿ ನೋಡಿದಾಗ ಕಾಣೆಯಾಗಿದ್ದ ಇಬ್ಬರು ಮಕ್ಕಳು ನಿಂತಿರುವುದು ಕಂಡು ಬಂದಿದೆ. ತಕ್ಷಣ ಅವರು ಮಕ್ಕಳನ್ನು ಠಾಣೆಗೆ ಕರೆದೊಯ್ದು ವಿಚಾರಿಸಿದಾಗ ನಾವು ಬೆಂಗಳೂರಿನಿಂದ ಬಂದಿರುವುದಾಗಿ ಹೇಳಿದ್ದಾರೆ. ಬೆಂಗಳೂರಿನಲ್ಲಿ ಯಾವ ಪ್ರದೇಶದಲ್ಲಿ ವಾಸವಾಗಿದ್ದೀರಿ ಎಂದು ವಿಚಾರಿಸಿದಾಗ ಹೆಚ್‌ಎಎಲ್ ಎಂದು ತಿಳಿಸಿದ್ದಾರೆ. ತಕ್ಷಣ ಅಲ್ಲಿನ ಪೊಲೀಸರು ಹೆಚ್‌ಎಎಲ್ ಪೊಲೀಸ್ ಠಾಣೆಗೆ ವಿಷಯ ತಿಳಿಸಿದ್ದಾರೆ. ಈ ಮಾಹಿತಿ ಆಧರಿಸಿ ಹೆಚ್ ಎಎಲ್ ಠಾಣೆ ಪೊಲೀಸರು ಅಲ್ಲಿಗೆ ತೆರಳಿ ಮಕ್ಕಳಿಬ್ಬರನ್ನು ನಗರಕ್ಕೆ ಕರೆ ತಂದು ಪೋಷಕರ ಮಡಿಲಿಗೆ ಒಪ್ಪಿಸಿದ್ದಾರೆ.

## ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾವಯವ ಸಿರಿಧಾನ್ಯ ನಮ್ಮ ಹೆಮ್ಮೆ

• ಉದಯವಾಹಿನಿ, ಬೆಂಗಳೂರು

ನಮ್ಮ ಸರ್ಕಾರವು 2017ರಲ್ಲಿ ಪ್ರಾರಂಭಿಸಿದ ಸಾವಯವ ಮತ್ತು ಸಿರಿಧಾನ್ಯ ಮೇಳವು ಬುಧವಾರ ಅಂತರ ರಾಷ್ಟ್ರೀಯ ಮಟ್ಟದಲ್ಲಿ ಬೆಳೆದಿರುವುದು ನಮೆಲ್ಲರ ಹೆಮ್ಮೆ ಎಂದು ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ಅವರು ತಿಳಿಸಿದರು. ಬೆಂಗಳೂರಿನ ಶೇಷಾದ್ರಿ ರಸ್ತೆಯಲ್ಲಿರುವ ಕೃಷಿ ಇಲಾಖೆ ಸಮೃದ್ಧಿ ಸಭಾಂಗಣದಲ್ಲಿ ಆಯೋಜಿಸಿದ್ದ, ಉತ್ಪಾದನೋತ್ತರ ಕೃಷಿ- ರೈತರ ಸಬಲೀಕರಣ ಅಂತಾರಾಷ್ಟ್ರೀಯ ಸಮೇಳನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಳೆದ ವರ್ಷ 2025ರಲ್ಲಿ ನಡೆದ ಅಂತರರಾಷ್ಟ್ರೀಯ ಸಾವಯವ ಮತ್ತು ಸಿರಿಧಾನ್ಯ ಮೇಳದಲ್ಲಿ ಲಕ್ಷಾಂತರ ರೈತರು, ಸಾರ್ವಜನಿಕರು ಭಾಗವಹಿಸಿ ಮೇಳದ ಯಶಸ್ಸಿಗೆ ಕಾರಣರಾದರಲ್ಲದೆ ಯುವ ರೈತರನ್ನು ಉದ್ಯಮಿಗಳನ್ನಾಗಿ ಮಾಡಲು ಹಾಗೂ ಸಿರಿಧಾನ್ಯಗಳನ್ನು ನಮ್ಮ ಆಹಾರ ಪದ್ಧತಿಯಲ್ಲಿ ಅವಳವಡಿಸಿಕೊಳ್ಳಲು ಈ ಹಿಂದಿನ ಮೇಳಗಳು ಯಶಸ್ಸುಕಂಡಿವೆ ಎಂದರು. ಈ ವರ್ಷ



ನಮ ಸರ್ಕಾರ ಇನ್ನೂ ಒಂದು ಹೆಜ್ಜೆ ಮುಂದೆ ಹೋಗಿ ದೇಶದಲ್ಲಿ ಪ್ರಥಮವಾಗಿ ಉತ್ಪಾದನೋತ್ತರ ಕೃಷಿ-ರೈತರ ಸಬಲೀಕರಣ ಎಂಬ ಧ್ಯೇಯ ವಾಕ್ಯದೊಂದಿಗೆ ಅಂತರರಾಷ್ಟ್ರೀಯ ಕಾರ್ಯಕ್ರಮವನ್ನು ಇದೇ 6, 7 ಮತ್ತು 8 ರಂದು ಅರಮನೆ ಮೈದಾನದಲ್ಲಿ ಮಾಡಲಾಗುತ್ತಿದೆ ಎಂದು ತಿಳಿಸಿದರು. ಈ ಹಿಂದೆ ನಮ್ಮ ದೇಶ ಆಹಾರ ಪದಾರ್ಥಗಳನ್ನು ಆಮದು ಮಾಡಿಕೊಳ್ಳುವ ಪರಿಸ್ಥಿತಿ ಇತ್ತು. ಇಂದು ಬದಲಾದ ಸನ್ನಿವೇಶದಲ್ಲಿ ನಮ್ಮ ದೇಶ ಆಹಾರ ಉತ್ಪಾದನೆಯಲ್ಲಿ ಪ್ರಗತಿ ಸಾಧಿಸಿದ್ದು ಇತರ ರಾಷ್ಟ್ರಗಳಿಗೆ ರಫ್ತು ಮಾಡುತ್ತಿದ್ದೇವೆ. ಹಾಗೆಯೇ ಅಕ್ಕಿ ಉತ್ಪಾದನೆಯಲ್ಲಿ ಚೀನಾ ದೇಶವನ್ನು ಹಿಂದಕ್ಕೆ ಹಾಕಿರುವುದಾಗಿ ತಿಳಿಸಿದರು.

ಇನ್ನು ಈ ಬಾರಿಯ ಅಂತರರಾಷ್ಟ್ರೀಯ ವಾಣಿಜ್ಯ ಮೇಳದಲ್ಲಿ ಸಂಸ್ಕರಣೆ ಮತ್ತು ಮೌಲ್ಯವರ್ಧನೆ, ಕೃಷಿ ಪರಿಸರ ವಿಜ್ಞಾನ, ಬ್ರ್ಯಾಂಡಿಂಗ್ ಎಂಬ ಮೂರು ಉಪ ಧ್ಯೇಯಗಳೊಂದಿಗೆ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ ಎಂದು ಹೇಳಿದರು. ಉತ್ಪಾದನೆ ನಂತರ, ರೈತರಿಗೆ ನಿರಂತರ ಆದಾಯ ದೊರಕಿಸುವ ಸಲುವಾಗಿ ಕೃಷಿ ತ್ಯಾಜ್ಯಗಳ ಮರುಬಳಕೆ, ದೇಸಿ ತಳಿಗಳ ಸಂರಕ್ಷಣೆ, ಭೌಗೋಳಿಕ ಸೂಚ್ಯಾಂಕವಿರುವ ಉತ್ಪಾದನೆಗಳನ್ನು ಬಳಸುವ ಬಗ್ಗೆ ನಮ ಸರ್ಕಾರದಿಂದ ವ್ಯಾಪಕ ಪ್ರಚಾರ ಮಾಡಲಾಗುತ್ತಿದೆ. ಕೃಷಿ ಉತ್ಪಾದನೆ ನಂತರ ಮೌಲ್ಯವರ್ಧನೆಗೆ ಒತ್ತು ಕೊಡಲು ಈಗಾಗಲೇ ಸೆಕೆಂಡರಿ ಕೃಷಿ ನಿರ್ದೇಶನಾಲಯ ಸ್ಥಾಪಿಸಿದ್ದು, ಅದರ ಮೂಲಕ ರೈತರು ಕೃಷಿ ಸಂಸ್ಕರಣೆ ಮಾಡಲು ಹೆಚ್ಚಿನ ಒತ್ತು ನೀಡಲಾಗುತ್ತಿದೆ ಎಂದರು.


> ಈ ವಿಷಯಗಳ ಬಗ್ಗೆ ಚರ್ಚಿಸಲು ಜರ್ಮನಿ, ಅಮೆರಿಕಾ, ವಿಯೆಟ್ನಾಮ್, ಕಾಂಬೋಡಿಯಾ, ನಮ್ಮ ದೇಶದ ವಿವಿಧ ಭಾಗಗಳಿಂದ ಬಂದ 35ಕ್ಕಿಂತ ಹೆಚ್ಚು ತಜ್ಞರು, ನಮ್ಮ ರಾಜ್ಯದಿಂದ ಬಂದ ರೈತರು ಎಲ್ಲರೂ ಈ ಚರ್ಚೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಮಾಡುತ್ತೀರೆಂದು ಭಾವಿಸುತ್ತೇನೆ.
>
> - ಎನ್.ಚಲುವರಾಯಸ್ವಾಮಿ, ಕೃಷಿ ಸಚಿವ

### ಗ್ರಾಪಂಗಳಿಗೆ ಆಡಳಿತಾಧಿಕಾರಿ ನೇಮಕ : ಜನಪ್ರತಿನಿಧಿಗಳ ಅಧಿಕಾರ ಅವಧಿ ಮುಕ್ತಾಯ, ಚುನಾವಣೆ ನಿರೀಕ್ಷೆ

# ಜನಪ್ರತಿನಿಧಿಗಳಿಲ್ಲದೇ, ಅಧಿಕಾರಿಗಳೇ ಕಾರ್ಯ ನಿರ್ವಹಿಸುತ್ತಿದ್ದಾರೆ

• ಉದಯವಾಹಿನಿ, ಬೆಂಗಳೂರು

ಗ್ರಾಮ ಪಂಚಾಯಿತಿಗಳಲ್ಲಿ ಚುನಾಯಿತ ಪ್ರತಿನಿಧಿಗಳ ಅಧಿಕಾರ ಅವಧಿ ಮುಕ್ತಾಯವಾದ ಹಿನ್ನೆಲೆ ಆಡಳಿತ ಅಧಿಕಾರಿಗಳನ್ನು ನೇಮಕ ಮಾಡಲಾಗುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲೂ 93 ಗ್ರಾಪಂಗಳಿಗೆ ಆಡಳಿತಾಧಿಕಾರಿಗಳ ನೇಮಕ ಮಾಡಿ ಆದೇಶಿಸಲಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ 4 ತಾಲ್ಲೂಕುಗಳಲ್ಲಿ ಗ್ರಾಮ ಪಂಚಾಯಿತಿ ಪದವಿ ಅವಧಿಯು ಫೆಬ್ರವರಿ, ಮಾರ್ಚ್‌ನಲ್ಲಿ ಪೂರ್ಣಗೊಳ್ಳಲಿದೆ. ಕೆಲವು ಪಂಚಾಯಿತಿಗಳಲ್ಲಿ ಮಾತ್ರ ಏಪ್ರಿಲ್ ವೇಳೆಗೆ ಮುಕ್ತಾಯಗೊಳ್ಳಲಿದೆ. ಇಂತಹ ಪಂಚಾಯಿತಿ ವ್ಯಾಪ್ತಿಗಳಲ್ಲಿ ಜನಸಾಮಾನ್ಯರಿಗೆ ಸಮಸ್ಯೆಯಾಗದಂತೆ ಆಡಳಿತ ನಿರ್ವಹಣೆಗಾಗಿ ಶಿಕ್ಷಣ, ಕೃಷಿ, ಮೀನುಗಾರಿಕೆ ಸೇರಿದಂತೆ ನಾನಾ ಇಲಾಖೆಗಳ ಅಧಿಕಾರಿಗಳನ್ನು ಆಡಳಿತ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ. ಈ ಅಧಿಕಾರಿಗಳು ಗ್ರಾಪಂಗಳಲ್ಲಿ ದೈನಂದಿನ ಆಡಳಿತ, ಸಿಬ್ಬಂದಿ ಮೇಲ್ವಿಚಾರಣೆ, ದಾಖಲೆಗಳ ನಿರ್ವಹಣೆ ಸೇರಿದಂತೆ ನಾನಾ ಜವಾಬ್ದಾರಿಗಳನ್ನು ಹೊಂದಿರುತ್ತಾರೆ. ಮುಂದಿನ ಆದೇಶದವರೆಗೆ ಗ್ರಾಪಂನ ಎಲ್ಲಾ ಅಧಿಕಾರ ಮತ್ತು ಕರ್ತವ್ಯಗಳನ್ನು ಆಡಳಿತ ಅಧಿಕಾರಿಯೇ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿಗಳು ಈಗಾಗಲೇ ಆದೇಶ ನೀಡಿದ್ದು, ಗ್ರಾಪಂಗಳಲ್ಲಿ ಅಧಿಕಾರಿಗಳ ಆಡಳಿತ ಆರಂಭವಾಗಲಿದೆ.



**ಆಸ್ತಿ ದಾಖಲೆಗಳ ನಿರ್ವಹಣೆ**

**ಯಾವ್ಯಾವ ಗ್ರಾಪಂಗಳಿಗೆ ನೇಮಕ?:** ದೇವನಹಳ್ಳಿ ತಾಲ್ಲೂಕಿನ ಜಾಲಿಗೆ, ಕನ್ನಮಂಗಲ, ವಿಶ್ವನಾಥಪುರ, ಆಲೂರು ದುದ್ದನಹಳ್ಳಿ, ಆವತಿ, ವೆಂಕಟಗಿರಿಕೋಟೆ, ಬಿಜ್ಜವಾರ, ಗೊಡ್ಡುಮುದ್ದೇನಹಳ್ಳಿ, ಯಲಿಯೂ ರು, ಚನ್ನಹಳ್ಳಿ, ಗಂಗವಾರ ಚೌಡಪನಹಳ್ಳಿ, ಬೂದಿಗೆರೆ, ಕಾರಹಳ್ಳಿ, ಬಿದ್ದಲೂರು, ಅಣ್ಣೇಶ್ವರ, ಬೆಟ್ಟಕೋಟೆ, ಮಂಡಿಬೆಲೆ, ಐಬಸಾಪುರ, ಕುಂದಾಣ, ಕೊಯಿರಾ. ದೊಡ್ಡಬಳ್ಳಾಪುರದ ಕೊಡಿಗೇಹಳ್ಳಿ, ಕೆಸ್ತೂರು, ರಾಜಘಟ್ಟ, ಹೆಗ್ಗಡಿಹಳ್ಳಿ, ಕಂಟನಕುಂಟೆ, ಕುಲುವನಹಳ್ಳಿ, ಶ್ರೀನಿವಾಸಪುರ, ಅರೆಬೊಮ್ಮನಹಳ್ಳಿ ಗ್ರಾಪಂಗಳಿಗೆ ಆಡಳಿತ ಅಧಿಕಾರಿಗಳನ್ನು ನೇಮಕ ಮಾಡಲಾಗಿದೆ.

**ಆಡಳಿತಾಧಿಕಾರಿಗಳ ಕರ್ತವ್ಯಗಳೇನು?:** ಗ್ರಾಪಂಗಳಿಗೆ ನೇಮಕಗೊಂಡಿರುವ ಆಡಳಿತ ಅಧಿಕಾರಿಗಳು ಗ್ರಾಪಂ ಸದಸ್ಯ ಸ್ಥಾನಗಳಿಗೆ ಚುನಾವಣೆ ನಡೆದು ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಗಳಿಗೆ ಆಯ್ಕೆ ಆಗುವವರೆಗೂ ಸರಕಾರದ ಸೂಚನೆಯಂತೆ ಕಾರ್ಯ ನಿರ್ವಹಿಸಲಿದ್ದಾರೆ. ಪಂಚಾಯಿತಿ ವ್ಯಾಪ್ತಿಯಲ್ಲಿನ ದೈನಂದಿನ ಕೆಲಸಗಳು, ಸಿಬ್ಬಂದಿಗಳ ಮೇಲ್ವಿಚಾರಣೆ, ತೆರಿಗೆ ವಸೂಲಿ, ಅಭಿವೃದ್ಧಿ ಕಾರ್ಯಗಳ ಮೇಲ್ವಿಚಾರಣೆ, ಸರಕಾರದ ಅನುದಾನಗಳ ಸಮರ್ಪಕ ಬಳಕೆ, ಆಸ್ತಿ ದಾಖಲೆಗಳ ನಿರ್ವಹಣೆ, ಗ್ರಂಥಾಲಯಗಳ ಮೇಲ್ವಿಚಾರಣೆ ಸೇರಿದಂತೆ ಅನೇಕ ಜವಾಬ್ದಾರಿಗಳನ್ನು ಆಡಳಿತಾಧಿಕಾರಿಗಳು ನಿರ್ವಹಿಸಲಿದ್ದಾರೆ.

> **2020-25ನೇ ಸಾಲಿಗೆ ರಚಿತವಾಗಿದ್ದ ಗ್ರಾಪಂಗಳ ಅವಧಿ ಮುಕ್ತಾಯವಾಗುತ್ತಿದೆ. ಈ ಹಿನ್ನೆಲೆ ಗ್ರಾಪಂಗಳಿಗೆ ಆಡಳಿತಾಧಿಕಾರಿಗಳನ್ನು ನೇಮಿಸಲಾಗಿದೆ. ಸರಕಾರದ ಸುತ್ತೋಲೆಯಲ್ಲಿ ನೀಡಿರುವ ಸೂಚನೆಯಂತೆ ಆಡಳಿತಾಧಿಕಾರಿಗಳು ಕಾರ್ಯ ನಿರ್ವಹಿಸಬೇಕು.**
>
> -ಎ.ಬಿ ಬಸವರಾಜು, ಜಿಲ್ಲಾಧಿಕಾರಿ, ಬೆಂಗಳೂರು ಗ್ರಾಮಾಂತರ.

**ಅಧಿಕಾರಿಗಳ ಆಡಳಿತ**

ರಾಜ್ಯದಲ್ಲಿ ಈವರೆಗೂ ತಾಪಂ, ಜಿಪಂ ಚುನಾವಣೆಗಳು ನಡೆದಿಲ್ಲ. ಕಳೆದ ಅನೇಕ ವರ್ಷಗಳಿಂದ ತಾಪಂ, ಜಿಪಂ ಆಡಳಿತದಲ್ಲಿ ಜನಪ್ರತಿನಿಧಿಗಳಿಲ್ಲದೇ, ಕೇವಲ ಅಧಿಕಾರಿಗಳೇ ಕಾರ್ಯ ನಿರ್ವಹಿಸುತ್ತಿದ್ದಾರೆ. ಕೆಲವೆಡೆ ಸಮರ್ಪಕ ಆಡಳಿತ ನೀಡಲು ಸಾಧ್ಯವಾಗಿಲ್ಲ. ಇನ್ನೂ ಗ್ರಾಪಂಗಳಲ್ಲೂ ಫೆಬ್ರವರಿ, ಮಾರ್ಚ್‌ನಲ್ಲಿ ಅನೇಕ ಗ್ರಾಪಂಗಳ ಚುನಾಯಿತರ ಆಳ್ವಿಕೆ ಮುಗಿಯಲಿದೆ. ಇಲ್ಲೂ ಕೂಡ ಅಧಿಕಾರಿಗಳ ಆಡಳಿತ ಆರಂಭವಾಗಲಿದೆ. ಈ ಮೂಲಕ ಬಹುತೇಕ ಪಂಚಾಯತ್ ರಾಜ್ ಇಲಾಖೆಯ ಸ್ಥಳೀಯ ಸಂಸ್ಥೆಗಳಲ್ಲಿ ಅಧಿಕಾರಿಗಳ ಆಡಳಿತ ಕಾಣಬಹುದಾಗಿದೆ.

## ಕಣ್ಣೇಗಾಲ ಟೋಲ್ ಬಳಿ ಚೆಕ್‌ಪೋಸ್ಟ್ ತೆರೆದ ಪೊಲೀಸ್ ಇಲಾಖೆ: ನಿಗಾವಹಿಸಲು ಎಸ್ಪಿ ಆದೇಶ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಗುಂಡ್ಲುಪೇಟೆ

ಗಡಿಭಾಗದಿಂದ ಕೇರಳಗೆ ಸಂಪರ್ಕ ಕಲ್ಪಿಸುವ ರಾಷ್ಟ್ರೀಯ ಹೆದ್ದಾರಿಯಲ್ಲಿ ದರೋಡೆಕೋರರ ಉಪಟಳ ಹೆಚ್ಚಾದ ಹಿನ್ನೆಲೆ ಅಲರ್ಟ್ ಆಗಿರುವ ಪೊಲೀಸ್ ಇಲಾಖೆ ಹೆಚ್ಚುವರಿಯಾಗಿ ಕಣ್ಣೇಗಾಲ ಸಮೀಪದ ಟೋಲ್ ಗೇಟ್ ಬಳಿ ತಪಾಸಣೆ ಕೇಂದ್ರವನ್ನ ಸ್ಥಾಪಿಸಿ ವಾಹನಗಳ ಮೇಲೆ ಹದ್ದಿನ ಕಣ್ಣಿರಿಸಿದ್ದು ಕಟ್ಟುನಿಟ್ಟಾಗಿ ನಿಗಾವಹಿಸಲಾಗಿದೆ.

ರಾಷ್ಟ್ರೀಯ ಹೆದ್ದಾರಿ 766 ರಲ್ಲಿ ಸರಣಿ ದರೋಡೆ ಪ್ರಕರಣಗಳು ಘಟಿಸಿದ ಹಿನ್ನೆಲೆ ಎಚ್ಚೆತ್ತುಕೊಂಡಿರುವ ಪೊಲೀಸ್ ಇಲಾಖೆ ಬಿಗಿ ತಪಾಸಣೆಗೆ ಮುಂದಾಗಿದೆ, ರಾತ್ರಿ ವೇಳೆ ಉದ್ಯಮಿಗಳನ್ನೆ ಗುರಿಯಾಗಿರಿಸಿಕೊಳ್ಳುತ್ತಿದ್ದ ದರೋಡೆಕೋರರು ಚಿನ್ನಾಭರಣ, ಹಣವನ್ನ ದೋಚಿ ಪರಾರಿಯಾಗಿದ್ದರು, ಕೆಲ ದಿವಸಗಳ ಹಿಂದಷ್ಟೇ ಬಂಗಾರವನ್ನ ಕಸಿದು ಪರಾರಿಯಾಗಿದ್ದವರಲ್ಲಿ ಮೂವರನ್ನ ಪೊಲೀಸರು ಬಂಧಿಸಿದ್ದರು, ಪ್ರಮುಖ ಆರೋಪಿಗಾಗಿ ಪೊಲೀಸರು ಶೋಧ ನಡೆಸುತ್ತಿರುವಾಗಲೇ ಮತ್ತೊಂದು ಘಟನೆ ನಡೆದಿದ್ದು ಚಿನ್ನ ಮಾರಾಟ ಮಾಡಿ ವಾಪಾಸ್ ಕೇರಳಕ್ಕೆ ತೆರಳುತ್ತಿದ್ದ ವ್ಯಕ್ತಿಯೋರ್ವರನ್ನ ಹೆದ್ದಾರಿ ನಡುವೆ ಅಡ್ಡಗಟ್ಟಿದ್ದ ಗುಂಪೊಂದು ಹತ್ತುಲಕ್ಷ ಹಣವನ್ನ ದೋಚಿ ಪರಾರಿಯಾಗಿರುವ ಕುರಿತಂತೆ ಗುಂಡ್ಲುಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಜನವರಿ 7 ರಂದು ರಾಬರಿ ನಡೆದಿದ್ದರೂ ಸಹ ಹಣ ಕಳೆದುಕೊಂಡವರು ಜ. 27ರಲ್ಲಿ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ, ಇದಾದ ಬಳಿಕ ಅಲರ್ಟ್ ಆಗಿರುವ ಪೊಲೀಸ್ ಇಲಾಖೆ ಹೆಚ್ಚುವರಿ ಚೆಕ್‌ಪೋಸ್ಟ್ ತೆರೆದು ಎಲ್ಲಾ ವಾಹನಗಳ ತಪಾಸಣೆ ನಡೆಸುತ್ತಿದ್ದಾರೆ.

**ಎಸ್ಪಿ ಮುತ್ತುರಾಜ್ ಭೇಟಿ ಪರಿಶೀಲನೆ :** ಘಟನಾ ಸಂಬಂಧ ಕೆಕ್ಕನಹಳ್ಳ, ಮೂಳೆಹೊಳೆ, ಕಣ್ಣೇಗಾಲ ಚೆಕ್‌ಪೋಸ್ಟ್‌ಗೆ ಭೇಟಿ ನೀಡಿದ ಚಾಮರಾಜನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮುತ್ತುರಾಜ್ ಪರಿಶೀಲನೆ ನಡೆಸುವ ಜೊತೆಗೆ ದರೋಡೆಕೋರರ ಮೇಲೆ ನಿಗಾವಹಿಸುವಂತೆ ಅಧಿಕಾರಿಗಳಿಗೆ ಆದೇಶಿಸಿದ್ದಾರೆ.

# ಮೈಸೂರಲ್ಲಿ ಫಿಲ್ಮ್ ಸಿಟಿ ನಿರ್ಮಾಣಕ್ಕೆ ಹೆಚ್ಚಿದ ಒತ್ತಡ


### ಅಂತಿಮ ಹಂತದಲ್ಲಿರುವ ಡಿಪಿಆರ್ ಶಂಕುಸ್ಥಾಪನೆ ಯಾವಾಗ?

• ಉದಯವಾಹಿನಿ, ಮೈಸೂರು

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಚಿತ್ರನಗರಿ ಆರಂಭಿಸಬೇಕೆಂಬ ದಶಕದ ಕನಸಿಗೆ ಇನ್ನೂ ಶಂಕುಸ್ಥಾಪನೆ ಭಾಗ್ಯ ದೊರೆತಿಲ್ಲ. ಪ್ರಸ್ತುತ ಸಮಗ್ರ ಯೋಜನಾ ವರದಿ ತಯಾರಿಸುವ ಪ್ರಕ್ರಿಯೆ ಅಂತಿಮ ಹಂತದಲ್ಲಿದ್ದು, ಪಿಪಿಪಿ ಮಾದರಿಯಲ್ಲಿ ಅನುಷ್ಠಾನಗೊಳಿಸಲು ವಾರ್ತಾ, ಸಾರ್ವಜನಿಕ ಸಂಪರ್ಕ ಇಲಾಖೆ ಸಿದ್ಧತೆ ಕೈಗೊಂಡಿದೆ. ಕರ್ನಾಟಕದಲ್ಲಿ ಫಿಲ್ಮ್ ಸಿಟಿ ನಿರ್ಮಾಣ ಯೋಜನೆ ಕನ್ನಡ ಚಿತ್ರರಂಗದ ಬಹುದಿನಗಳ ಕನಸು.

**ಇಮ್ಮಾವು ಬಳಿ ಜಾಗ ಗುರುತು**

1980 ರಲ್ಲಿ ರಾಮಕೃಷ್ಣ ಹೆಗಡೆ ಮುಖ್ಯಮಂತ್ರಿ ಆಗಿರುವಾಗಲೇ ಫಿಲ್ಮ್‌ಸಿಟಿ ನಿರ್ಮಾಣ ಚರ್ಚೆ ಮುನ್ನಲೆಗೆ ಬಂದಿತ್ತು. ಬಳಿಕ 2004ರಲ್ಲಿ ಎಸ್.ಎಂ.ಕೃಷ್ಣ ಅವರು ಅವಧಿಯಲ್ಲೂ ಈ ವಿಷಯಕ್ಕೆ ರೆಕ್ಕೆ ಮೂಡಿದರೂ ನಿರೀಕ್ಷೆ ಸಾಕಾರಗೊಳ್ಳಲಿಲ್ಲ. ಸಿದ್ದರಾಮಯ್ಯ ಅವರು ಮೊದಲ ಬಾರಿಗೆ ಮುಖ್ಯಮಂತ್ರಿಯಾದಾಗ ಚಿತ್ರನಗರಿ ಮೈಸೂರಿನಲ್ಲಿ ನಿರ್ಮಾಣ ಮಾಡಲು ನಂಜನಗೂಡಿನ ಇಮ್ಮಾವು ಬಳಿ ಜಾಗ ಗುರುತಿಸಿದರು. ಆದರೆ, ನಂತರ ಸರಕಾರ ಬದಲಾದಂತೆ ಚಿತ್ರನಗರಿ ರಾಮನಗರ, ಕನಕಪುರ, ಬೆಂಗಳೂರು ಅಂತ ಸುತ್ತಾಡಿ ಕೊನೆಗೆ ಇದೀಗ ವಾಪಸ್ ಮೈಸೂರಿಗೆ ಬಂದು ನಿಂತಿದೆ. ಈ ಯೋಜನೆಯು ಚಿತ್ರರಂಗದ ಚಿತ್ರೀಕರಣ ಅಗತ್ಯಗಳನ್ನು ಪೂರೈಸುವುದು, ಪ್ರವಾಸೋದ್ಯಮವನ್ನು ಉತ್ತೇಜಿಸುವುದು ಮತ್ತು ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಉದ್ದೇಶವನ್ನು ಹೊಂದಿದೆ. ಹೀಗಾಗಿ ಮೈಸೂರಿನಲ್ಲಿ ಚಿತ್ರನಗರಿ ನಿರ್ಮಾಣ ಮಾಡುವ ಯೋಜನೆಗೆ ವೇಗ ನೀಡಬೇಕು ಎಂಬ ಕೂಗು ಚಿತ್ರೋದ್ಯಮ ವಲಯದಿಂದ ಕೇಳಿ ಬಂದಿದೆ.


ಉದಯವಾಹಿನಿ ಚಿತ್ರ

- **ಸಿದ್ದರಾಮಯ್ಯ ಅವರು ಮೊದಲ ಬಾರಿಗೆ ಮುಖ್ಯಮಂತ್ರಿಯಾದಾಗ ಚಿತ್ರನಗರಿ ಮೈಸೂರಿನಲ್ಲಿ ನಿರ್ಮಾಣ ಮಾಡಲು ನಂಜನಗೂಡಿನ ಇಮ್ಮಾವು ಬಳಿ ಜಾಗ ಗುರುತಿಸಿದರು.**
- **ಚಿತ್ರರಂಗದ ಚಿತ್ರೀಕರಣ ಅಗತ್ಯಗಳನ್ನು ಪೂರೈಸುವುದು, ಪ್ರವಾಸೋದ್ಯಮವನ್ನು ಉತ್ತೇಜಿಸುವುದು ಮತ್ತು ಉದ್ಯೋಗಾವಕಾಶಗಳನ್ನು ಸೃಷ್ಟಿಸುವ ಉದ್ದೇಶವನ್ನು ಹೊಂದಿದೆ.**
- **ಫಿಲ್ಮ್‌ಸಿಟಿಯಲ್ಲಿ ಥಿಯೇಟರ್, ಥೀಮ್ಸ್ ಪಾರ್ಕ್, ಸ್ಟುಡಿಯೋ, ಮಲ್ಟಿಪ್ಲೆಕ್ಸ್, ಹೋಟೆಲ್‌ಗಳು ನಿರ್ಮಾಣವಾಗಲಿವೆ.**

**ಮೈಸೂರಿನಲ್ಲೇ ಯಾಕೆ?:** ಮೈಸೂರು ರಾಜಧಾನಿ ಬೆಂಗಳೂರಿಗೆ ಸಮೀಪದಲ್ಲೇ ಇರುವ ಸಾಂಸ್ಕೃತಿಕ ನಗರಿ. ಪಾರಂಪರಿಕ ಕಟ್ಟಡಗಳು, ಅರಮನೆ, ಕೆರೆಕಟ್ಟೆ, ಚಾಮುಂಡಿಬೆಟ್ಟ ಮೈಸೂರನ್ನು ಆಕರ್ಷಣೀಯಗೊಳಿಸಿವೆ. ಹೊರಾಂಗಣ, ಒಳಾಂಗಣದ ಚಿತ್ರೀಕರಣಕ್ಕೆ ಪೂರಕವಾದ 250 ಸ್ಥಳಗಳು ಒಂದೇ ಕಡೆ ಇವೆ. ಹಾಗಾಗಿ ಚಿತ್ರನಗರಿ ಮೈಸೂರಿನಲ್ಲಿ ನಿರ್ಮಾಣ ಆಗಬೇಕೆಂದು ಡಾ.ರಾಜ್‌ಕುಮಾರ್, ಡಾ.ವಿಷ್ಣುವರ್ಧನ್, ಅಂಬರೀಷ್ ಸೇರಿದಂತೆ ಅನೇಕ ನಟರು, ನಿರ್ದೇಶಕರು, ನಿರ್ಮಾಪಕರು ಇಚ್ಛೆ ವ್ಯಕ್ತಪಡಿಸಿದ್ದರು.

**ಸಾರ್ವಜನಿಕ ಖಾಸಗಿ ಸಹಭಾಗಿತ್ವ:** ಚಿತ್ರನಗರಿ ಬಹುದೊಡ್ಡ ಯೋಜನೆಯಾಗಿರುವ ಹಿನ್ನೆಲೆಯಲ್ಲಿ ಕೇವಲ ಸರಕಾರದಿಂದ ಮಾತ್ರವೇ ಪೂರ್ಣಗೊಳಿಸಲು ಸಾಧ್ಯವಿಲ್ಲ. ಈ ಹಿನ್ನೆಲೆಯಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವ (ಪಿಪಿಪಿ) ಮಾದರಿಯಲ್ಲಿ ಅನುಷ್ಠಾನಗೊಳಿಸಲು ಸರಕಾರ ನಿರ್ಧರಿಸಿದೆ. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಉಸ್ತುವಾರಿ ವಹಿಸಿಕೊಂಡಿದೆ. ಫಿಲ್ಮ್‌ಸಿಟಿಯಲ್ಲಿ ಥಿಯೇಟರ್, ಥೀಮ್ಸ್ ಪಾರ್ಕ್, ಸ್ಟುಡಿಯೋ, ಮಲ್ಟಿಪ್ಲೆಕ್ಸ್, ಹೋಟೆಲ್‌ಗಳು ನಿರ್ಮಾಣವಾಗಲಿವೆ.

**ಉದ್ಯೋಗ ಸೃಷ್ಟಿ ಇದರ ಉದ್ದೇಶ**


**ಮೈಸೂರಿನಲ್ಲಿ ಚಿತ್ರನಗರಿ ನಿರ್ಮಾಣದ ಕನಸು ದಶಕಗಳಿಂದ ನನಸಾಗಿಲ್ಲ. ಸಮಗ್ರ ಯೋಜನಾ ವರದಿ ಅಂತಿಮ ಹಂತದಲ್ಲಿದ್ದು, ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ (ಪಿಪಿಪಿ) ಅನುಷ್ಠಾನಕ್ಕೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಿದ್ಧತೆ ನಡೆಸಿದೆ. ಚಿತ್ರರಂಗದ ಅಗತ್ಯ ಪೂರೈಕೆ, ಪ್ರವಾಸೋದ್ಯಮ ಉತ್ತೇಜನ, ಉದ್ಯೋಗ ಸೃಷ್ಟಿ ಇದರ ಉದ್ದೇಶವಾಗಿದೆ.**

## ಮಿನಿ ನ್ಯೂಸ್

### ದ್ವಿಚಕ್ರ ವಾಹನ ಕಳವಿಗೆ ಯತ್ನ

• ಉದಯವಾಹಿನಿ, ಗುಂಡ್ಲುಪೇಟೆ

ಪಟ್ಟಣದ ದೇವರಾಜು ಅರಸು ಕ್ರೀಡಾಂಗಣದ ಮುಂಭಾಗ ನಿಲ್ಲಿಸಿದ್ದ ಕೆ ಎ 10 ಇಜೆ 2286 ನೋಂದಣಿಯ ದ್ವಿಚಕ್ರವಾಹನ ಕಳವಿಗೆ ಯತ್ನಿಸಿರುವ ಘಟನೆ ಸಂಜೆ ನಡೆದಿದೆ, ಪುರಸಭಾ ಮಾಜಿ ಸದಸ್ಯ ಎನ್. ಕುಮಾರ್ ಅವರ ತಂದೆ ನಾಗೇಶ್ ಅವರು ದೇವರಾಜು ಅರಸು ಕ್ರೀಡಾಗಣದಲ್ಲಿ ವಾಯುವಿಹಾರದಲ್ಲಿದ್ದ ವೇಳೆ ಘಟನೆ ನಡೆದಿದ್ದು ಗುಂಡ್ಲುಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.


ಉದಯವಾಹಿನಿ ಚಿತ್ರ

**ಸಂಜೆ ವೇಳೆ ಕೃತ್ಯ:** ದೇವರಾಜು ಅರಸು ಕ್ರೀಡಾಗಣದಲ್ಲಿ ಸಂಜೆ ವೇಳೆ ವಾಯುವಿಹಾರಕ್ಕೆ ಬರುವವರ ಸಂಖ್ಯೆ ಹೆಚ್ಚಾಗಿರುವುದನ್ನೇ ಬಂಡವಾಳ ಅನ್ನಾಗಿಸಿಕೊಂಡಿರುವ ಮೂರ್ನಾಲ್ಕು ಮಂದಿಯಿಂದಲೆ ಈ ಕೃತ್ಯ ಎಸಗಲಾಗಿದೆ ಎಂದು ಕುಮಾರ್ ಅನುಮಾನ ವ್ಯಕ್ತಪಡಿಸಿದ್ದಾರೆ. ಬೈಕಿನ ಕೀ ಸೆಟ್ ಮುರಿದಿರುವ ಕಿಡಿಗೇಡಿಗಳು ಪ್ರಯತ್ನ ಸಫಲವಾಗದ ಹಿನ್ನೆಲೆ ಬಿಟ್ಟುಹೋಗಿರಬಹುದು ಸರ್ಕಾರಿ ಕಚೇರಿ , ಬ್ಯಾಂಕುಗಳ ಮುಂಭಾಗ ಪಾರ್ಕ್ ಮಾಡುವ ವಾಹನಗಳನ್ನೆ ಟಾರ್ಗೆಟ್‌ಮಾಡುತ್ತಿರುವ ಕಳ್ಳರ ಗ್ಯಾಂಗ್ ನಿಪುಣತೆ ತೋರುತ್ತಿರುವುದು ಕಂಡುಬಂದಿದೆ ಈ ಹಿನ್ನೆಲೆಯಲ್ಲಿ ಪೊಲೀಸ್ ಇಲಾಖೆ ಕೃತ್ಯದಲ್ಲಿ ತೊಡಗಿರುವವರ ಎಡೆಮುರಿಕಟ್ಟಲು ಮುಂದಾಗಬೇಕು ಎಂದು ಒತ್ತಾಯಿಸಿದ್ದಾರೆ. ಘಟನಾ ಸ್ಥಳಕ್ಕೆ ತೆರಳಿ ಪರಿಶೀಲಿಸಿರುವ ಅಪರಾಧ ವಿಭಾಗದ ಪೊಲೀಸರು ಸಿಸಿಟಿವಿ ದೃಶ್ಯಾವಳಿ ಆಧಾರದ ಮೇಲೆ ಪತ್ತೆ ಕಾರ್ಯಕ್ಕೆ ಮುಂದಾಗಿದ್ದಾರೆ.

## ರೈತ ಸಂಘದ ನೇತೃತ್ವದಲ್ಲಿ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ

• ಉದಯವಾಹಿನಿ, ರಾಮನಗರ

ತಾಲ್ಲೂಕಿನ ಬಿಡದಿ ಹೋಬಳಿಯಲ್ಲಿ ಗ್ರೇಟರ್ ಬೆಂಗಳೂರು ಸಮಗ್ರ ಉಪನಗರ ಯೋಜನೆಗೆ ವಿರೋಧಿಸಿ, ರೈತರ ಬೇಡಿಕೆಗಳನ್ನು ಈಡೇರಿಸದ ಸರ್ಕಾರದ ವಿರುದ್ಧ ಕರ್ನಾಟಕ ರಾಜ್ಯ ರೈತ ಸಂಘದ ನೇತೃತ್ವದಲ್ಲಿ ವಿವಿಧ ಸಂಘಟನೆಗಳು ನಗರದಲ್ಲಿ ಜಿಲ್ಲಾಡಳಿತದ ವಿರುದ್ಧ ಬುಧವಾರ ಪ್ರತಿಭಟನೆ ನಡೆಸಿದರು. ನಗರದ ಕಂದಾಯ ಭವನದ ಆವರಣದಲ್ಲಿ ಜಮಾಯಿಸಿದ ಮಹಿಳೆಯರು, ರೈತರು, ವಿವಿಧ ಸಂಘಟನೆಗಳ ಕಾರ್ಯಕರ್ತರು, ನಂತರ ಅಲ್ಲಿಂದ ಜಿಲ್ಲಾಧಿಕಾರಿ ಕಚೇರಿ ಬಳಿಯ ಪ್ರತಿಭಟನಾ ಸ್ಥಳದವರೆಗೆ ಪಾದಯಾತ್ರೆಯಲ್ಲಿ ಬಂದರು. ಮಾರ್ಗದುದ್ದಕ್ಕೂ ಸರ್ಕಾರ, ಜಿಲ್ಲಾಧಿಕಾರಿ ವಿರುದ್ಧ ಘೋಷಣೆಗಳನ್ನು ಕೂಗಿದರು.

ಪಾದಯಾತ್ರೆಯುದ್ದಕ್ಕೂ ಸರ್ಕಾರದ ವಿರುದ್ಧ ಹಾಗೂ ಉಪನಗರಕ್ಕೆ ಭೂ ಸ್ವಾಧೀನ ವಿರುದ್ಧದ ಪ್ರತಿಭಟನಾ ಫಲಕಗಳು ಗಮನ ಸೆಳೆದವು. ತಮಟೆ ಮತ್ತು ಡೊಳ್ಳು ಸದ್ದು ಮೊಳಗಿತು. ನಿಗದಿಪಡಿಸಿರುವ ಸ್ಥಳದಲ್ಲೇ ಪ್ರತಿಭಟನೆ ನಡೆಸುವಂತೆ ಪೊಲೀಸರು ಮನವೊಲಿಸಲು ಯತ್ನಿಸಿದರು. ಅದಕ್ಕೆ ಒಪ್ಪದ ರೈತರು ಡಿ.ಸಿ ಕಚೇರಿ ಪ್ರವೇಶದ್ವಾರದ ಎದುರೇ ಪ್ರತಿಭಟನೆ ನಡೆಸುವುದಾಗಿ ಪಟ್ಟು ಹಿಡಿದು, ಕಚೇರಿಯತ್ತ ಬಂದರು. ಕಚೇರಿ ಆವರಣದಲ್ಲಿ ಪ್ರತಿಭಟನೆ ನಡೆಸಿದಂತೆ ನಿಷೇಧಾಜ್ಞೆ ಇರುವ ಕಾರಣ, ಬಿಸಿಲು ಲೆಕ್ಕಿಸದೆ ಪ್ರವೇಶದ್ವಾರದ ಎದುರಿನ ರಸ್ತೆಯಲ್ಲಿ ಕುಳಿತು ಪ್ರತಿಭಟನೆ ನಡೆಸಿದರು.


ಉದಯವಾಹಿನಿ ಚಿತ್ರ

ಇದರಿಂದಾಗಿ ಬೆಂಗಳೂರು- ಮೈಸೂರು ಹಳೆ ಹೆದ್ದಾರಿ ರಸ್ತೆಯ ಒಂದು ಭಾಗದಲ್ಲಿ ಪೊಲೀಸರು ವಾಹನಗಳ ಸಂಚಾರ ಬಂದ್ ಮಾಡಿ, ಮತ್ತೊಂದು ಭಾಗದಲ್ಲಿ ಎರಡೂ ಕಡೆಯ ವಾಹನಗಳ ಸಂಚಾರಕ್ಕೆ ವ್ಯವಸ್ಥೆ ಮಾಡಿದರು. ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ. ಮಲ್ಲಯ್ಯ, ಜಯ ಕರ್ನಾಟಕ ಜನಪರ ವೇದಿಕೆಯ ಕುಮಾರಸ್ವಾಮಿ, ಭೈರಮಂಗಲ- ಕಂಚುಗಾರನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ರೈತರ ಭೂ ಹಿತರಕ್ಷಣಾ ಸಮಿತಿ ಪದಾಧಿಕಾರಿಗಳು, ದಲಿತ ಸಂಘರ್ಷ ಸಮಿತಿ, ಅಂಬೇಡ್ಕರ್ ಸೇನೆ ಮುಖಂಡರು ಮಾತನಾಡಿದರು. ಮುನ್ನೆಚ್ಚರಿಕೆ ಕ್ರಮವಾಗಿ ಬಿಗಿ ಪೊಲೀಸ್ ಬಂದೋಬಸ್ತ್ ಮಾಡಲಾಗಿತ್ತು. ಸ್ಥಳದಲ್ಲೇ ಹತ್ತಕ್ಕೂ ಹೆಚ್ಚು ಪೊಲೀಸ್ ವಾಹನಗಳು, ಐವತ್ತಕ್ಕೂ ಹೆಚ್ಚು ಪೊಲೀಸರು ಬೀಡು ಬಿಟ್ಟಿದ್ದರು.

## ದಾಖಲೆ ಇಲ್ಲದ ವಾಹನ ಸವಾರರಿಗೆ ದಂಡ

• ಉದಯವಾಹಿನಿ, ಚಿಂತಾಮಣಿ

ನಗರದ ಹೊರವಲಯದ ಬೆಂಗಳೂರು ರಸ್ತೆಯ ಕಟ್ಟಮಾಚನಹಳ್ಳಿ ಗೇಟ್ ಮತ್ತು ನಗರದ ಕೋಲಾರ ಕ್ರಾಸ್‌ನಲ್ಲಿ ಪ್ರಾದೇಶಿಕ ಸಹಾಯಕ ಸಾರಿಗೆ ಅಧಿಕಾರಿ ಬೈರಾರೆಡ್ಡಿ ಮತ್ತು ಪೊಲೀಸ್ ಇಲಾಖೆಯ ಡಿವೈಎಸ್‌ಪಿ ಮುರಳೀಧರ್ ಅವರ ನೇತೃತ್ವದಲ್ಲಿ ಬೆಳಗ್ಗೆ ವಾಹನಗಳ ತಪಾಸಣೆ ನಡೆಸಲಾಯಿತು.

ಗ್ರಾಮಾಂತರ ಠಾಣೆಯ ಇನ್ಸ್‌ಪೆಕ್ಟರ್ ಶಿವರಾಜ್, ನಗರ ಠಾಣೆ ಇನ್ಸ್‌ಪೆಕ್ಟರ್ ವಿಜಿಕುಮಾರ್, ಸಿಬ್ಬಂದಿ, ಸಹಾಯಕ ಪ್ರಾದೇಶಿಕ ಸಾರಿಗೆ ಕಚೇರಿಯ ಅಧಿಕಾರಿಗಳು ಒಟ್ಟಿಗೆ ರಸ್ತೆಗೆ ಇಳಿದು ಎಲ್ಲಾ ವಾಹನಗಳ ತಪಾಸಣೆ ನಡೆಸಿದರು. ವಾಹನಕ್ಕೆ ಸಂಬಂಧಿಸಿದ ದಾಖಲೆಗಳು ಇಲ್ಲದ, ಸಂಚಾರ ನಿಯಮಗಳನ್ನು ಉಲ್ಲಂಘಿಸಿದ ವಾಹನ ಸವಾರರಿಗೆ ದಂಡ ವಿಧಿಸಿ, ಎಚ್ಚರಿಕೆ ನೀಡಲಾಯಿತು. ಡಿವೈಎಸ್‌ಪಿ ಮುರಳೀಧರ್ ಮಾತನಾಡಿ, ಚಿಂತಾಮಣಿ ತಾಲ್ಲೂಕಿನಲ್ಲಿ ಅಪಘಾತಗಳಿಂದಲೇ ಹೆಚ್ಚಿನ ಸಾವು-ನೋವುಗಳು ಸಂಭವಿಸುತ್ತಿವೆ. ರಸ್ತೆ ನಿಯಮಗಳನ್ನು ಪಾಲನೆ ಮಾಡದಿರುವುದು, ಬೇಜವಾಬ್ದಾರಿಯಿಂದ ವಾಹನಗಳ ಚಾಲನೆಯೇ ಬಹುತೇಕ ಅಪಘಾತಗಳಿಗೆ ಕಾರಣವಾಗುತ್ತಿದೆ ಎಂದು ತಿಳಿಸಿದರು.

ಸಾರ್ವಜನಿಕರು ತಮ್ಮ ಜೀವ ರಕ್ಷಣೆ ಮತ್ತು ಸುರಕ್ಷತೆಗಾಗಿ ಹೆಲ್ಮೆಟ್ ಧರಿಸಬೇಕು. ಕಾರು ಚಾಲನೆ ಮಾಡುವಾಗ ಚಾಲಕರು ಸೀಟು ಬೆಲ್ಟ್ ಹಾಕಬೇಕು. ವಿಮೆ, ಎಫ್.ಸಿ ಇಲ್ಲದೆ ವಾಹನಗಳು ಸಂಚರಿಸುತ್ತಿವೆ ಎಂಬ ದೂರುಗಳು ಬರುತ್ತಿದ್ದು, ಕ್ರಮ ಕೈಗೊಳ್ಳಲಾಗುವುದು ಎಂದರು.

ಪ್ರಾದೇಶಿಕ ಸಹಾಯಕ ಸಾರಿಗೆ ಅಧಿಕಾರಿ ಬೈರಾರೆಡ್ಡಿ ಮಾತನಾಡಿ, ಚಾಲಕರು ಕಡ್ಡಾಯವಾಗಿ ಚಾಲನಾ ಪರವಾನಗಿ ಪಡೆದಿರಬೇಕು. ವಾಹನಗಳ ಮಾಲೀಕರು ಎಲ್ಲಾ ದಾಖಲೆಗಳನ್ನು ಹೊಂದಿರಬೇಕು. ರಸ್ತೆ ಸುರಕ್ಷತಾ ನಿಯಮಗಳನ್ನು ಪಾಲನೆ ಮಾಡಿದರೆ ಅಪಘಾತಗಳನ್ನು ನಿಯಂತ್ರಿಸಬಹುದು. ಕೆಲವು ಶಾಲೆಗಳ ವಾಹನಗಳು ಸಮರ್ಪಕ ವಾಹನಗಳ ದಾಖಲೆ ಹೊಂದಿಲ್ಲ ಎಂಬ ದೂರುಗಳಿವೆ. ನಿರಂತರ ಕಾರ್ಯಾಚರಣೆ ಕೈಗೊಳ್ಳಲಾಗುವುದು. ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

### ಕಾಡಾನೆ ದಾಳಿ; ತೆಂಗು ಮಾವಿನ ಮರಗಳು ನಾಶ

• ಉದಯವಾಹಿನಿ, ಕನಕಪುರ

ಕಾಡಾನೆಗಳ ದಾಳಿಯಿಂದ ಬಸವನಹಳ್ಳಿಯಲ್ಲಿ ತೆಂಗು, ಮಾವಿನ ಮರಗಳು ಹಾಳಾಗಿವೆ. ರಾತ್ರಿ ಗ್ರಾಮದ ರೈತ ಗಂಟೆ ಲಿಂಗೇಗೌಡರ 22 ತೆಂಗಿನ ಮರ, ಕಾಳೇಗೌಡರ 7 ತೆಂಗಿನ ಮರ, ವಿಜಯಕುಮಾರ್ ಅವರ 10 ತೆಂಗಿನ ಮರ, ಮರಿಗೌಡರ 5 ಮಾವಿನ ಮರಗಳು ಕಾಡಾನೆಗಳ ದಾಳಿಗೆ ನಾಶವಾಗಿವೆ. ಎರಡು ಕಾಡಾನೆಗಳು ತೋಟಗಳಿಗೆ ನುಗ್ಗಿ, ಫಸಲು ಬಿಡಲು ಪ್ರಾರಂಭಿಸಿದ್ದ ಸುಮಾರು ಏಳು ವರ್ಷದ ತೆಂಗಿನ ಗಿಡಗಳ ಸುಳಿಗಳನ್ನು ಕಿತ್ತು ತಿಂದಿವೆ.

ಅರಣ್ಯ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ದಾಳಿಗೆ ಗುರಿಯಾದ ತೋಟಗಳನ್ನು ಸಂದರ್ಶಿಸಿ ಪರಿಶೀಲನೆ ನಡೆಸಿದರು. ಸಂತ್ರಸ್ತ ರೈತರಿಂದ ವಿವರ ಪಡೆದರು. ಹಾನಿಗೊಳಗಾದ ತೆಂಗು ಮತ್ತು ಮಾವಿನ ಗಿಡಗಳ ಕುರಿತು ಇಲಾಖೆಗೆ ವರದಿ ಸಲ್ಲಿಸಿ ಪರಿಹಾರ ದೊರಕಿಸಿಕೊಡುವುದಾಗಿ ಅಧಿಕಾರಿಗಳು ಭರವಸೆ ನೀಡಿದರು. ನಾಶವಾದ ತೆಂಗಿನ ಗಿಡಗಳು ಸುಮಾರು ಏಳರಿಂದ ಎಂಟು ವರ್ಷದ ಫಸಲು. ಸರ್ಕಾರ ಪ್ರತಿ ಗಿಡಕ್ಕೆ ನೀಡುವ 1 ಸಾವಿರ ಪರಿಹಾರ ಬಹಳ ಕಡಿಮೆ ಎಂದು ಅವರ ರೈತರು ಆಕ್ರೋಶ ವ್ಯಕ್ತಪಡಿಸಿದರು. ಅರಣ್ಯ ಇಲಾಖೆಯು ನಾಶವಾದ ಪ್ರತಿ ಗಿಡಕ್ಕೂ ಕನಿಷ್ಠ 25 ಸಾವಿರ ಪರಿಹಾರ ನೀಡಬೇಕೆಂದು ಯುವ ರೈತ ಕುಮಾರ್ ಒತ್ತಾಯಿಸಿದರು.

## ಖಾಲಿ ಡಬ್ಬ ಹೇಳಿಕೆಗೆ ಕಾಂಗ್ರೆಸ್ ಮುಖಂಡರು ಆಕ್ರೋಶ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಚಿಕ್ಕಬಳ್ಳಾಪುರ ಹಾಲು ಒಕ್ಕೂಟದ ಚುನಾವಣೆಯಲ್ಲಿ ಚಿಕ್ಕಬಳ್ಳಾಪುರ ಕ್ಷೇತ್ರದಿಂದ ಗೆಲುವು ಸಾಧಿಸಿರುವ ಕಾಂಗ್ರೆಸ್ ಮುಖಂಡ ಎನ್.ಸಿ. ವೆಂಕಟೇಶ್ ಅವರ ಹೇಳಿಕೆಗೆ ಕೆಲವು ಕಾಂಗ್ರೆಸ್‌ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಹಿಂದೆ ಆಪ್ತರು ಎನಿಸಿದ್ದ ಮುಖಂಡರೇ ಈಗ ವಾಗ್ವಾದಕ್ಕೆ ಇಳಿದಿದ್ದಾರೆ. ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಯಲುವಳ್ಳಿ ರಮೇಶ್ ಮತ್ತು ವೆಂಕಟೇಶ್, ಚಿಮುಲ್ ಚುನಾವಣೆಯಲ್ಲಿ ಎದುರಾಳಿಗಳಾಗಿದ್ದರು. ವೆಂಕಟೇಶ್ ಗೆಲುವು ಸಾಧಿಸಿದ್ದಾರೆ.

ನಗರದಲ್ಲಿ ನಡೆದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಬೀಜ ನಿಗಮದ ಅಧ್ಯಕ್ಷ ನಂದಿ ಆಂಜನಪ್ಪ, ಯಲುವಳ್ಳಿ ರಮೇಶ್ ಅವರನ್ನು ಬೆಂಬಲಿಸಿದ ಮುಖಂಡರನ್ನು ವೆಂಕಟೇಶ್ ಖಾಲಿ ಡಬ್ಬಗಳು ಎಂದಿದ್ದಾರೆ. ಹೌದು ನಾವು ಖಾಲಿ ಡಬ್ಬಾಗಳೇ. ಪಕ್ಷಕ್ಕೆ ದ್ರೋಹ ಬಗೆದು ಡಬ್ಬಾ ತುಂಬಿಸಿಕೊಂಡಿಲ್ಲ. ಕೋಚಿಮುಲ್‌ನಲ್ಲಿ ಅಕ್ರಮ ಎಸಗಿಲ್ಲ ಎಂದು ತಿರುಗೇಟು ನೀಡಿದರು. ಚಿಮುಲ್ ಕ್ಷೇತ್ರ ಪುನರ್ ವಿಂಗಡಣೆಯೇ ಸರಿಯಿಲ್ಲ. ಯಾವುದೋ ಪಂಚಾಯಿತಿಯನ್ನು ಮತ್ತೆಲ್ಲಿಗೋ ಸೇರಿಸಲಾಗಿದೆ. ಕ್ಷೇತ್ರ ಪುನರ್ ವಿಂಗಡಣೆಗೆ ನಮ್ಮ ವಿರೋಧವಿದೆ. ವೆಂಕಟೇಶ್ ಬಹಿರಂಗ ಚರ್ಚೆಗೆ ಬರಲಿ ಎಂದು ಸವಾಲು ಹಾಕಿದರು. ಯಲುವಳ್ಳಿ ಎನ್.ರಮೇಶ್ ಮಾತನಾಡಿ, ನಾನು ತಡವಾಗಿ ಚುನಾವಣಾ ಪ್ರಚಾರ ಆರಂಭಿಸಿದ ಕಾರಣ ನನಗೆ ಸೋಲಾಗಿದೆ. ನನ್ನ ಸೋಲಿಗೆ ಯಾರೂ ಕಾರಣರಲ್ಲ. ನಾನೇ ಕಾರಣ. ರಾಜಕೀಯದಲ್ಲಿ ಸೋಲು ಗೆಲುವು ಸಾಮಾನ್ಯ. 30 ಮಂದಿ ಮತ ನೀಡಿದ್ದು, ಅವರಿಗೆ ಕೃತಜ್ಞತೆ ಸಲ್ಲಿಸುವೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

ಕೋಚಿಮುಲ್‌ನಲ್ಲಿ ನಡೆದಿರುವ ಅವ್ಯವಹಾರಗಳ ಪಟ್ಟಿ ನನ್ನ ಬಳಿ ಇದೆ. ಚಿಮುಲ್ ಚುನಾವಣೆ ಧರ್ಮ, ಅಧರ್ಮದ ನಡುವಿನ ಚುನಾವಣೆ. ನನಗೆ ಅಡ್ಡದಾರಿ ಗೊತ್ತಿರಲಿಲ್ಲ. ಹಣದಿಂದ ಗೆದ್ದಿರಬಹುದು. ನಾನು ನ್ಯಾಯವಾಗಿ ಚುನಾವಣೆ ಎದುರಿಸಿ ಸೋತಿದ್ದೇನೆ ಎಂದು ಹೇಳಿದರು.

## ಗುತ್ತಿಗೆದಾರರಿಗೆ ಬಿಲ್ ಬಾಕಿ
### ಡಿಸಿಎಫ್ ಕಚೇರಿಯ ಪೀಠೋಪಕರಣ ಜಪ್ತಿ

• ಉದಯವಾಹಿನಿ, ಮಂಡ್ಯ

ಅರಣ್ಯ ಪ್ರದೇಶದಲ್ಲಿ ತಂತಿ ಬೇಲಿ ಕಾಮಗಾರಿ ಮಾಡಿಕೊಟ್ಟಿದ್ದ ಗುತ್ತಿಗೆದಾರರಿಗೆ ಹಣ ಪಾವತಿಸದ ಹಿನ್ನೆಲೆಯಲ್ಲಿ ನ್ಯಾಯಾಲಯದ ಆದೇಶದಂತೆ ಅರಣ್ಯ ಭವನದ ಪೀಠೋಪಕರಣ, 14 ಕಂಪ್ಯೂಟರ್‌ಗಳು ಜಪ್ತಿ ಮಾಡಿದ ಘಟನೆ ಬುಧವಾರ ನಡೆಯಿತು. ನಾಗಮಂಗಲ ತಾಲ್ಲೂಕಿನ ಮಲ್ಲೇಗೌಡನಹಳ್ಳಿಯ ಎಂ.ವೈ. ಸುರೇಶ ಹಾಗೂ ಶ್ರೀರಂಗಪಟ್ಟಣ ತಾಲ್ಲೂಕಿನ ಗೌಡಹಳ್ಳಿ ಗ್ರಾಮದ ರಾಜಣ್ಣ ಜಿ.ಎನ್. ಗುತ್ತಿಗೆದಾರರಾಗಿದ್ದು, ಇವರಿಬ್ಬರೂ 2022ರಲ್ಲಿ 3.24 ಕೋಟಿ ವೆಚ್ಚದಲ್ಲಿ 51 ಕಿ.ಮೀ. ದೂರದವರೆಗೆ ತಂತಿಬೇಲಿ ಕಾಮಗಾರಿ ನಡೆಸಿದ್ದರು.

ಇದಕ್ಕೆ ಸಂಬಂಧಿಸಿದಂತೆ ಕಚೇರಿಗೆ ಬಿಲ್ ಪಾವತಿ ಮಾಡಲಾಗಿತ್ತು. ಆದರೆ ಹಣ ಪಾವತಿಸದೆ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದರು. ಇದರಿಂದ ಬೇಸತ್ತ ಗುತ್ತಿಗೆದಾರರು ನ್ಯಾಯಾಲಯದ ಮೊರೆ ಹೋಗಿದ್ದು, ನ್ಯಾಯಾಲಯ ನಿಗದಿತ ಸಮಯದೊಳಗೆ ಹಣ ಪಾವತಿ ಮಾಡುವಂತೆ ಆದೇಶ ನೀಡಿದ್ದರೂ ಸಹ ಪಾವತಿ ಮಾಡಿರಲಿಲ್ಲ. ಮತ್ತೆ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿ ಜಪ್ತಿ ಆದೇಶ ತಂದಿದ್ದರು. ಡಿಸಿಎಫ್ ರಘು ಅವರು ಹಣ ಪಾವತಿಗೆ ಸಮಯಾವಕಾಶ ಕೋರಿ, ಜಪ್ತಿ ಮಾಡದಂತೆ ಮನವಿ ಮಾಡಿದರು. ಸಂಧಾನಕ್ಕೆ ಒಪ್ಪದ ಗುತ್ತಿಗೆದಾರರು ಕಚೇರಿ ಪೀಠೋಪಕರಣಗಳನ್ನು ಜಪ್ತಿ ಮಾಡಿಸಿದರು.

## 60 ಲಕ್ಷ ಲಂಚಕ್ಕೆ ಬೇಡಿಕೆ ; ಅಬಕಾರಿ ಉಪ ಆಯುಕ್ತ ಅಮಾನತು

• ಉದಯವಾಹಿನಿ, ಮಂಡ್ಯ

ಸಿಎಲ್-7 ಸನ್ನದು ಮಂಜೂರಾತಿಗಾಗಿ ಅರ್ಜಿದಾರರಿಗೆ 60 ಲಕ್ಷ ಲಂಚಕ್ಕೆ ಬೇಡಿಕೆ ಇಟ್ಟಿದ್ದ ಆರೋಪದ ಮೇಲೆ ಜಿಲ್ಲೆಯ ಅಬಕಾರಿ ಉಪ ಆಯುಕ್ತ ಆರ್. ನಾಗಶಯನ ಅವರನ್ನು ಅಮಾನತುಗೊಳಿಸಿ ಸರ್ಕಾರ ಆದೇಶಿಸಿದೆ. ಭ್ರಷ್ಟಾಚಾರ ಆರೋಪದ ಮೇರೆಗೆ ಅಬಕಾರಿ ಸಚಿವರ ರಾಜೀನಾಮೆಗೆ ವಿರೋಧ ಪಕ್ಷದ ಮುಖಂಡರು ಒತ್ತಾಯಿಸುತ್ತಿರುವ ಸಂದರ್ಭದಲ್ಲೇ ಅಬಕಾರಿ ಉಪ ಆಯುಕ್ತರ ಅಮಾನತು ಆದೇಶ ವ್ಯಾಪಕ ಚರ್ಚೆಗೆ ಗ್ರಾಸವಾಗಿದೆ. 2025ರ ಆಗಸ್ಟ್ ತಿಂಗಳಲ್ಲಿ ಸುಂದರ್ ಎಂಬುವವರಿಗೆ ಲಂಚಕ್ಕೆ ಬೇಡಿಕೆ ಇಟ್ಟಿದ್ದ ನಾಗಶಯನ ಅವರ ಧ್ವನಿಯೆಂದು ಹೇಳಲಾದ ಆಡಿಯೊ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿತ್ತು. ಶಿಸ್ತುಕ್ರಮ ಜರುಗಿಸುವ ಸಂಬಂಧ ಅಬಕಾರಿ ಆಯುಕ್ತರ ಕಚೇರಿಯಿಂದ ಕಾರಣ ಕೇಳಿ ನೋಟಿಸ್ ನೀಡಲಾಗಿತ್ತು. ಆರೋಪಿತ ಅಧಿಕಾರಿ ನೀಡಿದ ಸಮಜಾಯಿಷಿ ಪರಿಶೀಲಿಸಲಾಗಿ, ಲಂಚಕ್ಕೆ ಬೇಡಿಕೆ ಇಟ್ಟಿರುವ ಆರೋಪವು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ ಅಮಾನತುಗೊಳಿಸಲಾಗಿದೆ ಎಂದು ಆದೇಶ ಪತ್ರದಲ್ಲಿ ತಿಳಿಸಲಾಗಿದೆ. ಅಮಾನತ್ತಿನ ಅವಧಿಯಲ್ಲಿ ನಾಗಶಯನ ಅವರನ್ನು ಬೆಳಗಾವಿ ದಕ್ಷಿಣ, ಬೆಳಗಾವಿ ಜಿಲ್ಲೆಗೆ ವರ್ಗಾಯಿಸಿ ಆದೇಶಿಸಲಾಗಿದೆ.

## ನಸೀರ್ ವಿರುದ್ಧ ಮುಗಿಬಿದ್ದ ಬಿಜೆಪಿ ನಾಯಕರು

• ಉದಯವಾಹಿನಿ, ಕೋಲಾರ



ಸಿಎಂ ರಾಜಕೀಯ ಕಾರ್ಯದರ್ಶಿ ಹಾಗೂ ವಿಧಾನ ಪರಿಷತ್ ಸದಸ್ಯ ಕೋಲಾರದ ನಸೀರ್ ಅಹ್ಮದ್‌ಕಲಾಪದ ವೇಳೆ ಪ್ರಧಾನಿ ನರೇಂದ್ರ ಮೋದಿ ಕುರಿತು ಬಳಸಿದ ಪದಗಳು ಹಾಗೂ ನಿಂದನೆಗೆ ಬಿಜೆಪಿ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ದೇಶದ ಪ್ರಧಾನಿ ಮೋದಿ ಅವರನ್ನು 'ದೇಶದ್ರೋಹಿ' ಎಂದು ಹೇಳಿರುವ ನಸೀರ್ ಅಹ್ಮದ್ ಹೇಳಿಕೆಯನ್ನು ನಾನು ತೀವ್ರವಾಗಿ ಹಾಗೂ ಸ್ಪಷ್ಟವಾಗಿ ಖಂಡಿಸುತ್ತೇನೆ. ಇಂತಹ ಹೇಳಿಕೆಗಳು ಕೇವಲ ಅಸಂಬದ್ಧವಲ್ಲ, ರಾಷ್ಟ್ರದ ಗೌರವಕ್ಕೆ ಧಕ್ಕೆ ತರುವಂತಿವೆ ಎಂದು ಜಿಲ್ಲಾ ಬಿಜೆಪಿ ಅಧ್ಯಕ್ಷ ಓಂಶಕ್ತಿ ಚಲಪತಿ ತಿಳಿಸಿದ್ದಾರೆ.

ನಸೀರ್ ಅವರ ಇತ್ತೀಚಿನ ನಡವಳಿಕೆಗಳು, ಹೇಳಿಕೆಗಳು ದೇಶದ ಏಕತೆ, ಸಮಗ್ರತೆ, ರಾಷ್ಟ್ರೀಯ ಹಿತಾಸಕ್ತಿಗೆ ವಿರುದ್ಧವಾಗಿರುವುದನ್ನು ಸ್ಪಷ್ಟವಾಗಿ ತೋರಿಸುತ್ತವೆ. ಇದೇ ಕಾರಣದಿಂದಾಗಿ ಅವರು ಜನರಿಂದ ಸಾರಾಸಗಟಾಗಿ ತಿರಸ್ಕೃತರಾಗಿದ್ದು, ಚುನಾವಣೆಯಲ್ಲಿಯೂ ಜನರ ವಿಶ್ವಾಸವನ್ನು ಸಂಪೂರ್ಣವಾಗಿ ಕಳೆದುಕೊಂಡಿದ್ದಾರೆ. ಈವರೆಗಿನ ಯಾವುದೇ ನೇರ ಚುನಾವಣೆಯಲ್ಲಿ ಜನರ ವಿಶ್ವಾಸ ಪಡೆದು ಗೆಲ್ಲಲು ಸಾಧ್ಯವಾಗಿಲ್ಲ ಎಂದಿದ್ದಾರೆ.

ವಿಶ್ವಮಟ್ಟದಲ್ಲಿ ಭಾರತದ ಗೌರವವನ್ನು ಹೆಚ್ಚಿಸಿರುವ, ದೇಶದ ಅಭಿವೃದ್ಧಿಗೆ ನಿರಂತರವಾಗಿ ಶ್ರಮಿಸುತ್ತಿರುವ ಪ್ರಧಾನಿ ವಿರುದ್ಧ ಈ ರೀತಿಯ ಅವಹೇಳನಕಾರಿ ಹೇಳಿಕೆಗಳನ್ನು ನೀಡುವುದು ನಸೀರ್ ಅವರ ರಾಜಕೀಯ ದಿವಾಳಿತನವನ್ನು ಪ್ರತಿಬಿಂಬಿಸುತ್ತದೆ. ಜವಾಬ್ದಾರಿಯುತ ರಾಜಕೀಯ ನಾಯಕನಿಂದ ಇಂತಹ ಅಹಿತಕರ, ರಾಷ್ಟ್ರವಿರೋಧಿ ಹೇಳಿಕೆಗಳನ್ನು ನಿರೀಕ್ಷಿಸಲಾರೆವು ಎಂದು ಟೀಕಾ ಪ್ರಹಾರ ನಡೆಸಿದ್ದಾರೆ. ಇಂತಹ ರಾಷ್ಟ್ರವಿರೋಧಿ ಹಾಗೂ ಜನವಿರೋಧಿ ರಾಜಕೀಯ ಧೋರಣೆಗಳಿಗೆ ಅಂತ್ಯ ಹಾಡುವ ಉದ್ದೇಶದಿಂದ ಬಿಜೆಪಿ ಮುಂದಿನ ದಿನಗಳಲ್ಲಿ ದೇಶದಾದ್ಯಂತ ಜನಜಾಗೃತಿ ಮತ್ತು ಸಂಘಟಿತ ಹೋರಾಟ ನಡೆಸಲಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಮೋದಿ ವಿರುದ್ಧ ನಿಂದನಾತ್ಮಕ ಪದ**

ಮಾಜಿ ಸಂಸದ ಎಸ್.ಮುನಿಸ್ವಾಮಿ ಮಾತನಾಡಿ, ಪ್ರಧಾನಿ ಮೋದಿ ಕಳೆದ 11 ವರ್ಷಗಳಿಂದ ಯಾವುದೇ ಭ್ರಷ್ಟಾಚಾರವಿಲ್ಲದೆ ಆಡಳಿತ ನಡೆಸುತ್ತಿದ್ದಾರೆ. ಅಂಥವರಿಗೆ ನಸೀರ್ ಅಹ್ಮದ್ 'ದೇಶದ್ರೋಹಿ' ಎಂಬ ಪದ ಬಳಸಿದ್ದಾರೆ. ನಸೀರ್ ಅವರೇ ದೇಶದ್ರೋಹಿ ಎಂದು ತಿರುಗೇಟು ನೀಡಿದ್ದಾರೆ. ನಸೀರ್ ಗುಜರಿ ಅಂಗಡಿ ಇಟ್ಟುಕೊಂಡು ಕೆಲಸ ಮಾಡುತ್ತಿದ್ದವರು. ರೈಲ್ವೆ ಆಸ್ತಿಯಲ್ಲಿ ಗಾರ್ಮೆಂಟ್ಸ್ ಕಟ್ಟಿಕೊಂಡಿದ್ದಾರೆ. ವಕ್ಫ್ ಬೋರ್ಡ್ ಹೆಸರಲ್ಲಿ ಮುಸ್ಲಿಮರಿಗೆ ಮೋಸ ಮಾಡಿ ಆಸ್ತಿ ಕಬಳಿಸಿದ್ದಾರೆ. ಅವರು ಮೋದಿ ಅವರ ಕಾಲಿನ ಧೂಳಿಗೂ ಸಮ ಅಲ್ಲ. ಅವರನ್ನು ಕೂಡಲೇ ವಿಧಾನ ಪರಿಷತ್ತಿನಿಂದ ಅಮಾನತು ಮಾಡಬೇಕು. ಕಾನೂನು ಪ್ರಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದ್ದಾರೆ. ಮತ್ತೆ ಮೋದಿ ಕುರಿತು ಏನಾದರೂ ಮಾತನಾಡಿದರೆ ಯಾವ ರೀತಿ ಉತ್ತರ ಕೊಡಬೇಕೆಂಬುದು ನಮಗೆ ಗೊತ್ತಿದೆ. ಮನೆ ಬಿಟ್ಟು ಈಚೆ ಓಡಾಡಲು ಅವರು ನೂರು ಸಲ ಯೋಚಿಸಬೇಕಾಗುತ್ತದೆ. ದೇಶದಲ್ಲಿದ್ದು, ದೇಶದ ನೆಲ, ಜಲ ಅನುಭವಿಸಿ ಪಾಕಿಸ್ತಾನದ ಏಜೆಂಟ್‌ರಂತೆ ವರ್ತನೆ ಮಾಡುತ್ತಿದ್ದಾರೆ.

ಅವರು ಒಂದು ಸಮುದಾಯಕ್ಕೆ ವಿಧಾನ ಪರಿಷತ್ ಸದಸ್ಯರಾಗಿರುವುದಲ್ಲ. ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ಆಗಿರಲು ಅವರು ನಾಲಾಯಕ್ ಎಂದು ತಮ್ಮ ಫೇಸ್‌ಬುಕ್ ಖಾತೆಯಲ್ಲಿ ವಿಡಿಯೋ ಮೂಲಕ ಟೀಕಿಸಿದ್ದಾರೆ.

ಈ ಸಂಬಂಧ ಕಲಾಪದಲ್ಲೂ ಮಾತಿನ ಚಕಮಕಿ ನಡೆದಿದ್ದು, ಈಗಾಗಲೇ ನಸೀರ್ ಅಹ್ಮದ್ ಅವರು, 'ನನ್ನ ಮಾತಿನಿಂದ ನೋವಾಗಿದ್ದರೆ ವಿಷಾದಿಸುತ್ತೇನೆ' ಎಂದು ತಿಳಿಸಿದ್ದಾರೆ.

### ಸರ್ವೋದಯ ದಿನ ಆಚರಣೆ ಗಾಂಧೀಜಿ ವಿಚಾರ ಕೊಲ್ಲುವ ಪ್ರಯತ್ನ




• ಉದಯವಾಹಿನಿ, ತುಮಕೂರು

ಪ್ರಸ್ತುತ ಸಾಮಾಜಿಕ ಜಾಲ ತಾಣದಲ್ಲಿ ಗಾಂಧೀಜಿ ವಿರುದ್ಧ ನಿರಂತರವಾಗಿ ಅಪಪ್ರಚಾರ ಮಾಡಲಾಗುತ್ತಿದೆ. ಅವರ ವಿಚಾರಧಾರೆಗಳನ್ನು ಕೊಲ್ಲುವ ಪ್ರಯತ್ನ ನಡೆಯುತ್ತಿದೆ ಎಂದು ಬೆಂಗಳೂರಿನ ಗಾಂಧಿ ಭವನದ ಅಧ್ಯಕ್ಷ ವೂಡೇ ಪಿ.ಕೃಷ್ಣ ವಿಷಾದಿಸಿದರು. ನಗರದಲ್ಲಿ ಬಾಪೂಜಿ ವಿದ್ಯಾಸಂಸ್ಥೆಯಿಂದ ಆಯೋಜಿಸಿದ್ದ ಸರ್ವೋದಯ ದಿನಾಚರಣೆ, ಮಹಾತ್ಮ ಗಾಂಧಿ ಆತ್ಮಕಥನ 'ನನ್ನ ಸತ್ಯಾನ್ವೇಷಣೆ'ಯ ಶತಮಾನೋತ್ಸವ, ಎಂ.ಬಸವಯ್ಯ ರಚನೆಯ 'ಸತ್ಯಾನ್ವೇಷಣೆ ಒಂದು ಮಹಾಕೃತಿ', ಎಚ್.ಎಸ್.ಸುರೇಶ್ ಅವರ 'ಘಾತಕ ಲೋಕದಿಂದ ಗಾಂಧಿಯಾನದೆಡೆಗೆ' ಕೃತಿ ಬಿಡುಗಡೆ ಕಾರ್ಯಕ್ರಮದಲ್ಲಿ ಮಾತನಾಡಿದರು. ಗಾಂಧೀಜಿ ಅವರನ್ನು ಇಡೀ ಪ್ರಪಂಚ ಸತ್ಯ ಮತ್ತು ಅಹಿಂಸೆಯ ಪ್ರತಿರೂಪವಾಗಿ ನೋಡುತ್ತಿದೆ. ದೇಶದ ಯುವ ಸಮೂಹ ಏಕಾಗ್ರತೆ ಕೊರತೆಯಿಂದ ಸತ್ಯ, ಸುಳ್ಳುಗಳ ವಿಮರ್ಶೆ ಮಾಡುತ್ತಿಲ್ಲ. ಯುವ ಜನರಿಗೆ ಎಂ.ಬಸವಯ್ಯ ಅವರ ಸತ್ಯಾನ್ವೇಷಣೆ ಕೃತಿ ಗಾಂಧೀಜಿಯ ಬದುಕಿನ ವಿವಿಧ ಮಜಲುಗಳನ್ನು ಪರಿಚಯಿಸಲಿದೆ ಎಂದರು. ಕೆಪಿಸಿಸಿ ಉಪಾಧ್ಯಕ್ಷ ಮುರಳೀಧರ್‌ಹಾಲಪ್ಪ, 'ಸತ್ಯಾನ್ವೇಷಣೆ ಒಂದು ಮಹಾಕೃತಿ', 'ಘಾತಕ ಲೋಕದಿಂದ ಗಾಂಧಿಯಾನದೆಡೆಗೆ' ಪುಸ್ತಕಗಳನ್ನು ಜಿಲ್ಲೆಯ ಪ್ರತಿ ಶಾಲಾ-ಕಾಲೇಜಿಗೆ ತಲುಪಿಸಲಾಗುವುದು. ಕಾರಾಗೃಹದ ಕೈದಿಗಳಿಗೂ ನೀಡಲಾಗುವುದು ಎಂದು ಹೇಳಿದರು.

# ನಿಖಿಲ್ ಕುಮಾರಸ್ವಾಮಿ ರಾಜಕೀಯ ಭವಿಷ್ಯಕ್ಕೆ ವೇದಿಕೆ ಸಜ್ಜು

### ರಾಮನಗರ ನಮ್ಮ ತಂದೆಯ ಕರ್ಮಭೂಮಿ, ನಮ್ಮ ತಾತನಿಗೆ ರಾಜಕೀಯ ಮರುಜನ್ಮ ನೀಡಿದ ಪುಣ್ಯಭೂಮಿ


• ಉದಯವಾಹಿನಿ, ರಾಮನಗರ

2028ರಲ್ಲಿ ನಡೆಯಬೇಕಾಗಿರುವ ವಿಧಾನಸಭಾ ಚುನಾವಣೆಗೆ ದಳಪತಿಗಳು ಈಗಿಂದಲೇ ಸಜ್ಜಾದಂತಿದೆ. ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಮತ್ತು ಜೆಡಿಎಸ್ ವರಿಷ್ಠ ಎಚ್.ಡಿ.ದೇವೇಗೌಡರು, ಈಗಾಗಲೇ ಹಲವು ಸುತ್ತಿನ ಸಭೆಯನ್ನು ನಡೆಸಿದ್ದಾರೆ. ಇನ್ನು, ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ, ತಮ್ಮ ಮುಂದಿನ ಕ್ಷೇತ್ರದ ಬಗ್ಗೆ ಸ್ಪಷ್ಟವಾಗಿ ಹೇಳಿದ್ದಾರೆ.

ತನ್ನನ್ನೇ ನಂಬಿರುವ ಸಾವಿರಾರು ಕಾರ್ಯಕರ್ತರಿದ್ದಾರೆ ಎಂದಿರುವ ನಿಖಿಲ್ ಕುಮಾರಸ್ವಾಮಿ, ತಂದೆ ಕುಮಾರಸ್ವಾಮಿಯವರ ಕರ್ಮಭೂಮಿ, ತಾತ ದೇವೇಗೌಡರಿಗೆ ರಾಜಕೀಯ ಮರುಜನ್ಮ ನೀಡಿದ ಮಣ್ಣನ್ನು ಬಿಟ್ಟು ಎಲ್ಲಿಗೂ ಹೋಗುವುದಿಲ್ಲ ಎಂದು ಹೇಳಿದ್ದಾರೆ. ಆ ಮೂಲಕ, ಮುಂದಿನ ಚುನಾವಣೆಯನ್ನು ರಾಮನಗರದಿಂದಲೇ ಸ್ಪರ್ಧಿಸುವುದಾಗಿ ಹೇಳಿದ್ದಾರೆ.

**ಭಾವನಾತ್ಮಕ ಸಂಬಂಧದ ರಾಮನಗರವೇ ಫೈನಲ್**

ಚುನಾವಣಾ ರಾಜಕೀಯದಲ್ಲಿ ಇದುವರೆಗೂ ನಿಖಿಲ್‌ಕುಮಾರಸ್ವಾಮಿ ಯಶಸ್ಸನ್ನು ಗಳಿಸಿಲ್ಲ. 2019ರ ಲೋಕಸಭಾ ಚುನಾವಣೆಯಲ್ಲಿ ಮಂಡ್ಯದಿಂದ ಸ್ಪರ್ಧಿಸಿ, ಸುಮಲತಾ ಅಂಬರೀಶ್ ವಿರುದ್ಧ ಸೋಲುಂಡಿದ್ದರು. ಇದಾದ ನಂತರ, 2023ರ ಅಸೆಂಬ್ಲಿ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಎಚ್.ಎ.ಇಕ್ಬಾಲ್ ಹುಸೇನ್ ವಿರುದ್ಧ ಸೋಲುಂಡಿದ್ದರು.


ಉದಯವಾಹಿನಿ ಚಿತ್ರ

**ರಾಮನಗರ ಜಿಲ್ಲೆಯ ಅಭಿವೃದ್ಧಿಗೆ ದೇವೇಗೌಡರ ಕುಟುಂಬದ ಕೊಡುಗೆ**

**ನಾನು ಈ ಕ್ಷೇತ್ರದಲ್ಲಿ ಕಳೆದ ಚುನಾವಣೆಯಲ್ಲಿ ಸೋತಿದ್ದೇನೆ. ಸೋಲು ಮತ್ತು ಗೆಲುವನ್ನು ರಾಜಕೀಯದಲ್ಲಿ ಸಮನಾಗಿ ತೆಗೆದುಕೊಳ್ಳಬೇಕು ಎನ್ನುವುದು ನನ್ನ ನಿಲುವು. ನಮ್ಮ ಕುಟುಂಬವನ್ನು ಪ್ರೀತಿಸುವ ದೊಡ್ಡ ವರ್ಗವೇ ಇದೆ. ಅವರನ್ನು ನಡುನೀರಿನಲ್ಲಿ ಬಿಟ್ಟು ಬೇರೆ ಕ್ಷೇತ್ರವನ್ನು ಅರಸಿಕೊಂಡು ನಾನು ಹೋಗಲಾರೆ, ಅದು ನನ್ನ ಜಾಯಮಾನವೂ ಅಲ್ಲ ಎಂದು ನಿಖಿಲ್ ಕುಮಾರಸ್ವಾಮಿ ಹೇಳಿದ್ದಾರೆ. ರಾಮನಗರ ಜಿಲ್ಲೆಯ ಅಭಿವೃದ್ಧಿಗೆ ದೇವೇಗೌಡರ ಕುಟುಂಬದ ಕೊಡುಗೆ ಏನು ಎಂದು ಕೆಲವರು ಪ್ರಶ್ನಿಸಿದ್ದಾರೆ. ಅದಕ್ಕೆ ನಾನು ಬೇಡ, ಇಲ್ಲಿನ ಜನರೇ ಉತ್ತರವನ್ನು ಕೊಡುತ್ತಾರೆ. ನೀರಾವರಿ, ರಸ್ತೆ ಅಭಿವೃದ್ಧಿ, ಮೂಲಭೂತ ಸೌಕರ್ಯಗಳಿಗೆ ನಮ್ಮ ಕುಟುಂಬದ ಪರಿಶ್ರಮವಿದೆ ಎನ್ನುವುದನ್ನು ಯಾರೂ ಮರಿಯಬಾರದು.**

**– ನಿಖಿಲ್ ಕುಮಾರಸ್ವಾಮಿ, ಜೆಡಿಎಸ್ ಯುವ ಘಟಕದ ಅಧ್ಯಕ್ಷ**

ಇದಾದ ನಂತರ, ಚನ್ನಪಟ್ಟಣ ಕ್ಷೇತ್ರದ ಉಪಚುನಾವಣೆಯಲ್ಲೂ, ಸಿಪಿ ಯೋಗೇಶ್ವರ್ ವಿರುದ್ಧ ಪರಾಭವ ಕಂಡಿದ್ದರು.

**ರಾಮನಗರದಲ್ಲಿ ಹಿನ್ನಡೆ ಒಪ್ಪಿಕೊಂಡ ನಿಖಿಲ್:** ಕಳೆದ ಕೆಲವು ತಿಂಗಳಿನಿಂದ ಜೆಡಿಎಸ್ ಪಾರ್ಟಿಗೆ ರಾಮನಗರ ಜಿಲ್ಲೆಯಲ್ಲಿ ಹಿನ್ನಡೆಯಾಗಿರುವುದನ್ನು ಒಪ್ಪಿಕೊಂಡಿರುವ ನಿಖಿಲ್, ರಾಜಕೀಯದಲ್ಲಿ ಏರಿಳಿತಗಳು ಸಾಮಾನ್ಯ ಎಂದಿದ್ದಾರೆ. ಅದಕ್ಕೆ, ತನ್ನದೇ ಸೋಲನ್ನು ನಿಖಿಲ್ ಉದಾಹರಣೆಗೆ ತೆಗೆದುಕೊಂಡಿದ್ದಾರೆ. ನಾಲ್ಕು ಬಾರಿ ನಾವು ಗೆದ್ದಿದ್ದೆವು, ಆದರೆ ಚುನಾವಣೆಯಲ್ಲಿ ನಮಗೆ ಸೋಲಾಯಿತು ಎಂದಿದ್ದಾರೆ.

**ರಾಜಕೀಯವಾಗಿ ದೇವೇಗೌಡರಿಗೆ ಪುಣ್ಯಭೂಮಿ:** ರಾಜಕೀಯದಲ್ಲಿ ಎಲ್ಲವನ್ನೂ ಬಂದ ಹಾಗೇ ಸಮವಾಗಿ ತೆಗೆದುಕೊಳ್ಳಬೇಕು ಎಂದಿರುವ ನಿಖಿಲ್, ರಾಮನಗರ ನಮ್ಮ ತಂದೆಯ ಕರ್ಮಭೂಮಿ ಮತ್ತು ನಮ್ಮ ತಾತನಿಗೆ ರಾಜಕೀಯ ಮರುಜನ್ಮ ನೀಡಿದ ಪುಣ್ಯಭೂಮಿ, ಹಾಗಾಗಿ ಆ ಮಣ್ಣನ್ನು ಬಿಟ್ಟು ಎಲ್ಲಿಗೂ ಹೋಗುವುದಿಲ್ಲ ಎಂದು ಹೇಳಿದ್ದಾರೆ. 1994ರಲ್ಲಿ ಹಾಸನದಿಂದ ನಮ್ಮ ತಾತ ದೇವೇಗೌಡರು ಇಲ್ಲಿಗೆ (ರಾಮನಗರ) ಬಂದಿದ್ದರು. ಇಲ್ಲಿನ ಜನತೆ ನಮ್ಮ ತಾತನಿಗೆ ರಾಜಕೀಯವಾಗಿ ಪುನರ್ಜನ್ಮವನ್ನು ನೀಡಿದರು. ಈ ಕ್ಷೇತ್ರದ ಮೇಲೆ ನಮಗೆ ಋಣವಿದೆ. ಹಾಗಾಗಿ, ಈ ಪವಿತ್ರ ಮಣ್ಣನ್ನು ಬಿಟ್ಟು ಹೋಗಲು ಸಾಧ್ಯವೇ ಎಂದು ಪ್ರಶ್ನಿಸಿದ್ದಾರೆ.

**ಅಭಿವೃದ್ಧಿಯ ಹಿತದೃಷ್ಟಿಯಿಂದ ನಡೆಯಬೇಕು**

**ಪಕ್ಷದ ಹಿರಿಯ ಮುಖಂಡರಿದ್ದಾರೆ ಮತ್ತು ನಮ್ಮ ಕುಟುಂಬವನ್ನು ಪ್ರೀತಿಸುವ ಒಂದು ದೊಡ್ಡ ವರ್ಗವೇ ಅಲ್ಲಿದೆ. ಜಾತಿಗಣತಿಯು ಕೇವಲ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಅಭಿವೃದ್ಧಿಯ ಹಿತದೃಷ್ಟಿಯಿಂದ ನಡೆಯಬೇಕೇ ಹೊರತು, ಇದು ರಾಜಕೀಯ ಉದ್ದೇಶದ ತಂತ್ರವಾಗಬಾರದು, ಆ ಮೂಲಕ, ಯಾವ ಕ್ಷೇತ್ರದಿಂದ ಸ್ಪರ್ಧಿಸುತ್ತಿದ್ದೇನೆ ಎನ್ನುವ ಮಾಹಿತಿಯನ್ನು ಅವರು ನೀಡಿದ್ದಾರೆ.**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 01:30 ರಿಂದ 03:00 |
| ಗುಳಿಕ ಕಾಲ | ಬೆಳಿಗ್ಗೆ | 09:00 ರಿಂದ 10:30 |
| ಯಮಗಂಡ ಕಾಲ | ಬೆಳಿಗ್ಗೆ | 06:00 ರಿಂದ 07:30 |

**ಮೇಷ** ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ಹೊಸ ಪ್ರೀತಿಯ ಸಂಪರ್ಕವನ್ನು ಹೊಂದುವ ಅವಕಾಶಗಳು ಬಲವಾಗಿದ್ದರೂ ವೈಯಕ್ತಿಕವಾದ, ಗೌಪ್ಯವಾದ ಮಾಹಿತಿಯನ್ನು ಬಹಿರಂಗಪಡಿಸಬೇಡಿ.

**ವೃಷಭ** ಈ ರಾಶಿಚಕ್ರಕ್ಕೆ ಸಂಬಂಧಿಸಿದ ಕೆಲವರು ಭೂಮಿಗೆ ಸಂಬಂಧಿಸಿದ ವಿಷಯದ ಬಗ್ಗೆ ಹಣವನ್ನು ಖರ್ಚುಮಾಡಬಹುದು ಸಂಬಂಧಗಳೊಂದಿಗಿನ ಸಂಬಂಧಗಳು ಹಾಗೂ ಬಂಧಗಳ ನವೀಕರಣದ ಒಂದು ದಿನ.

**ಮಿಥುನ** ನಿಮ್ಮ ಆರೋಗ್ಯ ಸುಧಾರಿಸವುದನ್ನು ಪ್ರಾರಂಭಿಸಲು ಅತ್ಯುತ್ತಮ ದಿನ. ನೀವು ನಿಮ್ಮ ಹೂಡಿಕೆಗಳನ್ನು ಸಂಪ್ರದಾಯಬದ್ಧವಾಗಿ ಉಳಿತಾಯ ಮಾಡಿದರೆ ಹಣ ಮಾಡುತ್ತೀರಿ.

**ಕರ್ಕಾಟಕ** ನಿಮ್ಮ ನಿರಂತರ ಸಕಾರಾತ್ಮಕ ಚಿಂತನೆಯನ್ನು ಪ್ರಶಂಸಿಸಲಾಗುತ್ತದೆ. ನಿಮ್ಮ ಪ್ರಯತ್ನದಲ್ಲಿ ನೀವು ಯಶಸ್ವಿಯಾಗಬಹುದು. ಸ್ವಲ್ಪ ಹೆಚ್ಚು ಹಣ ಮಾಡಲು ನಿಮ್ಮ ನವೀನ ಕಲ್ಪನೆಯನ್ನು ಬಳಸಿ.

**ಸಿಂಹ** ಹಣಕಾಸು, ಪ್ರೀತಿ, ಕುಟುಂಬದಿಂದ ದೂರ ಹೋಗಿ ಆನಂದವನ್ನು ಹುಡುಕುತ್ತ ಯಾವುದೇ ಆಧ್ಯಾತ್ಮಿಕ ಗುರುವನ್ನು ಭೇಟಿ ಮಾಡಲು ಹೋಗಬಹುದು. ನಿಮ್ಮ ಸಂಗಾತಿಯ ಜೊತೆ ಪ್ರೀತಿಯಲ್ಲಿ ಬೀಳುತ್ತೀರಿ.

**ಕನ್ಯಾ** ನಿಮ್ಮ ಚೈತನ್ಯವನ್ನು ಹೆಚ್ಚಿಸಲು ಮನಸ್ಸಿನಲ್ಲಿ ಒಂದು ಪ್ರಕಾಶಮಾನವಾದ ಸುಂದರವಾದ ಮತ್ತು ಅದ್ಭುತವಾದ ಚಿತ್ರವನ್ನು ಕಲ್ಪಿಸಿಕೊಳ್ಳಿ. ನೀವು ನಿಮ್ಮ ಹಣವನ್ನು ಖರ್ಚು ಮಾಡುವ ಅಗತ್ಯವಿಲ್ಲ,

**ತುಲಾ** ದ್ವೇಷ ಪ್ರೀತಿಗಿಂತ ಹೆಚ್ಚು ಶಕ್ತಿಶಾಲಿಯಾಗಿದ್ದು ನಿಮ್ಮ ದೇಹದ ಮೇಲೆ ಪ್ರಾಣಾಂತಿಕ ಪರಿಣಾಮ ಬೀರುವದರಿಂದ ನಿಮ್ಮ ದ್ವೇಷವನ್ನು ಸಾಯಿಸಲು ಒಂದು ಸಮರಸದ ಸ್ವಭಾವವನ್ನು ರೂಪಿಸಿಕೊಳ್ಳಿ.

**ವೃಶ್ಚಿಕ** ಕೋಪದ ಬಡಿದೆಬ್ಬಿಸುವಿಕೆ ವಾದ, ಘರ್ಷಣೆಗೆ ಕಾರಣವಾಗಬಹುದು. ಪ್ರಮುಖ ಜನರು ವಿಶೇಷ ವರ್ಗ ಹೊಂದಿರುವ ಯಾವುದಕ್ಕಾದರೂ ಹಣಕಾಸು ನೀಡಲು ಸಿದ್ಧವಾಗಿರುತ್ತಾರೆ.

**ಧನಸ್ಸು** ನಿಮಗೇನು ಒಳ್ಳೆಯದೆಂದು ನಿಮಗೆ ಮಾತ್ರ ಗೊತ್ತು – ಆದ್ದರಿಂದ ಧೃಢವಾಗಿರಿ ಮತ್ತು ಧೈರ್ಯಶಾಲಿಗಳಾಗಿರಿ ಮತ್ತು ತಕ್ಷಣದ ನಿರ್ಧಾರಗಳನ್ನು ತೆಗೆದುಕೊಳ್ಳಿ ಹಾಗೂ ಫಲಿತಾಂಶಗಳಿಗೆ ಸಿದ್ಧವಾಗಿರಿ.

**ಮಕರ** ಮಕ್ಕಳು ನಿಮ್ಮ ದಿನವನ್ನು ಕಠಿಣಗೊಳಿಸುತ್ತಾರೆ. ಅವರ ಆಸಕ್ತಿ ಕಾಯ್ದುಕೊಳ್ಳಲು ಪ್ರೀತಿಯ ಅಸ್ತ್ರ ಬಳಸಿ ಮತ್ತು ಯಾವುದೇ ಅನಗತ್ಯ ಒತ್ತಡ ತಪ್ಪಿಸಿ. ಪ್ರೀತಿಯಿಂದ ಪ್ರೀತ ಜನಿಸುತ್ತದೆಂದು ನೆನಪಿಡಿ.

**ಕುಂಭ** ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ.

**ಮೀನ** ಧ್ಯಾನ ಮತ್ತು ಆತ್ಮ ಸಾಕ್ಷಾತ್ಕಾರ ಪ್ರಯೋಜನಕಾರಿಯಾಗಬಹುದು. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ನೀವು ಅಪರೂಪಕ್ಕೆ ಭೇಟಿ ಮಾಡುವ ಜನರನ್ನು ಸಂಪರ್ಕಿಸಲು ಒಳ್ಳೆಯ ದಿನ.

### ಅಸಂಘಟಿತ ವಲಯದ ಕಾರ್ಮಿಕರ ವತಿಯಿಂದ ದೇಶದ ಅರ್ಧದಷ್ಟು ಆದಾಯವು ಉತ್ಪಾದನೆ: ವೈ ಎಲ್ ಶಶಿಕಲಾ

# ಪ್ರಧಾನಮಂತ್ರಿ ಶ್ರಮ ಯೋಗಿ ಮಾನ್ ಧನ್ ಮಾಡಿಸುವಂತೆ ಮನವಿ

• ಉದಯವಾಹಿನಿ ಅರಸೀಕೆರೆ



ಉದಯವಾಹಿನಿ ಚಿತ್ರ

ಅಸಂಘಟಿತ ವಲಯದ ಕಾರ್ಮಿಕರ ವತಿಯಿಂದ ದೇಶದ ಅರ್ಧದಷ್ಟು ಆದಾಯವು ಉತ್ಪಾದನೆಯಾಗುತ್ತಿದ್ದು ದೈನಂದಿನ ಜೀವನದಲ್ಲಿ ಗೃಹ ಆಧಾರಿತ ಕಾರ್ಮಿಕರಾದ ಬೀದಿಬದಿ ವ್ಯಾಪಾರಿಗಳು ಬಿಸಿಯೂಟ ಸಿದ್ಧಪಡಿಸುವವರು ಹಮಾಲಿಗಳು ಇಟ್ಟಿಗೆ ಕಾರ್ಮಿಕರು ಬಟ್ಟೆ ಕಾರ್ಮಿಕರು, ಚಮ್ಮಾರರು ತಿಂಡಿ ಆಯವರು ಮನೆ ಕೆಲಸದವರು ಅಗಸರು ಆಟೋರಿಕ್ಷಾ ಚಾಲಕರು ಭೂ ರಹಿತ ಕಾರ್ಮಿಕರು ಸ್ವಯಂ ಉದ್ಯೋಗಿಗಳು ಕೃಷಿ ಕಾರ್ಮಿಕರು ಕಟ್ಟಡ ಕಾರ್ಮಿಕರು ಬೀಡಿ ಕಾರ್ಮಿಕರು ಕೈಮಗ್ಗ ಕಾರ್ಮಿಕರು ಚರ್ಮೋದ್ಯಮದ ಕಾರ್ಮಿಕರು ಧ್ವನಿ ಮತ್ತು ದೃಶ್ಯಮಾಧ್ಯಮದ ಕಾರ್ಮಿಕರು ಹೊಲಿಗೆ ಕಾರ್ಮಿಕರು ಹಾಗೂ ಹಲವಾರು ಉದ್ಯೋಗಿಗಳ ಕೆಲಸಗಾರರು ಅಸಂಘಟಿತ ಕಾರ್ಮಿಕರಾಗಿ ಕೆಲಸ ನಿರ್ವಹಿಸಿಕೊಂಡು ಜೀವನ ನಡೆಸುತ್ತಿದ್ದು ಅಸಂಘಟಿತ ಕಾರ್ಮಿಕರಿ ಗೆ ಜೀವನದ ವೃದ್ಧಾಪ್ಯ ಕಾಲದಲ್ಲಿ ತಮ್ಮನ್ನು ಪೋಷಿಸಿಕೊಳ್ಳಲು ಆರ್ಥಿಕ ಮೂಲಗಳು ಇರುವುದಿಲ್ಲ ಇಂತಹ ಅಸಂಘಟಿತ ವಲಯದ ಕಾರ್ಮಿಕರಿಗೆ ಅವರ ವಯೋವೃದ್ಧ ವೇಳೆಯಲ್ಲಿ ಸಾಮಾಜಿಕ ಭದ್ರತೆ ಕಲ್ಪಿಸಿರುವುದಕ್ಕಾಗಿ ಭಾರತ ಸರ್ಕಾರದಿಂದ ಪ್ರಧಾನ ಮಂತ್ರಿ ಶ್ರಮ ಯೋಗಿ ಮಾನ್ ಧನ್ ( ಪಿ ಎಂ ಎಸ್ ವೈ ಎಂ) ಎಂಬ ಮಹತ್ವಾಕಾಂಕ್ಷಿ ವಂತಿಗೆ ಆಧಾರಿತ ಪಿಂಚಣಿ ಯೋಜನೆಯನ್ನು ಜಾರಿಗೆ ತರಲಾಗಿರುತ್ತದೆ

ಈ ಯೋಜನೆ ಅಡಿ ಅಸಂಘಟಿತ ವಲಯದ ಕಾರ್ಮಿಕರು 18ರಿಂದ 40 ವರ್ಷದ ವಯಸ್ಸಿನವರಾಗಿದ್ದು ಅವರ ಮಾಸಿಕ ಆದಾಯ 15000 ಕ್ಕಿಂತ ಕಡಿಮೆ ಇರಬೇಕು ಇವರಿಗೆ ಆದಾಯ ತೆರಿಗೆ ಇಎಸ್ಐ ಪಿಎಫ್ ಎನ್ ಪಿಎಸ್ ಯೋಜನೆಯ ವ್ಯಾಪ್ತಿಗೆ ಒಳಪಟ್ಟಿರಬಾರದು ಬ್ಯಾಂಕ್ ಉಳಿತಾಯ ಖಾತೆ ಮತ್ತು ಆಧಾರ್ ಸಂಖ್ಯೆ ಹೊಂದಿರಬೇಕು . ಅರ್ಹ ಅಸಂಘಟಿತ ಕಾರ್ಮಿಕರು ಹತ್ತಿರದ ಸಿ ಎಸ್ ಸಿ ಕಾಮನ್ ಸರ್ವಿಸ್ ಸೆಂಟರ್‌ಗಳಲ್ಲಿ ಯೋಜನೆ ಅಡಿ ಫಲಾನುಭವಿಗಳಾಗಿ ನೋಂದಾಯಿಸಬಹುದಾಗಿರುತ್ತದೆ. ಸಿಎಸ್‌ಸಿ ವಿವರಗಳನ್ನು ಹತ್ತಿರದ ಎಲ್‌ಐಸಿ ಶಾಖೆಗಳು ಕಾರ್ಮಿಕ ಇಲಾಖೆ ಕೇಂದ್ರ, ಸರ್ಕಾರದ ಕಾರ್ಮಿಕ ಇಲಾಖೆ ಸಿ ಎಸ್ ಐ ಕಾರ್ಪೊರೇಷನ್ ಮತ್ತು ಭವಿಷ್ಯ ನಿಧಿ ಸಂಘಟನೆಯ ಕಚೇರಿಗಳು ಇಲಾಖೆಯ ವಿಳಾಸಗಳಲ್ಲಿ ಪಡೆಯಬಹುದಾಗಿರುತ್ತದೆ.

**18ನೇ ವಯಸ್ಸಿನಿಂದ 40ನೇ ವಯಸ್ಸಿನವರೆಗೆ**



ಕೇಂದ್ರ ಸರ್ಕಾರವು ಚಂದದಾರರು ಪಾವತಿಸುವ ವಂತಿಕೆಗೆ ಸಮಾನಾಂತರ ವಂತಿಕೆಯನ್ನು ಪಿಂಚಣಿ ಖಾತೆಗೆ ಪಾವತಿಸುತ್ತದೆ ಫಲಾನುಭವಿಯ ವಯಸ್ಸು 60 ವರ್ಷ ಪೂರ್ಣಗೊಂಡ ನಂತರ ತಿಂಗಳಿಗೆ 3000 ರೂಗಳ ಕನಿಷ್ಠ ಮಾಸಿಕ ಪಿಂಚಣಿಯನ್ನು ಪಡೆಯಲು ಅರ್ಹರಾಗಿರುತ್ತಾರೆ. ಫಲಾನುಭವಿಯು ನಿರಂತರವಾಗಿ ಹೊಂದಿಕೆಯನ್ನು ಪಾವತಿಸಿದ್ದು ಅವರು 60 ವರ್ಷದ ಒಳಗಾಗಿ ಮೃತಪಟ್ಟಲ್ಲಿ ಅಥವಾ ಶಾಶ್ವತ ಅಂಗ ನ್ಯೂನತೆಯಿಂದ ವಂತಿಕೆಯನ್ನು ಪಾವತಿಸಲು ಸಾಧ್ಯವಾಗದಿದ್ದಲ್ಲಿ ಅವನ ಅವಳ ಸಂಗಾತಿಯೂ ಈ ಯೋಜನೆಗೆ ಸೇರಬಹುದಾಗಿದ್ದು ವಂತಿಕೆಯನ್ನು ಪಾವತಿಸಿ ಮುಂದುವರಿಸಬಹುದಾಗಿರುತ್ತದೆ ಅವರ ವಂತಿಕೆಯನ್ನು ಬಡ್ಡಿಯೊಂದಿಗೆ ಪಡೆಯಲು ಅರ್ಹರಾಗಿರುತ್ತಾರೆ.

> ತಾಲ್ಲೂಕಿನಲ್ಲಿ ಅತಿ ಹೆಚ್ಚು ಅಸಂಘಟಿತ ಕಾರ್ಮಿಕರಾಗಿ ದುಡಿಯುತ್ತಿದ್ದು ಹಲವಾರು ಬಗೆಯ ಕಾರ್ಮಿಕ ವರ್ಗದವರು 18ನೇ ವಯಸ್ಸಿನಿಂದ 40ನೇ ವಯಸ್ಸಿನವರೆಗೆ ಈ ಯೋಜನೆಯು ನೋಂದಾಯಿಸಿಕೊಳ್ಳಲು ಅವಕಾಶವಿದ್ದು ಪ್ರತಿ ತಿಂಗಳು ಯೋಜನೆ ಅಡಿಯಲ್ಲಿ ವಂತಿಗೆ ಪಾವತಿಸುತ್ತಾ ಬಂದರೆ ತಮ್ಮ 60ನೇ ವಯಸ್ಸಿನಲ್ಲಿ ಪಿಂಚಣಿ ಪ್ರಾರಂಭವಾಗುತ್ತದೆ ತಾಲ್ಲೂಕಿನ ಎಲ್ಲಾ ಬಗೆಯ ಕಾರ್ಮಿಕ ಅಸಂಘಟಿತ ಕಾರ್ಮಿಕ ವರ್ಗದವರು ಈ ಯೋಜನೆ ಅಡಿಯಲ್ಲಿ ಕಾರ್ಮಿಕ ನಿರೀಕ್ಷಕರಾದ ವೈ ಎಲ್ ಶಶಿಕಲಾ ತಿಳಿಸಿದ್ದಾರೆ.-ವೈ ಎಲ್ ಶಶಿಕಲಾ
> ಕಾರ್ಮಿಕ ನಿರೀಕ್ಷಕರು ಅರಸೀಕೆರೆ

ಪಿಂಚಣಿ ಆರಂಭಗೊಂಡ ನಂತರ ಚಂದಾದಾರರು ಮೃತಪಟ್ಟಲ್ಲಿ ಅವರ ಪತ್ನಿ ಅಥವಾ ಪತಿ ಮಾತ್ರ ಪಿಂಚಣಿಯ ಶೇಕಡ 50ರಷ್ಟು ಪಿಂಚಣಿಯನ್ನು ಪಡೆಯಲು ಅರ್ಹರು ಯೋಜನೆಯ ವಿದ್ಯುನ್ಮಾನ ಆಧಾರಿತವಾಗಿದ್ದು ಎಸ್ ಎಂಎಸ್ ಮೂಲಕ ಎಲ್ಲಾ ವ್ಯವಹಾರಗಳ ಮಾಹಿತಿಯನ್ನು ಫಲಾನುಭವಿಗಳಿಗೆ ಕಾಲಕಾಲಕ್ಕೆ ತಿಳಿಸಲಾಗುತ್ತದೆ ಆದ್ದರಿಂದ ಈ ಹೆಚ್ಚಿನ ಯೋಜನೆಗಳನ್ನು ಅರಸೀಕೆರೆ ತಾಲ್ಲೂಕಿನ ಎಲ್ಲಾ ಅಸಂಘಟಿತ ಕಾರ್ಮಿಕರು ಹೆಚ್ಚಿನ ಸಂಖ್ಯೆಯಲ್ಲಿ ನೋಂದಾಯಿಸಿಕೊಂಡು ಈ ಪ್ರಧಾನಮಂತ್ರಿ ಶ್ರಮಯೋಗಿ ಮಾನ್ ಧನ್ ( ಪಿ ಎಂ ಎಸ್ ವೈ ಎಂ ) ಯೋಜನೆಯನ್ನು ಸದುಪಯೋಗಪಡಿಸಿಕೊಳ್ಳಬೇಕೆಂದು ಅರಸೀಕೆರೆ ತಾಲ್ಲೂಕಿನ ಕಾರ್ಮಿಕ ಇಲಾಖೆಯ ನಿರೀಕ್ಷಕರಾದ ವೈ ಎಲ್ ಶಶಿಕಲಾ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

## ಫೆಬ್ರವರಿ ಅಂತ್ಯದೊಳಗೆ ಕಾಮಗಾರಿಗಳ ಆರಂಭಕ್ಕೆ ಸೂಚನೆ: ಜಿಲ್ಲಾಧಿಕಾರಿ

• ಉದಯವಾಹಿನಿ ಚಿತ್ರದುರ್ಗ

ಮುಖ್ಯಮಂತ್ರಿಗಳ ಮೂಲ ಸೌಕರ್ಯ ಅಭಿವೃದ್ಧಿ ಯೋಜನೆಯಡಿ ಆಡಳಿತಾತ್ಮಕ ಅನುಮೋದನೆ ಪಡೆದು, ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡಿರುವ ಎಲ್ಲಾ ಕಾಮಗಾರಿಗಳಿಗೆ ಆಯಾ ಸ್ಥಳೀಯ ಶಾಸಕರಿಂದ ಭೂಮಿ ಪೂಜೆ ನೆರವೇರಿಸಿ, ಫೆಬ್ರವರಿ ಅಂತ್ಯದೊಳಗೆ ಕೆಲಸ ಆರಂಭಿಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚಿಸಿದರು.


ಉದಯವಾಹಿನಿ ಚಿತ್ರ

ಈ ಕುರಿತು ನಗರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ವಿವಿಧ ಇಲಾಖಾವಾರು ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿ ಅವರು ಮಾತನಾಡಿದರು. ಯೋಜನೆಯಡಿ ಜಿಲ್ಲೆಗೆ ರೂ.275 ಕೋಟಿ ಅನುದಾನ ಬಿಡುಗಡೆ ಮಾಡಿ ನಾಲ್ಕು ತಿಂಗಳು ಸಂದಿವೆ. ಮೊಳಕಾಲ್ಮೂರು, ಚಳ್ಳಕೆರೆ, ಚಿತ್ರದುರ್ಗ, ಹಿರಿಯೂರು ಹಾಗೂ ಹೊಸದುರ್ಗ ವಿಧಾನಸಭಾ ಮತಕ್ಷೇತ್ರಗಳ ವ್ಯಾಪ್ತಿಯಲ್ಲಿ ತಲಾ ರೂ.50 ಕೋಟಿ ಹಾಗೂ ಹೊಳಲ್ಕೆರೆ ಮತಕ್ಷೇತ್ರಕ್ಕೆ ರೂ. 25 ಕೋಟಿ ನೀಡಲಾಗಿದೆ. ಒಟ್ಟು 304 ಕಾಮಗಾರಿಗಳನ್ನು ಕೈಗೊಳ್ಳುವಂತೆ ಶಾಸಕರುಗಳು ಪ್ರಸ್ತಾಪಿಸಿದ್ದಾರೆ. ಇದರಲ್ಲಿ ರೂ.210 ಕೋಟಿ ವೆಚ್ಚದ 178 ಕಾಮಗಾರಿಗೆ ಆಡಳಿತಾತ್ಮಕ ಮಂಜೂರಾತಿ ನೀಡಲಾಗಿದೆ. ರೂ.65 ಕೋಟಿ ವೆಚ್ಚದ 126 ಕಾಮಗಾರಿಗಳಿಗೆ ಆಡಳಿತಾತ್ಮಕ ಮಂಜೂರಾತಿ ನೀಡಲು ಪ್ರಸ್ತಾವನೆ ಸಲ್ಲಿಸಲಾಗಿದೆ. ಈಗಾಗಲೇ ಆಡಳಿತಾತ್ಮಕ ಮಂಜೂರಾತಿ ಪಡೆದು ಲೋಕೋಪಯೋಗಿ ಇಲಾಖೆ, ಕೆ.ಆರ್.ಐ.ಡಿ.ಎಲ್., ನಗರ ಸ್ಥಳೀಯ ಸಂಸ್ಥೆ ಹಾಗೂ ಪುರಸಭೆಗಳು, ನಿರ್ಮಿತಿ ಕೇಂದ್ರ, ಪಂಚಾಯತ್ ರಾಜ್ ಮತ್ತು ಇಂಜಿನಿಯರಿಂಗ್ ವಿಭಾಗ ವತಿಯಿಂದ ಕೈಗೊಳ್ಳುತ್ತಿರುವ ಕಾಮಗಾರಿಗಳ ವೇಗ ಹೆಚ್ಚಿಸಬೇಕು. ಭೌತಿಕ ಪ್ರಗತಿಯ ಜೊತೆಗೆ ಆರ್ಥಿಕ ಪ್ರಗತಿಯನ್ನು ಸಹ ಸಾಧಿಸಬೇಕು ಎಂದು ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು. ಅನುದಾನದ ಬಳಕೆ ಹಾಗೂ ಕಾಮಗಾರಿ ಯೋಜನೆ ತಯಾರಿಸುವಾಗ ಅಧಿಕಾರಿಗಳು ಎಚ್ಚರದಿಂದ ಇರಬೇಕು. ಜಿಲ್ಲೆಯಲ್ಲಿ ಡಿ.ಎಂ.ಎಫ್, ಕೆ.ಎಂ.ಇ.ಆರ್.ಸಿ, ಎನ್.ಡಿ.ಆರ್.ಎಫ್, ಎಸ್.ಡಿ.ಆರ್.ಎಫ್ ಯೋಜನೆಗಳು, ಸ್ಥಳೀಯ ಶಾಸಕರು, ಸಂಸದರ ಪ್ರದೇಶಾಭಿವೃದ್ಧಿ ನಿಧಿ, ಜಿಲ್ಲಾ ಪಂಚಾಯಿತಿ ಸೇರಿದಂತೆ ಇತರೆ ಯೋಜನೆಗಳ ಅನುದಾನದಡಿ ಸಾಕಷ್ಟು ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ. ಈ ಕಾಮಗಾರಿಗಳನ್ನು ಹೊರತುಪಡಿಸಿ ಮುಖ್ಯಮಂತ್ರಿಗಳ ಮೂಲ ಸೌಕರ್ಯ ಅಭಿವೃದ್ಧಿ ಯೋಜನಯಡಿ ಇತರೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಬೇಕು.

ಈ ಕುರಿತು ಆಯಾ ಶಾಸಕರೊಂದಿಗೆ ಚರ್ಚಿಸಬೇಕು. ಒಂದು ವೇಳೆ ಎರಡೆರಡು ಅನುದಾನಗಳಲ್ಲಿ ಒಂದೇ ಕಾಮಗಾರಿಗಳನ್ನು ಕೈಗೆತ್ತಿಕೊಂಡಿರುವುದು ಕಂಡುಬಂದರೆ ಅಂತಹ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಎಚ್ಚರಿಕೆ ನೀಡಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ, ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಗಾಯಿತ್ರಿ, ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ನಾಗರಾಜ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಭಾಗದ ಕಾರ್ಯಪಾಲಕ ಇಂಜಿನಿಯರ್ ಹನುಮಂತಪ್ಪ ಸೇರಿದಂತೆ ಇತರೆ ಅಧಿಕಾರಿಗಳು ಇದ್ದರು.

## ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಸಮುದಾಯ ಆಸ್ಪತ್ರೆ ಸೇರಿದಂತೆ ಪೊಲೀಸ್ ಠಾಣೆಗೆ ಭೇಟಿ

• ಉದಯವಾಹಿನಿ ಕಾರಟಗಿ

ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮೀ ಚೌಧರಿ ಅವರು ಫೆಬ್ರವರಿ 5 ರವರೆಗೆ ರಿಂದ 7 ಕೊಪ್ಪಳ ಜಿಲ್ಲೆಯಲ್ಲಿ ಪ್ರವಾಸ ಕಾರ್ಯಕ್ರಮವನ ಹಮ್ಮಿಕೊಂಡಿದ್ದಾರೆ. ಮಹಿಳಾ ಆಯೋಗದ ಅಧ್ಯಕ್ಷರು ಶ್ರೀಮತಿ ಡಾಕ್ಟರ್ ನಾಗಲಕ್ಷ್ಮಿ ಚೌದರಿ ಫೆ.5 ರಂದು ಬೆಳಿಗ್ಗೆ 6.30 ಗಂಟೆಗೆ ಕೊಪ್ಪಳಕ್ಕೆ ಆಗಮಿಸುವರು. ಬೆಳಿಗ್ಗೆ 10 ಗಂಟೆಗೆ ಜಿಲ್ಲಾಡಳಿತ ಭವನದಲ್ಲಿ ಪಿಯು ಹಾಗೂ ಪದವಿ ಕಾಲೇಜು ವಿದ್ಯಾರ್ಥಿನಿಯರ ಜೊತೆ ಸಂವಾದ ನಡೆಸುವರು. ಬೆಳಿಗ್ಗೆ 11 ಗಂಟೆಗೆ ಕೊಪ್ಪಳದಿಂದ ನಿರ್ಗಮಿಸಿ ಮಧ್ಯಾಹ್ನ 12.45 ಗಂಟೆಗೆ ಕಾರಟಗಿ ತಾಲ್ಲೂಕಿನ ಈಳಿಗನೂರು ಗ್ರಾಮಕ್ಕೆ ಭೇಟಿ ನೀಡುವರು. ಮಧ್ಯಾಹ್ನ 3 ಗಂಟೆಗೆ ಈಳಿಗನೂರಿನಿಂದ ಹೊರಟು ಮಧ್ಯಾಹ್ನ 3.30 ಗಂಟೆಗೆ ಕಾರಟಗಿ ತಾಲ್ಲೂಕು ಆಸ್ಪತ್ರೆಗೆ ಭೇಟಿ ನೀಡುವರು.



ಸಂಜೆ 4.30 ಗಂಟೆಗೆ ಕಾರಟಗಿ ಪೊಲೀಸ್ ಠಾಣೆಗೆ ಭೇಟಿ ನೀಡುವರು. ಸಂಜೆ 5.30 ಗಂಟೆಗೆ ಕಾರಟಗಿಯಿಂದ ಹೊರಡುವರು.

## ಚಿತ್ರದುರ್ಗ ವೈದ್ಯಕೀಯ ಕಾಲೇಜು ನೇಮಕಾತಿ: ಮಧ್ಯವರ್ತಿಗಳ ಬಗ್ಗೆ ಎಚ್ಚರ

• ಉದಯವಾಹಿನಿ ಚಿತ್ರದುರ್ಗ

ಚಿತ್ರದುರ್ಗ ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯಲ್ಲಿ ಶುಶ್ರೂಷಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು 18 ಡಿಸೆಂಬರ್ 2025 ರಂದು ಅಧಿಸೂಚನೆ ಹೊರಡಿಸಲಾಗಿದೆ. ಆದರೆ, ಕೆಲವು ಮಧ್ಯವರ್ತಿಗಳು ಇದರ ದುರುಪಯೋಗ ಪಡೆದುಕೊಂಡು ಶುಶ್ರೂಷಾಧಿಕಾರಿಗಳ ಉದ್ಯೋಗ ಕೊಡಿಸುವುದಾಗಿ ಸಾರ್ವಜನಿಕರಿಗೆ ಆಮಿಷವೊಡ್ಡಿ ಹಣದ ಬೇಡಿಕೆಯಿಡುತ್ತಿರುವುದು ಸಂಸ್ಥೆಯ ಅಧಿಕಾರಿಗಳ ಗಮನಕ್ಕೆ ಬಂದಿದೆ. ಸಂಸ್ಥೆಯಲ್ಲಿ ಪಾರದರ್ಶಕ , ನಿಯಮಾನುಸಾರವೇ ಗುತ್ತಿಗೆ ಆಧಾರದಲ್ಲಿ ನೇಮಕಾತಿ ಮಾಡಿಕೊಳ್ಳಲಾಗುವುದು. ಉದ್ಯೋಗ ಕೊಡಿಸುವುದಾಗಿ ನಂಬಿಸುವ ಮಧ್ಯವರ್ತಿಗಳಿಗೆ ಸಾರ್ವಜನಿಕರು ಯಾವುದೇ ಕಾರಣಕ್ಕೂ ಹಣ ನೀಡಿ ಮೋಸ ಹೋಗಬಾರದು. ಕೆಲಸ ಕೊಡಿಸುವ ಆಮಿಷವೊಡ್ಡಿ ಯಾರಾದರೂ ಹಣ ಕೇಳಿದರೆ, ಅವರ ಪೂರ್ಣ ವಿಳಾಸ ಮತ್ತು ಮೊಬೈಲ್ ಸಂಖ್ಯೆಯೊಂದಿಗೆ ತಕ್ಷಣವೇ ಸಂಸ್ಥೆಯ ಗಮನಕ್ಕೆ ತರುವಂತೆ ಚಿತ್ರದುರ್ಗ ವೈದ್ಯಕೀಯ ಕಾಲೇಜಿನ ನಿರ್ದೇಶಕ ಡಾ.ಬಿ.ವೈ.ಯುವರಾಜರಾಜ್ ತಿಳಿಸಿದ್ದಾರೆ.

## ಹೆಸರು ಖರೀದಿಯಲ್ಲಿ ಅನ್ಯಾಯ: ಎಚ್.ಡಿ ಕುಮಾರಸ್ವಾಮಿಗೆ ಮನವಿ

• ಉದಯವಾಹಿನಿ ಸೇಡಂ

ದೆಹಲಿಯಲ್ಲಿ ಕೇಂದ್ರ ಉಕ್ಕು ಹಾಗೂ ಭಾರಿ ಕೈಗಾರಿಕಾ ಮಂತ್ರಿಗಳು ಹಾಗೂ ಕರ್ನಾಟಕದ ಮಾಜಿ ಮುಖ್ಯಮಂತ್ರಿಗಳಾದ ಎಚ್ ಡಿ ಕುಮಾರಸ್ವಾಮಿ ಅವರಿಗೆ ಸೇಡಂ ತಾಲ್ಲೂಕಿನ ಕರ್ನಾಟಕ ರಾಜ್ಯ ರೈತ ಸಂಘದ ತಾಲ್ಲೂಕು ಅಧ್ಯಕ್ಷರಾದ ಶಾಂತಕುಮಾರ ಚನ್ನಕ್ಕಿ ಸೇಡಂ ಅವರು ಸೇಡಂನಲ್ಲಿ ರೈತರ ಹೆಸರು ಖರೀದಿಯಲ್ಲಿ ಆದಂತಹ ಅನ್ಯಾಯ ಹಾಗೂ ತೊಗರಿಗೆ ಬೆಂಬಲ ಬೆಲೆಯನ್ನು 11.500 ರೂಪಾಯಿ ಹೆಚ್ಚಿಸುವಂತೆ ಕೇಂದ್ರ ಕೃಷಿ ಸಚಿವರ ಮೇಲೆ ಒತ್ತಡ ಹೇರುವಂತೆ ಮನವಿ ಪತ್ರವನ್ನು ಸಲ್ಲಿಸಿದರು. ಇದೇ ಸಂದರ್ಭದಲ್ಲಿ ಬಿಜೆಪಿ ಮುಖಂಡರಾದ ಶಿವಕುಮಾರ್ ಪಾಟೀಲ್ ತೇಲ್ಕೂರ್ ಹಾಗೂ ಜಿಲ್ಲಾ ಜೆಡಿಎಸ್ ಅಧ್ಯಕ್ಷರಾದ ಬಾಲರಾಜ್ ಗುತ್ತೇದಾರ್ ಇದ್ದರು.

## ದಾವಣಗೆರೆ ಪೋಲೀಸ್ ಸಿಬ್ಬಂದಿಗಳ ಮೇಲೆ ಹಲ್ಲೆಗೆ ಖಂಡನೆ : ಕಠಿಣ ಕ್ರಮಕ್ಕೆ ಆಗ್ರಹ

• ಉದಯವಾಹಿನಿ ಬಳ್ಳಾರಿ

ದಾವಣಗೆರೆ ನಗರದಲ್ಲಿ ಕರ್ತವ್ಯ ನಿರತ ಸಿ.ಪಿ.ಐ ಶ್ರೀಮತಿ ಗಾಯತ್ರಿ ಹಾಗೂ ಪೋಲೀಸ್ ಸಿಬ್ಬಂದಿಗಳ ಮೇಲೆ ದುಷ್ಕರ್ಮಿಗಳು ಹಲ್ಲೆನಡೆಸಿದ್ದು, ಅತ್ಯಂತ ಖಂಡನೀಯ, ಅದರಲ್ಲೂ ಮಹಿಳಾ ಅಧಿಕಾರಿ, ಅವರ ಮೇಲೆ ಹಲ್ಲೆನಡೆಸಿದ್ದು, ಇಲ್ಲಿವರೆಗೂ ಆರೋಪಿತರನ್ನು ಬಂಧಿಸದಿರುವುದು ನಾನಾ ಅನುಮಾನ ಹಾಗೂ ಆಕ್ರೋಶಕ್ಕೆ ಕಾರಣವಾಗಿದೆ. ಕೂಡಲೇ ಆರೋಪಿಗಳನ್ನು ಬಂಧಿಸುವಂತೆ ಸಾಮಾಜಿಕ ಹೋರಾಟಗಾರ ಸಿದ್ದೇಶ್ ಊಳೂರು ಆಗ್ರಹಿಸಿದ್ದಾರೆ. ಕುರಿತು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯದ ಗೃಹಸಚಿವರಿಗೆ ಮನವಿ ಸಲ್ಲಿಸಿದ್ದು ತಪ್ಪಿತಸ್ಥರು ಯಾರೇ ಇರಲಿ ಮುಲಾಜಿಲ್ಲದೇ ಕಠಿಣ ಕ್ರಮಕ್ಕೆ ಮುಂದಾಗಬೇಕು ಎಂದಿದ್ದಾರೆ. ಮನವಿ ಸಲ್ಲಿಸಿದ ಸಂದರ್ಭದಲ್ಲಿ ಆನಂದ, ತಿರಮಾಲ ಹಾವಿನಳ್, ಲಕ್ಷ್ಮಣ ಮತ್ತಿತರರು ಇದ್ದರು


ಉದಯವಾಹಿನಿ ಚಿತ್ರ

## ಫೆ.19ರಂದು ಶಿವಾಜಿ, ಫೆ.20 ರಂದು ಕವಿ ಸರ್ವಜ್ಞ ಜಯಂತಿ

• ಉದಯವಾಹಿನಿ ಚಿತ್ರದುರ್ಗ

ಜಿಲ್ಲಾ ಕೇಂದ್ರದಲ್ಲಿ ಸರ್ಕಾರದ ವತಿಯಿಂದ ಇದೇ ಫೆ.19 ರಂದು ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ, ಫೆ.20 ರಂದು ಸಂತ ಕವಿ ಸರ್ವಜ್ಞ ಜಯಂತಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ.ಗುರುನಾಥ ಹೇಳಿದರು. ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಹಾಗೂ ಸಂತ ಕವಿ ಸರ್ವಜ್ಞ ಜಯಂತಿಯನ್ನು ಜಿಲ್ಲಾ ಕೇಂದ್ರದಲ್ಲಿ ಆಚರಿಸುವ ಸಂಬಂಧ ನಗರದ ಉಪವಿಭಾಗಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಛತ್ರಪತಿ ಶಿವಾಜಿ ಮಹಾರಾಜರ ಜಯಂತಿ ಫೆ.19ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಹಾಗೂ ಸಂತ ಕವಿ ಸರ್ವಜ್ಞ ಜಯಂತಿ ಫೆ.20ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಸಮಾಜದ ಮುಖಂಡರು ಸಲಹೆ ನೀಡಿದರು. ಇದಕ್ಕೆ ಸಮ್ಮತಿ ವ್ಯಕ್ತಪಡಿಸಿದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು, ಸರ್ಕಾರದ ಶಿಷ್ಟಾಚಾರ ಪಾಲಿಸಿಕೊಂಡು ಮಹನೀಯರ ಕುರಿತು ಗೀತಗಾಯನ ಹಾಗೂ ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ಉಪನ್ಯಾಸ ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

ಸಭೆಯಲ್ಲಿ ಜಿಲ್ಲಾ ಮರಾಠ ವಿದ್ಯಾ ವರ್ಧಕ ಸಂಘದ ಅಧ್ಯಕ್ಷ ಸುರೇಶ್ ಜಾದವ್, ಕಾರ್ಯದರ್ಶಿ ಗೋಪಾಲರಾವ್, ಕುಂಬಾರ ಮುತ್ತಯ್ಯ ಮಹಾ ಸಂಸ್ಥಾನ, ಜಿಲ್ಲಾ ಕುಂಬಾರ ಸಂಘದ ಅಧ್ಯಕ್ಷ ಪಿ.ತಿಪ್ಪೇಸ್ವಾಮಿ, ಕರ್ನಾಟಕ ಕುಂಬಾರ ಮಹಿಳಾ ಮಹಾಸಭಾ, ಜಿಲ್ಲಾ ಕುಂಬಾರ ಸಂಘದ ಮಹಿಳಾ ಅಧ್ಯಕ್ಷೆ ಎಸ್.ಬೈಲಮ್ಮ, ಕಾರ್ಯದರ್ಶಿ ಮೃತ್ಯುಂಜಯ, ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಗಣ್ಯರು ಇದ್ದರು.

## ರಾತ್ರಿ ವೇಳೆಯಲ್ಲೂ ಔಷಧ ವಿತರಣಾ ಕೇಂದ್ರ ತೆರೆದಿಡುವಂತೆ ಒತ್ತಾಯ

• ಉದಯವಾಹಿನಿ ಚಿತ್ತಾಪುರ

ಪಟ್ಟಣದಲ್ಲಿರುವ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಯಲ್ಲಿ ಕರ್ತವ್ಯದ ಮೇಲಿರುವ ವೈದ್ಯರು, ಸಿಬ್ಬಂದಿ ವಿವರ ನಾಮಫಲಕದಲ್ಲಿ ನಮೂದಿಸಬೇಕು ಹಾಗೂ ರಾತ್ರಿಯಲ್ಲಿಯೂ ಔಷಧ ವಿತರಣಾ ಕೇಂದ್ರವು ತೆರೆದಿಡುವ ಮೂಲಕ ಜನರಿಗೆ ಅನುಕೂಲ ಮಾಡಿಕೊಡಬೇಕು ಎಂದು ಒತ್ತಾಯಿಸಿ ತಾಲ್ಲೂಕು ದೈಹಿಕ ಮತ್ತು ಮಾನಸಿಕ ಅಂಗವಿಕಲರ ವಿವಿದ್ದೋದ್ದೇಶ ಕ್ಷೇಮಾಭಿವೃದ್ಧಿ ಸಂಘದ ತಾಲ್ಲೂಕು ಅಧ್ಯಕ್ಷ ಮಹ್ಮದ್ ಇಬ್ರಾಹಿಂ ಅವರ ನೇತೃತ್ವದಲ್ಲಿ ಮುಖಂಡರು ಆಡಳಿತ ವೈದ್ಯಾಧಿಕಾರಿ ಡಾ.ಮಹ್ಮದ್ ಅಬ್ದುಲ್ ರಹೀಂ ಅವರಿಗೆ ಮನವಿ ಪತ್ರ ಸಲ್ಲಿಸಿದರು.


ಉದಯವಾಹಿನಿ ಚಿತ್ರ

**ರಹೀಂ ಅವರಿಗೆ ಮನವಿ**

ನಂತರ ಮಾತನಾಡಿದ ಅವರು, ಚಿತ್ತಾಪುರ ಪಟ್ಟಣದ ಸರ್ಕಾರಿ ಸಾರ್ವಜನಿಕರ ಆಸ್ಪತ್ರೆಯಲ್ಲಿ ದಿನಾಲು ಹಗಲು ರಾತ್ರಿ ಪಾಳಿಯ ಪ್ರಕಾರ ಕರ್ತವ್ಯ ನಿರ್ವಹಿಸುವ ವೈದ್ಯರು ಮತ್ತು ವೈದ್ಯಕೀಯ ಸಿಬ್ಬಂದಿಯ ವಿವರ ನಾಮಫಲಕದಲ್ಲಿ ನಮೂದು ಮಾಡುತ್ತಿಲ್ಲ. ಕರ್ತವ್ಯ ನಿರತರ ವಿವರ ನಮೂದಿಸುವುದರಿಂದ ಆಸ್ಪತ್ರೆಗೆ ಬರುವ ರೋಗಿಗಳು ಮತ್ತು ರೋಗಳ ಸಂಬಂಧಿಕರು ನೇರವಾಗಿ ಅವರನ್ನು ಸಂಪರ್ಕಿಸಲು ಸಹಾಯಕವಾಗುತ್ತದೆ. ಅಲ್ಲದೆ ರಾತ್ರಿ ಸಮಯದಲ್ಲಿ ಆಸ್ಪತ್ರೆಗೆ ಬರುವ ರೋಗಿಗಳಿಗೆ ಔಷಧ ಸೌಲಭ್ಯ ಸಮರ್ಪಕವಾಗಿ ಸಿಗುತ್ತಿಲ್ಲ. ಅಘಘಾತದಲ್ಲಿ ಗಂಭೀರವಾಗಿ ಗಾಯಗೊಂಡವರು ಬಂದಾಗ ಔಷಧದ ಸಮಸ್ಯೆಯಾಗುತ್ತಿದೆ. ಹೀಗಾಗಿ ರಾತ್ರಿ ಸಮಯದಲ್ಲೂ ಔಷಧ ವಿತರಣಾ ಕೇಂದ್ರ ತೆರೆದಿಡಲು ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದರು. ಬಾಣಂತಿಯರು ಕುಟುಂಬ ಕಲ್ಯಾಣ ಯೋಜನೆಯಡಿ ಶಸ್ತ್ರ ಚಿಕಿತ್ಸೆಗೆಂದು ಬಂದರೆ ಸರಿಯಾದ ಸ್ಪಂದನೆ ಸಿಗುತ್ತಿಲ್ಲ. ಶಸ್ತ್ರ ಚಿಕಿತ್ಸೆ ಮಾಡುವ ನಿಖರ ದಿನಾಂಕ ನಿಗಧಿ ಮಾಡಿ ಆಸ್ಪತ್ರೆಗೆ ಬರುವವರಿಗೆ ಮಾಹಿತಿ ಸಿಗುವಂತೆ ನಾಮಫಲಕದಲ್ಲಿ ವಿವರ ಹಾಕುತ್ತಿಲ್ಲ. ಸಮಗ್ರ ವಿವರವನ್ನು ನಾಮಫಲಕದದಲ್ಲಿ ಹಾಕುವ ವ್ಯವಸ್ಥೆ ಮಾಡಬೇಕು. ಅಲ್ಟಾಸೌಂಡ್ ಸ್ಕ್ಯಾನಿಂಗ್ ಸೇವೆ ಒದಗಿಸಬೇಕು. ಇನ್ನು ಹೆಚ್ಚಿನ ಶಸ್ತ್ರ ಚಿಕಿತ್ಸೆಯ ವ್ಯವಸ್ಥೆ ಮಾಡಿ ತಾಲ್ಲೂಕಿನ ಜನತೆಗೆ ಸೇವೆ ಸಿಗುವಂತೆ ಮಾಡಬೇಕಿದೆ ಎಂದು ಹೇಳಿದರು. ಮನವಿಗೆ ಸ್ಪಂದಿಸಿ ಮಾತನಾಡಿದ ಡಾ.ಮಹ್ಮದ್ ಅಬ್ದುಲ್ ರಹೀಂ, ಈಗಾಗಲೇ ಆಸ್ಪತ್ರೆಯಲ್ಲಿ ಕರ್ತವ್ಯನಿರತ ವೈದ್ಯರ ಹೆಸರುಗಳ ನಾಮಫಲಕ ಅಳವಡಿಸಲಾಗಿದೆ ಇತರೆ ಬೇಡಿಕೆಗಳನ್ನು ಈಡೇರಿಸಲಾಗುವುದು ಎಂದು ಭರವಸೆ ನೀಡಿದರು.

### ಒಂದು ವೇಳೆ ಚಲಾಯಿಸುವಾಗ ಸಿಕ್ಕಿ ಬಿದ್ದರೆ 25 ಸಾವಿರ ರೂ. ದಂಡ ಬನಸೋಡೆ

# ಅಪ್ರಾಪ್ತರಿಗೆ ವಾಹನ ನೀಡಿದರೇ ದಂಡ

• ಉದಯವಾಹಿನಿ ಬೀದರ

18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳು ಬೈಕ್, ವಾಹನ ಚಲಾಯಿಸಬಾರದು, ಒಂದು ವೇಳೆ ಚಲಾಯಿಸುವಾಗ ಸಿಕ್ಕಿ ಬಿದ್ದರೆ 25 ಸಾವಿರ ರೂ. ದಂಡ ಭರಿಸಬೇಕು, ಕಾನೂನು ಕ್ರಮ ಎದುರಿಸಬೇಕಾಗುತ್ತದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು, ಹಾಗೂ ಸದಸ್ಯ ಕಾರ್ಯದರ್ಶಿಗಳು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಬೀದರ ಗೌರವಾನ್ವಿತರು ಶ್ರೀ ಪ್ರಕಾಶ ಅರ್ಜುನ ಬನಸೋಡೆ ಅವರು ತಿಳಿ ಹೇಳಿದರು.

ಬೀದರನ ನೌಬಾದನ ಸರಕಾರಿ ನೌಕರರ ಭವನದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ. ಜಿಲ್ಲಾಡಳಿತ. ಜಿಲ್ಲಾ ಪೊಲಿಸ ಇಲಾಕೆ. ಸಾರಿಗೆ ಇಲಾಖೆ. ಜಿಲ್ಲಾ ರಸ್ತೆ ಸುರಕ್ಷಾ ಸಮಿತಿ ಬೀದರ ಇವರ ಸಹಯೋಗದಲ್ಲಿ ಆಯೋಜಿಸಲಾದ 37ನೇ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ ಕಾರ್ಯಕ್ರಮವನ್ನು ದೀಪ ಬೆಳಗಿಸುವ ಮೂಲಕ ಉದ್ಘಾಟನೆ ಮಾಡಿ ಅವರು ಮಾತುಗಳನ್ನು ಆಡಿದರು. ವಾಹನ ಮನೆಯಿಂದ ತೆಗೆದುಕೊಂಡು ಹೊರಗೆ ಬರುವ ಎಲ್ಲರು ಕಡ್ಡಾಯವಾಗಿ ರಸ್ತೆ ಸುರಕ್ಷತಾ ನಿಯಮಗಳ ಪಾಲನೆ ಮಾಡಬೇಕು. ಇಲ್ಲವಾದರೆ ರಸ್ತೆ ಅಪಘಾತಗಳು ಆಗುತ್ತವೆ. ಈ ಅಪಘಾತಗಳನ್ನು ತಡೆಯುವ ಸಲುವಾಗಿ ನಿಯಮಗಳನ್ನು ಎಲ್ಲರೂ ಪಾಲನೆ ಮಾಡಬೇಕು. ವಿಶೇಷವಾಗಿ ಯುವಕರು ರಸ್ತೆ ಸುರಕ್ಷತಾ ನಿಯಮಗಳನ್ನು ಪಾಲನೆ ಮಾಡಬೇಕು ಎಂದು ನ್ಯಾಯಾಧೀಶರಾದ ಪ್ರಕಾಶ ಅರ್ಜುನ ಬನಸೋಡೆ ಅವರು ಸಲಹೆ ನೀಡಿದರು.

ಪ್ರಾದೇಶಿಕ ಸಾರಿಗೆ ಅಧಿಕಾರಿಗಳಾದ ಜಿ.ಕೆ. ಬಿರಾದಾರ ಅವರು ಮಾತನಾಡಿ. ದೇಶದಲ್ಲಿ ಶೇ. 90ರಷ್ಟು ಜನ ವಾಹನಗಳನ್ನು ಬಳಕೆ ಮಾಡುತ್ತಿದ್ದಾರೆ. ಆದರೆ. ಸಂಚಾರಿ ನಿಯಮಗಳನ್ನು ಎಲ್ಲರೂ ಪಾಲನ ಮಾಡುವುದಿಲ್ಲ. ಕಡ್ಡಾಯವಾಗಿ ನಿಯಮ ಪಾಲನೆ ಮಾಡಿದರೆ, ರಸ್ತೆ ಅಪಘಾತಗಳನ್ನು ತಡೆಯಬಹುದು ಎಂದು ಹೇಳಿದರು. ದ್ವಿಚಕ್ರವಾಹನ ಚಾಲಕರು ಹೆಲ್ಮೆಟ್ ಧರಿಸಬೇಕು. ಕಾರು, ವಾಹನ ಚಾಲಕರು ಸೀಟ ಬೆಲ್ಟ್ ಧರಿಸಬೇಕು. ಬೈಕ್ ಓಡಿಸುವಾಗ ಮೋಬೈಲ್‌ನಲ್ಲಿ ಮಾತನಾಡಬಾರದು. ಹೆಡ ಫೋನ್ ಉಪಯೋಗಿಸಬಾರದು. ಮದ್ಯಪಾನ ಮಾಡಿ ವಾಹನ ಚಲಾಯಿಸಬಾರದು. ಇವುಗಳನ್ನು ಬಿಟ್ಟು ರಸ್ತೆ ಸುರಕ್ಷತಾ ನಿಯಮ ಪಾಲನೆ ಮಾಡುವುದುರಿಂದ ಬಹುತೇಕ ರಸ್ತೆ ಅಪಘಾತಗಳನ್ನು ತಡೆಯಬಹುದು. ಅಮೂಲ್ಯವಾದ ಜೀವಗಳನ್ನು ಉಳಿಸಬಹುದು ಎಂದು ಕಾಲೇಜು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು. ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಾದ ಚಂದ್ರಕಾಂತ ಎಂ. ಶಹಬಾದಕರ ಅವರು ಮಾತನಾಡಿ. ಕಾಲೇಜು ವಿದ್ಯಾರ್ಥಿಗಳು ರಸ್ತೆಯಲ್ಲಿ ನಡೆದುಕೊಂಡು ಬರುವಾಗ ರಸ್ತೆಯುದ್ದಕ್ಕೂ ಬರಬಾರದು. ಒಂದು ಕಡೆಯಿಂದ ನಡೆದುಕೊಂಡು ಹೋಗಬೇಕು. ಬೈಕ್ ನಡೆಸುವಾಗ ಹೆಲ್ಮೆಟ್ ಧರಿಸಿ ಎಂದು ಸಲಹೆ ನೀಡಿದರು.


ಉದಯವಾಹಿನಿ ಚಿತ್ರ

ಭಾಲ್ಕಿಯ ಸಹಾಯಕ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಾದ ಎಂ.ಡಿ. ಜಾಫರ ಸಾದಿಕ ಅವರು ಮಾತುಗಳನ್ನು ಆಡಿ. ಶಾಲಾ ವಾಹನಗಳಲ್ಲಿ ಪ್ಯಾನಿಕ ಅಳವಡಿಸಲಾಗಿದೆ. ಯಾವುದೇ ತುರ್ತು ಸಂದರ್ಭದಲ್ಲಿ ಅದನ್ನು ಎಳೆದರೆ ನಮ್ಮ ಬೆಂಗಳೂರು ಪ್ರಾದೇಶಿಕ ಸಾರಿಗೆ ಕಚೇರಿಗೆ ಸಂದೇಶ ಹೋಗುತ್ತದೆ. ನಿಮ್ಮ ನೆರವಿಗೆ ಬರಲು ಸಹಾಯಕವಾಗುತ್ತದೆ. ವಿದ್ಯಾರ್ಥಿಗಳು ಈ ವಿಷಯವನ್ನು ಗಮನದಲ್ಲಿ ಇಟ್ಟುಕೊಳ್ಳಿ ಎಂದು ಅವರು ತಿಳಿಸಿದರು.

**ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ**

> **ವಾಹನ ಅಪಘಾತವಾದರೆ ಅದರ ಮಾಲೀಕರೆ ದಂಡ ಭರಿಸಬೇಕು**
> ಯಾರಿಗೆ 18 ವರ್ಷ ಆಗಿರುತ್ತದೋ ಅಂತಹವರು ಕಡ್ಡಾಯವಾಗಿ ಡ್ರೈವಿಂಗ್ ಲೈಸೆನ್ಸ್ ಪಡೆದುಕೊಂಡ ಬಳಿಕವೆ ವಾಹನ ಓಡಿಸಬೇಕು. ಜತೆಗೆ ವಾಹನ ಖರೀದಿ ಮಾಡಿದ ಕೂಡಲೇ ಅವುಗಳ ದಾಖಲಾತಿಗಳನ್ನು ಸರಿಯಾಗಿ ಮಾಡಿಸಿಕೊಳ್ಳಬೇಕು. ಕಡ್ಡಾಯವಾಗಿ ವಾಹನ ವಿಮೆ ಮಾಡಿಸಿಕೊಳ್ಳಬೇಕು. ಇದು ಕಡ್ಡಾಯ, ವಿಮೆ ಮಾಡಿಸಿಕೊಳ್ಳದಿದ್ದರೆ ಒಂದು ವೇಳೆ ವಾಹನ ಅಪಘಾತವಾದರೆ ಅದರ ಮಾಲೀಕರೆ ದಂಡ ಭರಿಸಬೇಕಾಗುತ್ತದೆ. ವಿಮೆ ಮಾಡಿಸಿಕೊಂಡರೆ ವಿಮೆಯ ಕಂಪನಿ ದಂಡ ಭರಿಸುತ್ತದೆ. ಇದಕ್ಕಾಗಿ ಎಲ್ಲರೂ ವಾಹನ ವಿಮೆ ಮಾಡಿಸಿಕೊಳ್ಳಬೇಕು ನ್ಯಾಯಾಧೀಶರು ಸೂಚಿಸಿದರು.

## ರಸ್ತೆಗೆ ಕಸ ಹಾಕುತ್ತಿದ್ದ ಆಸ್ಪತ್ರೆಗಳ ಮುಂದೆ ಕಸ ಸುರಿದ ಪಾಲಿಕೆ



ಉದಯವಾಹಿನಿ ಚಿತ್ರ

• ಉದಯವಾಹಿನಿ ಬಳ್ಳಾರಿ

ಕಸವನ್ನು ಎಲ್ಲೆಂದರಲ್ಲಿ ಹಾಕದಂತೆ ಎಷ್ಟೇ ಬಾರಿ ಹೇಳಿದ್ರು ಬುದ್ಧಿ ಕಲಿಯದ ನಗರ ಖಾಸಗಿ ಆಸ್ಪತ್ರೆಗಳಿಗೆ ಸರಿಯಾದ ಬುದ್ದಿ ಕಲಿಸಲು ಆ ಆಸ್ಪತ್ರೆಗಳ ಮುಂದೆ ಪಾಲಿಕೆ ಸಿಬ್ಬಂದಿ ಕಸದ ಗುಡ್ಡೆ ತಂದು ಹಾಕಿದೆ ಅಲ್ಲದೆ ಜೊತೆಗೆ ದಂಡವನ್ನು ವಿಧಿಸಿದೆ. ಈ ಕುರಿತ ಚಿತ್ರಣ ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿದ್ದಕ್ಕೆ ಸಾರ್ವಜನಿಕರು ಮಹಾನಗರ ಪಾಲಿಕೆಯ ಈ ದಿಟ್ಟ ಕ್ರಮಕ್ಕೆ ಭರ್ಜರಿ ಸ್ವಾಗತಿಸಿದ್ದರೆ. ಬೆಚ್ಚಿ ಬಿದ್ದಿದ್ದಾರೆ ಆಸ್ಪತ್ರೆ ಸಿಬ್ಬಂದಿ. ಪಾರ್ವತಿ ನಗರದ ರೂಟ್ಸ್ ರೆಸ್ಟೋರೆಂಟ್ ಬಳಿಯ ಪದ್ಮಾವತಿ ಕಿಡ್ನಿಕೇರ್ ಸೆಂಟರ್ ಮತ್ತು ಬಸವೇಶ್ವರ ನಗರದ ಮುಖ್ಯ ರಸ್ತೆಯ. ಶಾಂತಾ ಸೀತಾರಾಂ ಅವರ ದ್ವಾರಕಾ ಆಸ್ಪತ್ರೆ ಮುಂದೆ ಪಾಲಿಕೆ ಸಿಬ್ಬಂದಿ ಕಸ ಸುರಿದಿದೆ.

ಪದ್ಮಾವತಿ ಕಿಡ್ನಿಕೇರ್ ಆಸ್ಪತ್ರೆಯವರು ಸಾಮಾನ್ಯ ಕಸವನ್ನು ರಸ್ತೆಗೆ ತಂದು ಹಾಕುತ್ತಿದ್ದರು. ದ್ವಾರಕ ಆಸ್ಪತ್ರೆಯವರು ಮೆಡಿಕಲ್ ವೇಸ್ಟನ್ನು ಪಾಲಿಕೆ ಕಸದ ವಾಹನದಲ್ಲಿ ಹಾಕ್ತಿದ್ರು. ಈ ಎರಡು ಅಸ್ಪತ್ರೆಗಳಿಗೆ ಹೀಗೆ ಮಾಡದಂತೆ ಹಲವು ಬಾರಿ ಹೇಳಿತ್ತು, ಜೊತೆಗೆ ಪಾಲಿಕೆಯಿಂದ ಈ ರೀತಿ ಮಾಡದಂತೆ ನೋಟಿಸ್ ಸಹ ನೀಡಿದ್ದರೂ. ಆದರೂ ಅವರು ಎಚ್ಚೆತ್ತುಕೊಳ್ಳದೆ ಹಳೇ ಚಾಳಿ ಮುಂದುವರಿಸಿದ್ದರು. ದಂಡ ಹಾಕಿದ್ರೂ ಸರಿಯಾಗಿ ಕಟ್ಟದೇ ಉಡಾಪೆ ಮಾತನಾಡುತ್ತಿದ್ದರಂತೆ. ಜೊತೆಗೆ ಹಲವರಿಂದ ಕರೆ ಮಾಡಿಸಿ ಧಮಕಿ ಸಹ ಹಾಕಿಸುತ್ತಿದ್ದರಂತೆ. ಹೀಗಾಗಿ ಇವತ್ತು ಬೆಳ್ಳಂಬೆಳಿಗ್ಗೆ ಆಸ್ಪತ್ರೆ ಸಮುಂದೆ ಪಾಲಿಕೆ ಸಿಬ್ಬಂದಿ ಕಸವನ್ನು ಲಾರಿಯಲ್ಲಿ ತಂದು ಆಸ್ಪತ್ರೆ ಮುಂದೆ ಸುರಿದಿದ್ದಾರೆ. ಇದು ಮೊದಲ ಹಂತದ ಪ್ರಯತ್ನ ಹೀಗೆಯೇ ಮುಂದುವರಿದ್ರೇ ಯಾರು ಕಸ ಎಲ್ಲದರಲ್ಲಿ ಹಾಕಿದರೆ ಅವರಿಗೇ ಹೀಗೆ ಮಾಡಲಾಗ್ತದೆ ಎಂದು ಎಚ್ಚರಿಕೆ ನೀಡಲು ಪಾಲಿಕೆ ಈ ರೀತಿ ಮಾಡಿದೆಯಂತೆ.

# ಪ್ರಿಯಾಂಕಾ ಮನವಿ ಪುರಸ್ಕರಿಸಿದ ರಾಜಮೌಳಿ




ವಿಶೇಷ ಮನವಿ ಮಾಡಿದ ಚೋಪ್ರಾ

ಎಸ್‌ಎಸ್ ರಾಜಮೌಳಿ ನಿರ್ದೇಶಿಸುತ್ತಿರುವ 'ವಾರಣಾಸಿ' ಸಿನಿಮಾದ ಬಿಡುಗಡೆಗೆ ಇನ್ನೂ ಒಂದು ವರ್ಷವಿದೆ.

ಆದರೆ ಈಗಲೇ ಸಿನಿಮಾದ ಪ್ರಚಾರವನ್ನು ಚಿತ್ರತಂಡ ಆರಂಭ ಮಾಡಿದೆ. ಇದೀಗ ನಟಿ ಪ್ರಿಯಾಂಕಾ ಚೋಪ್ರಾ, ತಾವು ರಾಜಮೌಳಿ ಬಳಿ ಮಾಡಿಕೊಂಡಿದ್ದ ಮನವಿಯ ಬಗ್ಗೆ ಮಾತನಾಡಿದ್ದಾರೆ. ರಾಜಮೌಳಿ ನಿರ್ದೇಶಿಸುತ್ತಿರುವ 'ವಾರಣಾಸಿ' ಸಿನಿಮಾ ಬಿಡುಗಡೆಗೆ ಇನ್ನೂ ಒಂದು ವರ್ಷ ಇರುವಾಗಲೇ ಸಿನಿಮಾದ ಪ್ರಚಾರ ಆರಂಭವಾದಂತಿದೆ. ಕೆಲ ವಾರಗಳ ಹಿಂದಷ್ಟೆ ಬಲು ಅದ್ಧೂರಿಯಾಗಿ ಸಿನಿಮಾದ ಸಣ್ಣ ಟೀಸರ್ ಬಿಡುಗಡೆ ಮಾಡಲಾಯ್ತು. ಸಿನಿಮಾದ ಹೆಸರು ಹಾಗೂ ಮಹೇಶ್ ಬಾಬು ಅವರ ಒಂದು ಲುಕ್ ಹೊರತಾಗಿ ಹೊಸತೇನನ್ನೂ ಸಹ ಟೀಸರ್‌ನಲ್ಲಿ ರಿವೀಲ್ ಮಾಡಲಾಗಿರಲಿಲ್ಲ. ಇದೀಗ ಸಿನಿಮಾದ ಮುಖ್ಯ ಪಾತ್ರಗಳಲ್ಲಿ ನಟಿಸಿರುವ ಮಹೇಶ್ ಬಾಬು, ಪ್ರಿಯಾಂಕಾ ಚೋಪ್ರಾ ಮತ್ತು ಪೃಥ್ವಿರಾಜ್ ಸುಕುಮಾರನ್ ಅವರುಗಳು ಸಂದರ್ಶನವೊಂದರಲ್ಲಿ ಮಾತನಾಡಿದ್ದು, ಸಿನಿಮಾದ ಬಗ್ಗೆ ಹಲವು ವಿಷಯಗಳನ್ನು ಹಂಚಿಕೊಂಡಿದ್ದಾರೆ. ಸಂದರ್ಶನದಲ್ಲಿ ಹಲವು ವಿಷಯ ಮಾತನಾಡಿರುವ ನಟಿ ಪ್ರಿಯಾಂಕಾ ಚೋಪ್ರಾ, ತಾವು ರಾಜಮೌಳಿ ಅವರಿಗೆ ಮಾಡಿದ ಮನವಿ ಹಾಗೂ ಅದನ್ನು ಅವರು ಪುರಸ್ಕರಿಸಿದ್ದು, ಬಳಿಕ ತಮ್ಮ ಮನವಿಯಿಂದ ತಮಗೇ ಸಮಸ್ಯೆ ಆಗಿದ್ದರ ಬಗ್ಗೆ ಮಾತನಾಡಿದ್ದಾರೆ. ರಾಜಮೌಳಿ ಅವರು 'ವಾರಣಾಸಿ' ಸಿನಿಮಾಕ್ಕಾಗಿ ಪ್ರಿಯಾಂಕಾ ಅವರನ್ನು ಕೇಳಿದಾಗ ಪ್ರಿಯಾಂಕಾ ಕೂಡಲೇ ಒಪ್ಪಿಕೊಂಡರಂತೆ. ಆದರೆ ರಾಜಮೌಳಿ ಬಳಿ ಒಂದು ವಿಶೇಷ ಮನವಿ ಒಂದನ್ನು ಮಾಡಿದ್ದರಂತೆ.

'ನಾನು ಭಾರತೀಯ ಸಿನಿಮಾದ ಹಾಡುಗಳಲ್ಲಿ ಡ್ಯಾನ್ಸ್ ಮಾಡಿ ಬಹಳ ವರ್ಷಗಳಾಗಿಬಿಟ್ಟಿವೆ. ನನಗಾಗಿ ಒಂದು ಡ್ಯಾನ್ಸ್ ನಂಬರ್ ಅನ್ನು ಸಿನಿಮಾನಲ್ಲಿ ಇಡಲು ಸಾಧ್ಯವಾ' ಎಂದು ಪ್ರಿಯಾಂಕಾ ಚೋಪ್ರಾ ಮನವಿ ಮಾಡಿದ್ದರಂತೆ. ಅದರಂತೆ ರಾಜಮೌಳಿ ಸಹ ಸರಿ ಎಂದು ಒಪ್ಪಿಕೊಂಡಿದ್ದಾರೆ. ಆ ಡ್ಯಾನ್ಸ್ ಹಾಡಿನ ಚಿತ್ರೀಕರಣ ಮಾತ್ರ ಬಹಳ ಶ್ರಮದಾಯಕವಾಗಿತ್ತು. ಬಹಳ ವೇಗ ಮತ್ತು ಕೋಆರ್ಡಿನೇಷನ್ ಇರುವ ಹಾಡು ಅದು' ಎಂದಿದ್ದಾರೆ ಪ್ರಿಯಾಂಕಾ.

# ಮತ್ತೊಂದು ರಾಮಾಯಣ



ಆರು ತಿಂಗಳು ಟ್ರೇನಿಂಗ್

ರಾಜಮೌಳಿ ಅವರ 'ವಾರಣಾಸಿ' ಸಿನಿಮಾದಲ್ಲಿ ಮಹೇಶ್ ಬಾಬು ರಾಮನ ಪಾತ್ರ ಮಾಡುತ್ತಿರುವುದನ್ನು ಖಚಿತಪಡಿಸಿದ್ದಾರೆ. ಈ ಪಾತ್ರಕ್ಕಾಗಿ 6 ತಿಂಗಳ ಕಠಿಣ ತರಬೇತಿ ಪಡೆದಿದ್ದು, ಕಳರಿಪಯಟ್ಟು ರೀತಿಯ ಭಂಗಿಗಳನ್ನು ಕಲಿತಿದ್ದಾರೆ. ರಣಬೀರ್ ಕಪೂರ್ ಅಭಿನಯದ 'ರಾಮಾಯಣ' ಸಿನಿಮಾ ದೀಪಾವಳಿಗೆ ಬರಲಿದ್ದು, ಯಶ್ ರಾವಣನ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಎರಡು ದೊಡ್ಡ 'ರಾಮಾಯಣ' ಆಧರಿತ ಸಿನಿಮಾಗಳು ಪ್ರೇಕ್ಷಕರಲ್ಲಿ ಭಾರಿ ಕುತೂಹಲ ಮೂಡಿಸಿವೆ. ರಣಬೀರ್ ಕಪೂರ್ ನಟನೆಯ 'ರಾಮಾಯಣ' ಸಿನಿಮಾ ಈ ವರ್ಷ ದೀಪಾವಳಿಗೆ ರಿಲೀಸ್ ಆಗುತ್ತಿದೆ. ಈ ಸಿನಿಮಾದಲ್ಲಿ ಯಶ್ ರಾವಣನ ಪಾತ್ರ ಮಾಡುತ್ತಿದ್ದಾರೆ. ಈಗಾಗಲೇ ರಾಮಾಯಣದ ಮೇಲೆ ಸಾಕಷ್ಟು ಸಿನಿಮಾಗಳು ಬಂದು ಹೋಗಿವೆ. ಈಗ ಈ ಸಾಲಿಗೆ ಮತ್ತೊಂದು ಸಿನಿಮಾ ಸೇರ್ಪಡೆ ಆಗುತ್ತಿದೆ.

'ರಾಮಾಯಣ' ಆಧರಿಸಿ ರಾಜಮೌಳಿ ಸಿನಿಮಾ ಮಾಡುತ್ತಿದ್ದಾರೆ! ಮಹೇಶ್ ಬಾಬು ಇದಕ್ಕೆ ಹೀರೋ! ರಾಜಮೌಳಿ ಅವರು ಮಹೇಶ್ ಬಾಬು ಜೊತೆ 'ವಾರಣಾಸಿ' ಹೆಸರಿನ ಸಿನಿಮಾ ಮಾಡುತ್ತಿದ್ದಾರೆ.ಈ ಬಗ್ಗೆ ಮೊದಲೇ ಘೋಷಣೆ ಆಗಿದೆ. ಆದರೆ, ಚಿತ್ರದ ಕಥೆ ಯಾವ ರೀತಿ ಇರಲಿದೆ ಎಂಬ ಸುಳಿವನ್ನು ನಿರ್ದೇಶಕರು ನೀಡಿರಲಿಲ್ಲ. ಈಗ ಮಹೇಶ್ ಬಾಬು ಅವರು ಈ ಬಗ್ಗೆ ದೊಡ್ಡ ವಿಷಯ ರಿವೀಲ್ ಮಾಡಿದ್ದಾರೆ. 'ನಾನು ರಾಮನ ಪಾತ್ರ ಮಾಡುತ್ತಿದ್ದೇನೆ' ಎಂದು ಮಹೇಶ್ ಬಾಬು ಒಪ್ಪಿಕೊಂಡಿದ್ದಾರೆ.

'ವಾರಣಾಸಿ' ಚಿತ್ರಕ್ಕಾಗಿ ಮಹೇಶ್ ಬಾಬು ಸಾಕಷ್ಟು ಸಿದ್ಧತೆ ಮಾಡಿಕೊಂಡಿದ್ದಾರೆ.ಕೇವಲ ಎರಡೇ ಎರಡು ಶಾಟ್‌ಗೋಸ್ಕರ್ ಮಹೇಶ್ ಬಾಬು ಬರೋಬ್ಬರಿ ಆರು ತಿಂಗಳು ಟ್ರೇನಿಂಗ್ ಪಡೆದಿದ್ದರಂತೆ. 'ನಾನು ರಾಮನ ಪಾತ್ರವನ್ನು ನಿರ್ವಹಿಸುತ್ತಿದ್ದೇನೆ. ಅದಕ್ಕಾಗಿ ಕೆಲವು ಭಂಗಿಗಳನ್ನು ಕಲಿಯಬೇಕಿತ್ತು. ಆಧುನಿಕ ಪಾತ್ರಗಳಂತೆ ನಿಲ್ಲಲು ಆಗೋದಿಲ್ಲ. ಆ ತರಬೇತಿಯ ಭಾಗವಾಗಿ ಸಾಕಷ್ಟು ಸಿದ್ಧತೆಗಳನ್ನು ಮಾಡಿಕೊಂಡೆ' ಎಂದು ಮಹೇಶ್ ಬಾಬು ಹೇಳಿದ್ದಾರೆ.

'ಜರ್ಮನಿಯಲ್ಲಿ ನಾನು ಕುಟುಂಬದ ಜೊತೆ ಪ್ರವಾಸಕ್ಕೆ ತೆರಳಿದ್ದೆ. ಈ ವೇಳೆ ಗೊತ್ತಿಲ್ಲದೆ ಒಂದು ಭಂಗಿಯಲ್ಲಿ ನಿಲ್ಲುತ್ತಿದ್ದೆ. ಒಂದೆರಡು ವಿದೇಶಿಯರು ನನ್ನನ್ನು ನೋಡಿ, ಈ ವ್ಯಕ್ತಿಗೆ ಏನಾಗಿದೆ ಎಂದುಕೊಳ್ಳುತ್ತಿದ್ದರು. ಆದರೆ, ಈ ಸಿದ್ಧತೆ ಶೂಟಿಂಗ್‌ನಲ್ಲಿ ತುಂಬಾನೇ ಸಹಕಾರಿ ಆಯಿತು' ಎಂದು ಅವರು ಹೇಳಿದ್ದಾರೆ.

# ಹೊಸ ಅವತಾರದಲ್ಲಿ ರುಕ್ಮಿಣಿ

ರುಕ್ಮಿಣಿ ವಸಂತ್ ಅವರಿಗೆ ಕೆಲವು ವಿಷಯಗಳು ತುಂಬಾನೇ ಇಷ್ಟ. ಇದರಲ್ಲಿ ಫುಡ್ ಹಾಗೂ ಫೋಟೋಶೂಟ್ ಕೂಡ ಒಂದು. ಅವರು ಈಗ ತಮ್ಮ ಹೊಸ ಫೋಟೋಶೂಟ್ ಮಾಡಿಸಿದ್ದು, ಇದರಲ್ಲಿ ಅವರು ತಮ್ಮಿಷ್ಟದ ತಿಂಡಿಗಳ ಜೊತೆ ಪೋಸ್ ಕೊಟ್ಟಿದ್ದಾರೆ. ಅವರ ಹೊಸ ಡ್ರೆಸ್ ಕೂಡ ಗಮನ ಸೆಳೆಯುವ ರೀತಿಯಲ್ಲಿ ಇದೆ.

ರುಕ್ಮಿಣಿ ವಸಂತ್ ಅವರ ಹೊಸ ಫೋಟೋಶೂಟ್ ವೈರಲ್ ಆಗಿದೆ. ಈ ಫೋಟೋಶೂಟ್ ಅಲ್ಲಿ ಅವರು ಗಮನ ಸೆಳೆದಿದ್ದಾರೆ. ಅವರ ಡ್ರೆಸ್‌ಗೆ ಎಲ್ಲಾ ಕಡೆಗಳಿಂದ ಮೆಚ್ಚುಗೆ ಸಿಕ್ಕಿದೆ. ರುಕ್ಮಿಣಿ ಅವರು ಮತ್ತಷ್ಟು ಸುಂದರವಾಗಿ ಕಾಣಿಸಿದ್ದಾರೆ.

'ಸಪ್ತ ಸಾಗರದಾಚೆ ಎಲ್ಲೋ' ಚಿತ್ರದ ಮೂಲಕ ರುಕ್ಮಿಣಿ ವಸಂತ್ ಸಾಕಷ್ಟು ಜನಪ್ರಿಯತೆ ಪಡೆದರು. ಆ ಬಳಿಕ ಅವರಿಗೆ ಹಲವು ಆಫರ್‌ಗಳು ಬಂದವು. ಈಗ ಅವರು ಪ್ಯಾನ್ ಇಂಡಿಯಾ ಮಟ್ಟದಲ್ಲಿ ಗಮನ ಸೆಳೆಯುತ್ತಿದ್ದಾರೆ.

'ಕಾಂತಾರ:ಚಾಪ್ಟರ್ 1 ಸಿನಿಮಾ ರುಕ್ಮಿಣಿ ಅವರನ್ನು ಮತ್ತೊಂದು ಹಂತಕ್ಕೆ ಕರೆದುಕೊಂಡು ಹೋಯಿತು. ಅವರು ಈ ಚಿತ್ರದಲ್ಲಿ ಉತ್ತಮವಾಗಿ ನಟಿಸಿ ಮೆಚ್ಚುಗೆ ಪಡೆದಿದ್ದಾರೆ.

ರುಕ್ಮಿಣಿ ವಸಂತ್‌ಗೆ ಆಹಾರಗಳ ಬಗ್ಗೆ ವಿಶೇಷ ಪ್ರೀತಿ ಇದೆ. ಏನೇ ಮಿಸ್ ಮಾಡಿದರೂ ಅವರು ತಮ್ಮಿಷ್ಟದ ಫುಡ್‌ಗಳನ್ನು ಮಿಸ್ ಮಾಡೋದಿಲ್ಲ. ರುಕ್ಮಿಣಿ ವಸಂತ್ ಹೊಸ ಫೋಟೋಶೂಟ್ ನಲ್ಲೂ ತಮ್ಮಿಷ್ಟದ ಆಹಾರದ ಜೊತೆ ಪೋಸ್ ನೀಡಿದ್ದಾರೆ. ಕೆಲ ನಟಿಯರು ಸ್ಟ್ರಿಕ್ಟ್ ಆಗಿ ಡಯಟ್ ಫಾಲೋ ಮಾಡುತ್ತಾರೆ. ರುಕ್ಮಿಣಿ ಆ ರೀತಿ ಅಲ್ಲ. ಅವರು ತಮ್ಮಿಷ್ಟದ ಆಹಾರ ಸೇವನೆ ಮಾಡುತ್ತಾರೆ. ಆ ಬಳಿಕ ವರ್ಕೌಟ್ ಮಾಡಿ ದೇಹ ಕರಗಿಸಿಕೊಳ್ಳುತ್ತಾರೆ.



# ಮೊದಲ ಸಿನಿಮಾ ಶೂಟಿಂಗ್ ಮುಗಿಸಿದ ಮೊನಾಲಿಸಾ

'ದಿ ಡೈರಿ ಆಫ್ ಮಣಿಪುರ್' ಸಿನಿಮಾದಲ್ಲಿ ವೈರಲ್ ಹುಡುಗಿ ಮೊನಾಲಿಸಾ ಅವರು ಹೀರೋಯಿನ್ ಆಗಿದ್ದಾರೆ. ಈ ಸಿನಿಮಾಗೆ 4 ಹಂತಗಳಲ್ಲಿ ಚಿತ್ರೀಕರಣ ಪೂರ್ಣಗೊಳಿಸಲಾಗಿದೆ. ಸನೋಜ್ ಮಿಶ್ರಾ ನಿರ್ದೇಶನ ಮಾಡಿದ್ದಾರೆ. ಮೊನಾಲಿಸಾ ಭೋಸ್ಲೆ ಜೊತೆಗೆ ಅಮಿತ್ ರಾವ್ ಅವರು 'ದಿ ಡೈರಿ ಆಫ್ ಮಣಿಪುರ್' ಸಿನಿಮಾದಲ್ಲಿ ನಟಿಸಿದ್ದಾರೆ. ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆದವರೆಲ್ಲ ಯಶಸ್ಸು ಕಾಣಲ್ಲ. ಆದರೆ ತಮಗೆ ಸಿಕ್ಕ ಜನಪ್ರಿಯತೆಯನ್ನು ಸರಿಯಾಗಿ ಬಳಸಿಕೊಂಡರೆ ಖಂಡಿತವಾಗಿಯೂ ಯಶಸ್ಸು ಸಿಗುತ್ತದೆ. ಮಹಾಕುಂಭಮೇಳದಲ್ಲಿ ವೈರಲ್ ಆಗಿದ್ದ ಮೊನಾಲಿಸಾ ಭೋಸ್ಲೆ ನಿಮಗೆ ನೆನಪಿರಬಹುದು. ಈಗ ಅವರೇನು ಮಾಡುತ್ತಿದ್ದಾರೆ ಎಂಬ ಪ್ರಶ್ನೆ ಕೂಡ ಹಲವರಿಗೆ ಇರಬಹುದು. ಅದಕ್ಕೆ ಉತ್ತರ ಸಿಕ್ಕಿದೆ. ಮೊನಾಲಿಸಾ ಭೋಸ್ಲೆ ಅವರು ತಮ್ಮ ಮೊದಲ ಹಿಂದಿ ಸಿನಿಮಾದ ಶೂಟಿಂಗ್ ಮುಗಿಸಿದ್ದಾರೆ! ಆ ಬಗ್ಗೆ ಚಿತ್ರತಂಡ ಮಾಹಿತಿ ನೀಡಿದೆ.

ಕಳೆದ ವರ್ಷ ಮಹಾಕುಂಭಮೇಳದಲ್ಲಿ ಮೊನಾಲಿಸಾ ಭೋಸ್ಲೆ ಅವರು ಮಣಿ ಸರಗಳನ್ನು ಮಾರುತ್ತಿದ್ದರು. ಸೋಶಿಯಲ್ ಮೀಡಿಯಾದಲ್ಲಿ ಅವರು ರಾತ್ರೋರಾತ್ರಿ ಜನಪ್ರಿಯತೆ ಪಡೆದುಕೊಂಡರು. ಅದಾದ ಬಳಿಕ ಕೆಲವೇ ದಿನಗಳಲ್ಲಿ ಅವರಿಗೆ ಹಿಂದಿ ಚಿತ್ರರಂಗದಿಂದ ಆಫರ್ ಕೂಡ ಬಂದಿತ್ತು.



# ಧುರಂಧರ್ 2ನಲ್ಲಿ ಸಲ್ಮಾನ್ ಖಾನ್



ವೈರಲ್ ಆಗಿದೆ ಫೋಟೋ

'ಧುರಂಧರ್' ಕಥೆಯಲ್ಲಿ ಪ್ರತಿ ಪಾತ್ರಕ್ಕೂ ಮಹತ್ವ ಇದೆ. ಬಾಲಿವುಡ್‌ನ ಘಟಾನುಘಟಿ ಕಲಾವಿದರು ಈ ಸಿನಿಮಾದಲ್ಲಿ ನಟಿಸಿದ್ದಾರೆ.

ಮಾರ್ಚ್ 19ರಂದು ರಿಲೀಸ್ ಆಗಲಿರುವ 'ಧುರಂಧರ್ 2' ಸಿನಿಮಾದಲ್ಲಿ ಸಲ್ಮಾನ್ ಖಾನ್ ಅತಿಥಿ ಪಾತ್ರ ಮಾಡಿದ್ದಾರೆ ಎಂಬ ಗಾಸಿಪ್ ಹಬ್ಬಿದೆ.

ಇಂಟರ್‌ನೆಟ್‌ನಲ್ಲಿ ಒಂದು ಫೋಟೋ ವೈರಲ್ ಆಗಿದ್ದು, ಅದರ ಬಗ್ಗೆ ಸಲ್ಮಾನ್ ಖಾನ್ ಫ್ಯಾನ್ಸ್ ಮಾತನಾಡುತ್ತಿದ್ದಾರೆ. ಈ ವರ್ಷದ ಬಹುನಿರೀಕ್ಷಿತ ಸಿನಿಮಾಗಳಲ್ಲಿ ಒಂದಾದ 'ಧುರಂಧರ್ 2' ಬಿಡುಗಡೆಗೆ ದಿನಗಣನೆ ಶುರುವಾಗಿದೆ. ಈ ಸಿನಿಮಾದಲ್ಲಿ ರಣವೀರ್ ಸಿಂಗ್, ಸಂಜಯ್ ದತ್, ಸಾರಾ ಅರ್ಜುನ್, ಅಕ್ಷಯ್ ಖನ್ನಾ, ಅರ್ಜುನ್ ರಾಮ್‌ಪಾಲ್ ಮುಂತಾದವರು ನಟಿಸಿದ್ದಾರೆ. ಮಾರ್ಚ್ 19ರಂದು ಈ ಚಿತ್ರ ರಿಲೀಸ್ ಆಗಲಿದೆ. ಸಿನಿಮಾದ ಪಾತ್ರವರ್ಗದ ಬಗ್ಗೆ ಹಲವು ಗಾಸಿಪ್ ಕೇಳಿಬರುತ್ತಿದೆ. ಬಾಲಿವುಡ್ ಸ್ಟಾರ್ ನಟ ಸಲ್ಮಾನ್ ಖಾನ್ ಕೂಡ 'ಧುರಂಧರ್ 2' ಸಿನಿಮಾದಲ್ಲಿ ನಟಿಸಿದ್ದಾರೆ ಎಂಬ ಹೇಳಲಾಗುತ್ತಿದೆ. ಆದರೆ ಈ ಸುದ್ದಿಯನ್ನು ಚಿತ್ರತಂಡ ಖಚಿತಪಡಿಸಿಲ್ಲ. 'ಧುರಂಧರ್ 2' ಸಿನಿಮಾಗೆ ಆದಿತ್ಯ ಧಾರ್ ಅವರು ನಿರ್ದೇಶನ ಮಾಡಿದ್ದಾರೆ. ಅವರು ಈ ಹಿಂದೆ 'ಉರಿ: ದಿ ಸರ್ಜಿಕಲ್ ಸ್ಟ್ರೈಕ್' ಸಿನಿಮಾಗೆ ಆಯಕ್ಷನ್-ಕಟ್ ಹೇಳಿದ್ದರು. 'ಉರಿ' ಸಿನಿಮಾದಲ್ಲಿ ನಟಿಸಿದ್ದ ಯಾಮಿ ಗೌತಮ್ ಮತ್ತು ವಿಕ್ಕಿ ಕೌಶಲ್ ಅವರು 'ಧುರಂಧರ್ 2' ಚಿತ್ರದಲ್ಲಿ ಇರಲಿದ್ದಾರೆ ಎಂಬ ಗಾಸಿಪ್ ಈಗಾಗಲೇ ಹಬ್ಬಿದೆ. ಅದರ ಜೊತೆಗೆ ಸಲ್ಮಾನ್ ಖಾನ್ ಹೆಸರು ಕೂಡ ಕೇಳಿಬರುತ್ತಿದೆ. ಕಳೆದ ವರ್ಷ ಬಿಡುಗಡೆ ಆಗಿ ಬ್ಲಾಕ್ ಬಸ್ಟರ್ ಹಿಟ್ ಆದ 'ಧುರಂಧರ್' ಸಿನಿಮಾದಲ್ಲಿ ಬಡೇ ಸಾಬ್ ಎಂಬ ಪಾತ್ರದ ಬಗ್ಗೆ ಉಲ್ಲೇಖ ಮಾಡಲಾಗಿದೆ. ಆ ಪಾತ್ರವು 'ಧುರಂಧರ್ 2' ಸಿನಿಮಾದಲ್ಲಿ ಕಾಣಿಸಿಕೊಳ್ಳಲಿದೆ. ಅಭಿಮಾನಿಗಳಿಗೆ ಬಡೇ ಸಾಬ್ ಬಗ್ಗೆ ಭಾರಿ ಕೌತುಕ ಇದೆ. ಸಲ್ಮಾನ್ ಖಾನ್ ಅವರು ಬಡೇ ಸಾಬ್ ಪಾತ್ರದಲ್ಲಿ ನಟಿಸಲಿದ್ದಾರೆ ಎಂಬುದು ಗಾಸಿಪ್ ಮಂದಿಯ ವಾದ.

# ಕ್ವಾರ್ಟರ್ ಫೈನಲ್ ಪಂದ್ಯಕ್ಕೆ ಕರ್ನಾಟಕ ತಂಡ ಪ್ರಕಟ

ರಣಜಿ ಟೂರ್ನಿಯ ಕ್ವಾರ್ಟರ್ ಫೈನಲ್ ಪಂದ್ಯಕ್ಕಾಗಿ ಕರ್ನಾಟಕ ಬಲಿಷ್ಠ ತಂಡವನ್ನು ಪ್ರಕಟಿಸಿದೆ. ಈ ಪಂದ್ಯದಲ್ಲಿ ಕನ್ನಡಿಗರು ಎದುರಿಸಲಿರುವುದು ಮುಂಬೈ ಪಡೆಯನ್ನು. ಮುಂಬೈ ತಂಡದಲ್ಲಿ ಯಶಸ್ವಿ ಜೈಸ್ವಾಲ್, ಸರ್ಫರಾಝ್ ಖಾನ್‌ರಂತಹ ಅತ್ಯುತ್ತಮ ಬ್ಯಾಟರ್‌ಗಳಿದ್ದಾರೆ. ಹೀಗಾಗಿ ಕ್ವಾರ್ಟರ್ ಫೈನಲ್ ಮ್ಯಾಚ್‌ನಲ್ಲಿ ಜಿದ್ದಾಜಿದ್ದಿನ ಪೈಪೋಟಿ ನಿರೀಕ್ಷಿಸಬಹುದು. ಪ್ರಸ್ತುತ ನಡೆಯುತ್ತಿರುವ ರಣಜಿ ಟೂರ್ನಿಯ ಕ್ವಾರ್ಟರ್ ಫೈನಲ್ ಪಂದ್ಯಕ್ಕಾಗಿ ಕರ್ನಾಟಕ ತಂಡವನ್ನು ಪ್ರಕಟಿಸಲಾಗಿದೆ. 15 ಸದಸ್ಯರುಗಳ ಈ ತಂಡವನ್ನು ದೇವದತ್ ಪಡಿಕ್ಕಲ್ ಮುನ್ನಡೆಸಲಿದ್ದಾರೆ. ಇನ್ನು ಈ ತಂಡದಲ್ಲಿ ಟೀಮ್ ಇಂಡಿಯಾ ಆಟಗಾರರಾದ ಕೆಎಲ್ ರಾಹುಲ್ ಹಾಗೂ ಪ್ರಸಿದ್ಧ್ ಕೃಷ್ಣ ಕಾಣಿಸಿಕೊಂಡಿದ್ದಾರೆ. ಹಾಗೆಯೇ ಕಳೆದ ಪಂದ್ಯದ ವೇಳೆ ಗಾಯಗೊಂಡು ಹೊರಗುಳಿದಿದ್ದ ಅನುಭವಿ ದಾಂಡಿಗ ಕರುಣ್ ನಾಯರ್ ಈ ಬಾರಿ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಇದರೊಂದಿಗೆ ಮಯಾಂಕ್ ಅಗರ್ವಾಲ್ ಕೂಡ ತಂಡದಲ್ಲಿದ್ದಾರೆ. ಆದರೆ ಮಂಡಿರಜ್ಜು ಗಾಯದಿಂದ ಬಳಲುತ್ತಿರುವ ವೇಗಿ ವೈಶಾಕ್ ವಿಜಯಕುಮಾರ್ ಈ ಪಂದ್ಯಕ್ಕೂ ಅಲಭ್ಯರಾಗಿದ್ದಾರೆ. ಇನ್ನು ಕ್ವಾರ್ಟರ್ ಫೈನಲ್ ಪಂದ್ಯದಲ್ಲೂ ಕೆಎಲ್ ರಾಹುಲ್ ಹಾಗೂ ಮಯಾಂಕ್ ಅಗರ್ವಾಲ್ ಇನಿಂಗ್ಸ್ ಆರಂಭಿಸಲಿದ್ದು, ಮೂರನೇ ಕ್ರಮಾಂಕದಲ್ಲಿ ಕರುಣ್ ನಾಯರ್ ಕಣಕ್ಕಿಳಿಯಲಿದ್ದಾರೆ. ಹಾಗೆಯೇ ನಾಲ್ಕನೇ ಕ್ರಮಾಂಕದಲ್ಲಿ ದೇವದತ್ ಪಡಿಕ್ಕಲ್ ಬ್ಯಾಟ್ ಬೀಸಲಿದ್ದಾರೆ. ಐದನೇ ಕ್ರಮಾಂಕದಲ್ಲಿ ಸ್ಮರಣ್ ರವಿಚಂದ್ರನ್ ಕಣಕ್ಕಿಳಿಯಲಿದ್ದು, ಆರನೇ ಕ್ರಮಾಂಕದಲ್ಲಿ ಶ್ರೇಯಸ್ ಗೋಪಾಲ್ ಕಾಣಿಸಿಕೊಳ್ಳಲಿದ್ದಾರೆ. ವಿಕೆಟ್ ಕೀಪರ್ ಬ್ಯಾಟರ್ ಆಗಿ ಕೃತಿಕ್ ಕೃಷ್ಣ ಕಣಕ್ಕಿಳಿಯುವುದನ್ನು ಎದುರು ನೋಡಬಹುದು. ಇನ್ನು ಬೌಲರ್‌ಗಳಾಗಿ ಪ್ರಸಿದ್ಧ್ ಕೃಷ್ಣ, ಮೊಹ್ಸಿನ್ ಖಾನ್, ಶಿಖರ್ ಶೆಟ್ಟಿ ಹಾಗೂ ವಿದ್ಯಾಧರ್ ಪಾಟೀಲ್ ಕಣಕ್ಕಿಳಿಯುವ ಸಾಧ್ಯತೆ ಹೆಚ್ಚಿದೆ.

**ಕರ್ನಾಟಕ ತಂಡ:** ದೇವದತ್ ಪಡಿಕ್ಕಲ್ (ನಾಯಕ), ಮಯಾಂಕ್ ಅಗರ್ವಾಲ್, ಕೆಎಲ್ ರಾಹುಲ್, ಕರುಣ್ ನಾಯರ್, ಕೆವಿ ಅನೀಶ್, ಸ್ಮರಣ್ ರವಿಚಂದ್ರನ್, ಶ್ರೇಯಸ್ ಗೋಪಾಲ್, ಕೃತಿಕ್ ಕೃಷ್ಣ, ಎಂ. ವೆಂಕಟೇಶ್, ವಿದ್ಯಾಧರ್ ಪಾಟೀಲ್, ವಿದ್ವತ್ ಕಾವೇರಪ್ಪ, ಪ್ರಸಿದ್ಧ್ ಕೃಷ್ಣ, ಮೊಹ್ಸಿನ್ ಖಾನ್, ಶಿಖರ್ ಶೆಟ್ಟಿ, ಕೆಎಲ್ ಶ್ರೀಜಿತ್.



ಕ್ವಾರ್ಟರ್ ಫೈನಲ್ ಎದುರಾಳಿ ಯಾರು

ಪಂಜಾಬ್ ವಿರುದ್ಧದ ನಿರ್ಣಾಯಕ ಪಂದ್ಯದಲ್ಲಿ 5 ವಿಕೆಟ್‌ಗಳ ಜಯ ಸಾಧಿಸಿರುವ ಕರ್ನಾಟಕ ತಂಡವು ಕ್ವಾರ್ಟರ್ ಫೈನಲ್‌ಗೆ ಅರ್ಹತೆ ಪಡೆದುಕೊಂಡಿದೆ. ಅದರಂತೆ ಫೆಬ್ರವರಿ 6 ರಂದು ನಡೆಯಲಿರುವ ನಾಲ್ಕನೇ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಕರ್ನಾಟಕ ಹಾಗೂ ಮುಂಬೈ ತಂಡಗಳು ಮುಖಾಮುಖಿಯಾಗಲಿದೆ.

ಶಾರ್ದೂಲ್ ಠಾಕೂರ್ ಮುಂದಾಳತ್ವದ ಮುಂಬೈ ತಂಡದಲ್ಲೂ ಸ್ಟಾರ್ ಬ್ಯಾಟರ್‌ಗಳ ದಂಡೇ ಇದೆ. ಅದರಲ್ಲೂ ಟೆಸ್ಟ್ ಸ್ಪೆಷಲಿಸ್ಟ್‌ಗಳೆಂದೇ ಗುರುತಿಸಿಕೊಂಡಿರುವ ಸರ್ಫರಾಝ್ ಖಾನ್, ಯಶಸ್ವಿ ಜೈಸ್ವಾಲ್, ಸಿದ್ಧೇಶ್ ಲಾಡ್‌ನಂತಹ ದಾಂಡಿಗರು ಇರುವುದರಿಂದ ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಉಭಯ ತಂಡಗಳಿಂದ ಭರ್ಜರಿ ಪೈಪೋಟಿ ನಿರೀಕ್ಷಿಸಬಹುದು.

**ಮುಂಬೈ ತಂಡ:** ಶಾರ್ದೂಲ್ ಠಾಕೂರ್ (ನಾಯಕ), ಯಶಸ್ವಿ ಜೈಸ್ವಾಲ್, ಮುಶೀರ್ ಖಾನ್, ಅಖಿಲ್ ಹೆರ್ವಾಡ್ಕರ್, ಸಿದ್ಧೇಶ್ ಲಾಡ್, ಸರ್ಫರಾಝ್ ಖಾನ್, ಆಕಾಶ್ ಆನಂದ್ (ವಿಕೆಟ್ ಕೀಪರ್), ಹಾರ್ದಿಕ್ ತಮೋರ್ (ವಿಕೆಟ್ ಕೀಪರ್), ಸಾಯಿರಾಜ್ ಪಾಟೀಲ್, ಶಮ್ಸ್ ಮುಲಾನಿ, ತನುಷ್ ಕೋಟ್ಯಾನ್, ತುಷಾರ್ ದೇಶಪಾಂಡೆ, ಮೋಹಿತ್ ಅವಾಸ್ತ್. ಸೂರ್ಯಾಂಶ್ ಶೆಡ್ಗೆ, ದಿವ್ಯೇಶ್ ಸಕ್ಸೇನಾ.

# ಬರೋಬ್ಬರಿ 32 ಸ್ಥಾನ ಮೇಲೇರಿದ ಕಿಶನ್



ಜಾರಿದ ಸಂಜು ಸ್ಯಾಮ್ಸನ್


ಟಿ20 ವಿಶ್ವಕಪ್‌ಗೆ ತಂಡಗಳು ಸಿದ್ಧಗೊಳ್ಳುತ್ತಿರುವಾಗ, ಐಸಿಸಿ ಹೊಸ ರ್‍ಯಾಂಕಿಂಗ್ ಪಟ್ಟಿ ಬಿಡುಗಡೆ ಮಾಡಿದೆ. ನ್ಯೂಜಿಲೆಂಡ್ ವಿರುದ್ಧ ಉತ್ತಮ ಪ್ರದರ್ಶನ ನೀಡಿದ ಇಶಾನ್ ಕಿಶನ್ ಮತ್ತು ಸೂರ್ಯಕುಮಾರ್ ಯಾದವ್ ಭರ್ಜರಿ ಮುಂಬಡ್ತಿ ಪಡೆದಿದ್ದಾರೆ. ಅಭಿಷೇಕ್ ಶರ್ಮಾ ಅಗ್ರಸ್ಥಾನದಲ್ಲೇ ಮುಂದುವರಿದಿದ್ದು, ವರುಣ್ ಚಕ್ರವರ್ತಿ ಬೌಲಿಂಗ್‌ನಲ್ಲಿ ನಂ.1 ಸ್ಥಾನ ಕಾಯ್ದುಕೊಂಡಿದ್ದಾರೆ. ಕಳಪೆ ಪ್ರದರ್ಶನ ನೀಡಿದ ಆಟಗಾರರು ಕುಸಿತ ಕಂಡಿದ್ದಾರೆ.

ಟಿ20 ವಿಶ್ವಕಪ್‌ಗೆ ಎಲ್ಲಾ ತಂಡಗಳು ತಯಾರಿ ನಡೆಸುತ್ತಿರುವ ನಡುವೆ ಐಸಿಸಿ ನೂತನ ಟಿ20 ರ್‍ಯಾಂಕಿಂಗ್ ಪಟ್ಟಿಯನ್ನು ಬಿಡುಗಡೆ ಮಾಡಿದೆ. ಈ ಪಟ್ಟಿಯಲ್ಲಿ ನ್ಯೂಜಿಲೆಂಡ್ ವಿರುದ್ಧದ ಟಿ20 ಸರಣಿಯಲ್ಲಿ ಅಮೋಘ ಪ್ರದರ್ಶನ ನೀಡಿದ್ದ ಟೀಂ ಇಂಡಿಯಾದ ಬ್ಯಾಟ್ಸ್‌ಮನ್ ಭರ್ಜರಿ ಮುಂಬಡ್ತಿ ಪಡೆದಿದ್ದರೆ, ಕಳಪೆ ಪ್ರದರ್ಶನ ನೀಡಿದ್ದ ಆಟಗಾರರು ಕುಸಿತ ಕಂಡಿದ್ದಾರೆ.

ತಿಲಕ್ ವರ್ಮಾ ಇಂಜುರಿಯಿಂದಾಗಿ ನ್ಯೂಜಿಲೆಂಡ್ ವಿರುದ್ಧದ ಟಿ20 ಸರಣಿಯಲ್ಲಿ ಆಡಲು ಅವಕಾಶ ಪಡೆದಿದ್ದ ಇಶಾನ್ ಕಿಶನ್ 1 ಶತಕ ಹಾಗೂ 1 ಅರ್ಧಶತಕದ ಇನ್ನಿಂಗ್ಸ್ ಆಡಿದರು. ಇದರ ಫಲವಾಗಿ ಟಿ20 ಬ್ಯಾಟ್ಸ್‌ಮನ್‌ಗಳ ರ್‍ಯಾಂಕಿಂಗ್‌ನಲ್ಲಿ ಕಿಶನ್ ಬರೋಬ್ಬರಿ 32 ಸ್ಥಾನ ಮೇಲೇರಿದ್ದು, ಇದೀಗ 32ನೇ ಸ್ಥಾನಕ್ಕೆ ಬಂದಿದ್ದಾರೆ. ಉಳಿದಂತೆ ಅಭಿಷೇಕ್ ಶರ್ಮಾ ಅಗ್ರಸ್ಥಾನದಲ್ಲಿ ಮುಂದುವರೆದಿದ್ದಾರೆ. ಕಿವೀಸ್ ವಿರುದ್ಧದ ಸರಣಿಯಲ್ಲಿ ತಮ್ಮ ಹಳೆಯ ಫಾರ್ಮ್ ಕಂಡುಕೊಂಡಿದ್ದ ನಾಯಕ ಸೂರ್ಯಕುಮಾರ್ ಯಾದವ್ ಕೂಡ ಟಿ20 ರ್‍ಯಾಂಕಿಂಗ್‌ನಲ್ಲಿ ಮುಂಬಡ್ತಿ ಪಡೆದಿದ್ದರೆ, ಆಡಿದ ಐದು ಪಂದ್ಯಗಳಲ್ಲಿ ಕಳಪೆ ಪ್ರದರ್ಶನ ನೀಡಿದ್ದ ಸಂಜು ಸ್ಯಾಮ್ಸನ್ ಕುಸಿತ ಕಂಡಿದ್ದಾರೆ. ಕಳೆದ ವಾರ 51 ನೇ ಸ್ಥಾನದಲ್ಲಿದ್ದ ಸಂಜು ಈಗ 56 ನೇ ಸ್ಥಾನಕ್ಕೆ ಕುಸಿದಿದ್ದಾರೆ. ಅಭಿಷೇಕ್ ಶರ್ಮಾ ಟಿ20 ಶ್ರೇಯಾಂಕದಲ್ಲಿ ತಮ್ಮ ಪ್ರಾಬಲ್ಯವನ್ನು ಕಾಯ್ದುಕೊಂಡಿದ್ದು, 917 ರೇಟಿಂಗ್ ಅಂಕಗಳೊಂದಿಗೆ ಅಗ್ರಸ್ಥಾನದಲ್ಲಿದ್ದಾರೆ. ಆದಾಗ್ಯೂ, ತಿಲಕ್ ವರ್ಮಾ ಒಂದು ಸ್ಥಾನ ಕುಸಿದು ನಾಲ್ಕನೇ ಸ್ಥಾನಕ್ಕೆ ಇಳಿದಿದ್ದಾರೆ. ಸೂರ್ಯಕುಮಾರ್ ಯಾದವ್ ಏಳನೇ ಸ್ಥಾನದಿಂದ ಆರನೇ ಸ್ಥಾನಕ್ಕೆ ಜಿಗಿತ ಕಂಡಿದ್ದಾರೆ. ಶಿವಂ ದುಬೆ ಕೂಡ 17 ಆಟಗಾರರನ್ನು ಹಿಂದಿಕ್ಕಿ 41ನೇ ಸ್ಥಾನಕ್ಕೆ ತಲುಪಿದ್ದಾರೆ.

ಬೌಲರ್‌ಗಳ ರ್‍ಯಾಂಕಿಂಗ್ ಪಟ್ಟಿಯಲ್ಲಿ, ವರುಣ್ ಚಕ್ರವರ್ತಿ ನಂ. 1 ಸ್ಥಾನದಲ್ಲಿ ಮುಂದುವರೆದಿದ್ದಾರೆ. ಪಾಕಿಸ್ತಾನಿ ಸ್ಪಿನ್ನರ್ ಅಬ್ರಾರ್ ಅಹ್ಮದ್ ಇಬ್ಬರು ಬೌಲರ್‌ಗಳನ್ನು ಹಿಂದಿಕ್ಕಿ ಎರಡನೇ ಸ್ಥಾನವನ್ನು ಪಡೆದುಕೊಂಡಿದ್ದಾರೆ. ಆದಾಗ್ಯೂ ಅಬ್ರಾರ್ ಅಹ್ಮದ್ ಮತ್ತು ವರುಣ್ ಚಕ್ರವರ್ತಿ ಅವರ ರೇಟಿಂಗ್ ಅಂಕಗಳ ನಡುವಿನ ವ್ಯತ್ಯಾಸ ಕೇವಲ 28 ಆಗಿರುವುದರಿಂದ ವರುಣ್ ಮೊದಲ ಸ್ಥಾನವನ್ನು ಕಳೆದುಕೊಳ್ಳುವ ಸಾಧ್ಯತೆಗಳಿವೆ.

# ಐಪಿಎಲ್‌ಗೆ ಕಮಿನ್ಸ್ ಡೌಟ್



ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-19 ಮಾರ್ಚ್ 26 ರಿಂದ ಶುರುವಾಗಲಿದೆ. ಈ ಟೂರ್ನಿಯಿಂದ ಆಸ್ಟ್ರೇಲಿಯಾ ತಂಡದ ಆಲ್‌ರೌಂಡರ್ ಹೊರಗುಳಿಯುವ ಸಾಧ್ಯತೆ ಹೆಚ್ಚಿದೆ. ಸನ್‌ರೈಸರ್ಸ್ ಹೈದರಾಬಾದ್ ತಂಡದ ಆಟಗಾರ ಫಿಟ್‌ನೆಸ್ ಸಮಸ್ಯೆಯಿಂದ ಬಳಲುತ್ತಿದ್ದು, ಹೀಗಾಗಿ ಐಪಿಎಲ್‌ನಲ್ಲಿ ಕಾಣಿಸಿಕೊಳ್ಳುವುದು ಅನುಮಾನ ಎನ್ನಲಾಗಿದೆ. ಟಿ20 ವಿಶ್ವಕಪ್ ಮುಕ್ತಾಯದ ಬೆನ್ನಲ್ಲೇ ಇಂಡಿಯನ್ ಪ್ರೀಮಿಯರ್ ಲೀಗ್ ಶುರುವಾಗಲಿದೆ. ಮಾರ್ಚ್ 26 ರಿಂದ ಆರಂಭವಾಗಲಿರುವ ಈ ಟೂರ್ನಿಯಲ್ಲಿ ಸನ್‌ರೈಸರ್ಸ್ ಹೈದರಾಬಾದ್ ತಂಡದ ನಾಯಕ ಪ್ಯಾಟ್ ಕಮಿನ್ಸ್ ಕಾಣಿಸಿಕೊಳ್ಳುವುದು ಅನುಮಾನ.

ಏಕೆಂದರೆ ಬೆನ್ನು ನೋವಿನ ಸಮಸ್ಯೆಯಿಂದ ಬಳಲುತ್ತಿರುವ ಪ್ಯಾಟ್ ಕಮಿನ್ಸ್ ಮುಂಬರುವ ಟಿ20 ವಿಶ್ವಕಪ್‌ನಿಂದ ಹೊರಗುಳಿದಿದ್ದಾರೆ. ಅಲ್ಲದೆ ಸಂಪೂರ್ಣ ಫಿಟ್ ಆದರೆ ಮಾತ್ರ ಇಂಡಿಯನ್ ಪ್ರೀಮಿಯರ್ ಲೀಗ್‌ನಲ್ಲಿ ಕಾಣಿಸಿಕೊಳ್ಳುವುದಾಗಿ ತಿಳಿಸಿದ್ದಾರೆ. ಐಪಿಎಲ್ ಆಡುವ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಪ್ಯಾಟ್ ಕಮಿನ್ಸ್, ಸದ್ಯಕ್ಕೆ ಏನನ್ನೂ ಹೇಳಲು ಸಾಧ್ಯವಿಲ್ಲ. ನಾನು ಇನ್ನೊಂದು ಸ್ಕ್ಯಾನಿಂಗ್‌ಗೆ ಒಳಗಾಗಬೇಕಿದೆ. ಇದಾದ ಬಳಿಕ ಚಿಕಿತ್ಸೆ ಮುಂದುವರೆಯಲಿದೆ. ಹೀಗಾಗಿ ಬೆನ್ನುಮೂಳೆಯ ಚೇತರಿಕೆಯ ಮೇಲೆ ನಾನು ಐಪಿಎಲ್‌ನಲ್ಲಿ ಭಾಗವಹಿಸುತ್ತೀನಾ ಅಥವಾ ಇಲ್ಲವೇ ಎಂಬುದು ಅವಲಂಬಿತವಾಗಿರುತ್ತದೆ ಎಂದು ತಿಳಿಸಿದ್ದಾರೆ. ಇದಾಗ್ಯೂ ಮಾರ್ಚ್ ಅಂತ್ಯದ ವೇಳೆಗೆ ಪ್ಯಾಟ್ ಕಮಿನ್ಸ್ ಸಂಪೂರ್ಣ ಫಿಟ್‌ನೆಸ್ ಸಾಧಿಸುವ ವಿಶ್ವಾಸದಲ್ಲಿದ್ದಾರೆ.

ಅದರಂತೆ ಐಪಿಎಲ್ ಆರಂಭಕ್ಕೂ ಮುನ್ನ ಸಂಪೂರ್ಣವಾಗಿ ಚೇತರಿಸಿಕೊಂಡರೆ ಮಾತ್ರ ಕಮಿನ್ಸ್‌ಗೆ ಐಪಿಎಲ್ ಆಡಲು ಕ್ರಿಕೆಟ್ ಆಸ್ಟ್ರೇಲಿಯಾ ಅನುಮತಿ ನೀಡಲಿದೆ. ಹೀಗಾಗಿ ಪ್ಯಾಟ್ ಕಮಿನ್ಸ್ ಐಪಿಎಲ್ ಆಡುವುದು ಖಚಿತವಾಗಲು ಮುಂದಿನ ತಿಂಗಳವರೆಗೆ ಕಾಯಬೇಕು.

**ಹೈದರಾಬಾದ್ ತಂಡ:** ಪ್ಯಾಟ್ ಕಮ್ಮಿನ್ಸ್ (ನಾಯಕ), ಟ್ರಾವಿಸ್ ಹೆಡ್, ಅಭಿಷೇಕ್ ಶರ್ಮಾ, ಅನಿಕೇತ್ ವರ್ಮಾ, ಸ್ಮರಣ್ ರವಿಚಂದ್ರನ್, ಇಶಾನ್ ಕಿಶನ್, ಹೆನ್ರಿಕ್ ಕ್ಲಾಸೆನ್, ನಿತೀಶ್ ಕುಮಾರ್ ರೆಡ್ಡಿ, ಹರ್ಷ್ ದುಬೆ, ಕಮಿಂದು ಮೆಂಡಿಸ್, ಹರ್ಷಲ್ ಪಟೇಲ್, ಬ್ರೈಡನ್ ಕಾರ್ಸ್, ಜಯದೇವ್ ಉನದ್ಕತ್, ಎಶಾನ್ ಮಾಲಿಂಗ, ಝೀಶನ್ ಅನ್ಸಾರಿ, ಸಲೀಲ್ ಅರೋರ, ಶಿವಾಂಗ್ ಕುಮಾರ್, ಶಾಕಿಬ್ ಹುಸೈನ್, ಅಮಿತ್ ಕುಮಾರ್, ಕ್ರೇನ್ಸ್ ಫುಲೆಟ್ರಾ, ಪ್ರಫುಲ್ ಹಿಂಗೆ, ಶಿವಂ ಮಾವಿ, ಲಿಯಾಮ್ ಲಿವಿಂಗ್

# ಆರ್‌ಸಿಬಿ ತಂಡ ಮಾರಾಟಕ್ಕಿದೆ



ಕೋಟಿಗಟ್ಟಲೆ ಇದ್ದರೆ ಖರೀದಿಸಿ

ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿಯು ಡಿಯಾಜಿಯೋ ಕಂಪೆನಿಯ ಒಡೆತನದಲ್ಲಿದೆ. ಬ್ರಿಟನ್ ಮೂಲದ ಡಿಯಾಜಿಯೋ ತನ್ನ ಭಾರತೀಯ ಘಟಕವಾದ ಯುನೈಟೆಡ್ ಸ್ಪಿರಿಟ್ಸ್ ಲಿಮಿಟೆಡ್ ಎಂಬ ಆಲ್ಕೋಹಾಲ್ ಕಂಪನಿಯ ಮೂಲಕ ಆರ್‌ಸಿಬಿ ಫ್ರಾಂಚೈಸಿಯನ್ನು ಹೊಂದಿದೆ. ಇದೀಗ ಡಿಯಾಜಿಯೋ ಕಂಪೆನಿಯು ಆರ್‌ಸಿಬಿ ಫ್ರಾಂಚೈಸಿಯನ್ನು ಮಾರಾಟ ಮಾಡಲು ಮುಂದಾಗಿದ್ದಾರೆ.

ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ ಮಾರಾಟಕ್ಕೆ ಡಿಯಾಜಿಯೋ ಕಂಪೆನಿ ಮುಂದಾಗಿದೆ. ಈ ಮಾರಾಟ ಪ್ರಕ್ರಿಯೆಗೆ ಅಧಿಕೃತ ಚಾಲನೆ ನೀಡಲಾಗಿದ್ದು, ಆರ್‌ಸಿಬಿ ಫ್ರಾಂಚೈಸಿಯ ಮೌಲ್ಯ ಸುಮಾರು 2 ಬಿಲಿಯನ್ ಡಾಲರ್ ಎಂದು ಘೋಷಿಸಲಾಗಿದೆ. ಅಂದರೆ ಭಾರತೀಯ ರೂಪಾಯಿ ಮೌಲ್ಯ ಸುಮಾರು 18,000 ಕೋಟಿ ರೂ. ಅದರಂತೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿಯ ಬಿಡ್ಡಿಂಗ್ ಸುಮಾರು 18 ಸಾವಿರ ಕೋಟಿ ರೂ.ನಿಂದ ಶುರುವಾಗಲಿದೆ. ಕೆಲ ಉದ್ಯಮಿಗಳು ಆರ್‌ಸಿಬಿ ತಂಡದ ಖರೀದಿಗೆ ಆಸಕ್ತಿ ತೋರಿದ್ದು, ಹೀಗಾಗಿ ಈ ಮೊತ್ತವು ಮತ್ತಷ್ಟು ಏರಿಕೆಯಾಗುವುದರಲ್ಲಿ ಅನುಮಾನವೇ ಇಲ್ಲ. ಝೆರೋಧಾ ಕಂಪೆನಿಯ ಸಹ-ಸಂಸ್ಥಾಪಕ ನಿಖಿಲ್ ಕಾಮತ್ ಮತ್ತು ಮಣಿಪಾಲ್ ಶಿಕ್ಷಣ ಮತ್ತು ವೈದ್ಯಕೀಯ ಸಂಸ್ಥೆಯ ಅಧ್ಯಕ್ಷ ರಂಜನ್ ಪೈ ಜೊತೆಗೂಡಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ ಖರೀದಿಗೆ ಆಸಕ್ತಿ ತೋರಿದ್ದಾರೆ ಈ ಹಿಂದೆ ವರದಿಯಾಗಿತ್ತು.

ಅತ್ತ ಸೀರಮ್ ಇನ್ಸ್ಟಿಟ್ಯೂಟ್ ಆಫ್ ಇಂಡಿಯಾದ ಸಿಇಒ ಆದಾರ್ ಪೂನವಾಲ ಕೂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿಯ ಖರೀದಿಗೆ ಆಸಕ್ತಿ ಹೊಂದಿದ್ದಾರೆ. ಮತ್ತೊಂದೆಡೆ ಡೆಲ್ಲಿ ಕ್ಯಾಪಿಟಲ್ಸ್ ಫ್ರಾಂಚೈಸಿಯ ಸಹ ಮಾಲೀಕರಾದ ಪಾರ್ಥ್ ಜಿಂದಾಲ್ ಕೂಡ ಆರ್‌ಸಿಬಿ ಮೇಲೆ ಕಣ್ಣಿಟ್ಟಿದ್ದಾರೆ. ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿಗಾಗಿ ಅವರ ಜೆಎಸ್‌ಡಬ್ಲ್ಯು ಗ್ರೂಪ್ ಬಿಡ್ ಮಾಡಲಿದೆ ಎಂದು ತಿಳಿದು ಬಂದಿದೆ. ಇನ್ನೊಂದೆಡೆ ಅದಾನಿ ಗ್ರೂಪ್ ಕೂಡ ಆರ್‌ಸಿಬಿ ಫ್ರಾಂಚೈಸಿಯನ್ನು ಖರೀದಿಸಿ ಇಂಡಿಯನ್ ಪ್ರೀಮಿಯರ್ ಲೀಗ್‌ಗೆ ಎಂಟ್ರಿ ಕೊಡಲು ಪ್ಲ್ಯಾನ್ ರೂಪಿಸುತ್ತಿದೆ. ಹೀಗಾಗಿ ಅದಾನಿ ಗ್ರೂಪ್ ಕಡೆಯಿಂದ ಬಿಡ್ಡಿಂಗ್‌ನಲ್ಲಿ ಪೈಪೋಟಿ ಎದುರಾಗಲಿದೆ.ಈ ಉದ್ಯಮಿಗಳಲ್ಲದೆ ದೇವಯಾನಿ ಇಂಟರ್‌ನ್ಯಾಷನಲ್ ಗ್ರೂಪ್ ಕೂಡ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿಯ ಖರೀದಿಗೆ ಆಸಕ್ತಿ ತೋರಿದೆ. ಹಾಗೆಯೇ ಅಮೆರಿಕದ ಪ್ರೈವೆಟ್ ಇನ್‌ವೆಸ್ಟ್‌ಮೆಂಟ್ ಕಂಪೆನಿಯೊಂದು ಕೂಡ ಆರ್‌ಸಿಬಿ ಫ್ರಾಂಚೈಸಿ ಖರೀದಿಗಾಗಿ ಡಿಯಾಜಿಯೊ ಕಂಪೆನಿ ಜೊತೆ ಮಾತುಕತೆ ನಡೆಸಿದೆ ಎಂದು ವರದಿಯಾಗಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966